22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 268 | ನವದೆಹಲಿ | ಬೆಲೆ ₹ 10 | ಏಪ್ರಿಲ್ 3, 2025, ಗುರುವಾರ

## ಒಳಪುಟಗಳಲ್ಲಿ

ವಕ್ಫ್ ಮಸೂದೆ ಸಂವಿಧಾನ ದುರ್ಬಲಗೊಳಿಸುವ ಯತ್ನ: ಗೌರವ್ ಗೊಗೊಯ್- ಪು.4

ಮುಡಾ ಹಗರಣ ಆರೋಪ ಪ್ರಕರಣ

ಆರೋಪಿಗಳ ವಿರುದ್ಧ ತನಿಖೆಗೆ ವಿಭಾಗೀಯ ಪೀಠ ಗ್ರೀನ್ ಸಿಗ್ನಲ್- ಪು.5

ಯಾರ ಕೈಕಾಲು ಕೂಡ ಹಿಡಿಯಲ್ಲ, 2028ಕ್ಕೆ ನಾನೇ ಸಿಎಂ ಆಗುತ್ತೇನೆ: ಯತ್ನಾಳ್ - ಪು.6

ಸಮಾಜದ ಶಾಂತಿಗೆ ಪೊಲೀಸರ ಸೇವೆ ಶ್ಲಾಘನೀಯ-ಎಸ್‌ಪಿ ಡಾ.ಶೋಭಾರಾಣಿ ವಿ.ಜೆ -ಪು.7

# ನವದೆಹಲಿಯಲ್ಲಿ ಕರ್ನಾಟಕ ಭವನ -1 (ಕಾವೇರಿ) ನೂತನ ಕಟ್ಟಡ ಲೋಕಾರ್ಪಣೆ

**ನವದೆಹಲಿ, ಏ.2:** ಕರ್ನಾಟಕ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿರುವ ನವದೆಹಲಿಯಲ್ಲಿ ನಿರ್ಮಿಸಿರುವ ಕರ್ನಾಟಕ ಭವನ -1 (ಕಾವೇರಿ) ನೂತನ ಕಟ್ಟಡದ ಉದ್ಘಾಟನಾ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಸಂಜೆ ನೆರವೇರಿಸಿದರು. ಕಾರ್ಯಕ್ರಮದಲ್ಲಿ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸಿದ್ದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಮಾಜಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು,

ಲೋಕೋಪಯೋಗಿ ಇಲಾಖೆಯ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ನವದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–I ಟಿ.ಬಿ.ಜಯಚಂದ್ರ, ನವದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–II ಪ್ರಕಾಶ್ ಬಾಬಣ್ಣ ಹುಕ್ಕೇರಿ ಅವರು ಗೌರವಾನ್ವಿತ ಅತಿಥಿಗಳಾಗಿ ಭಾಗವಹಿಸಿದ್ದರು. ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಕಾರ್ಯಕ್ರಮದಲ್ಲಿ ಗಣ್ಯರನ್ನು ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸರ್ಕಾರದ ಪ್ರಧಾನ ಹಾಗೂ ಕಾರ್ಯದರ್ಶಿಗಳು ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದ್ದರು.



ದೆಹಲಿಯಲ್ಲಿ ನೂತನವಾಗಿ ನಿರ್ಮಿಸಿರುವ ಕರ್ನಾಟಕ ಭವನ–1ರ ಕಟ್ಟಡವನ್ನು ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಉಪಸ್ಥಿತಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಾರ್ಪಣೆ ಮಾಡಿದರು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಸತೀಶ್ ಜಾರಕಿಹೊಳಿ, ಡಾ. ಮಹಾದೇವಪ್ಪ, ರಾಜಣ್ಣ, ಕೆ.ಎಚ್. ಮುನಿಯಪ್ಪ ಮತ್ತಿತರರು ಹಾಜರಿದ್ದರು.

### ಪಂಚತಾರ ಹೋಟೆಲ್‌ನಂತೆ ಕಂಗೊಳಿಸಿದ ಕರ್ನಾಟಕ ಭವನ-1 (ಕಾವೇರಿ)

ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ನವದೆಹಲಿಯಲ್ಲಿ ನಿರ್ಮಾಣಗೊಂಡಿರುವ ಕರ್ನಾಟಕ ಭವನದ ನೂತನ ಕಚೇರಿ ಕಾವೇರಿಯನ್ನು ಉದ್ಘಾಟಿಸಿದರು. ಈ ಭವನವು ಪಂಚತಾರ ಹೋಟೆಲ್‌ಗಿಂತ ಏನೇನೂ ಕಡಿಮೆ ಇಲ್ಲ, ಎಲ್ಲ ಆರು ಮಹಡಿಗಳ ಕೋಣೆಗಳ ಒಳಾಂಗಣ ಅತ್ಯಂತ ಆಕರ್ಷಣೀಯವೂ, ನವೀನ ರೀತಿಯಲ್ಲಿ ಅದ್ಭುತವಾಗಿಯೂ ನಿರ್ಮಾಣಗೊಂಡಿದೆ.

ಈ ರೀತಿ ಕಟ್ಟಡದ ನಿರ್ಮಾಣದಲ್ಲಿ ಭಾಗಿಯಾದ ಬೆಂಗಳೂರಿನ ಹೆಸರಾಂತ ಇಂಜಿನಿಯರ್ಸ್ ಮತ್ತು ಕಂಟ್ರಾಕ್ಟರ್ಸ್ ಆದ ಬಾಲಾಜಿ ಕೃಪಾ ಪ್ರಾಜೆಕ್ಟ್‌ನವರಿಗೂ ಅಭಿನಂದನೆ ಸಲ್ಲಿಸಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿಯವರ ಅವಧಿಯಲ್ಲೇ ನಿರ್ಮಾಣಗೊಂಡ ಅತ್ಯದ್ಭುತ ಕಟ್ಟಡ ಅವಿಸ್ಮರಣೀಯ ಮತ್ತು ಶ್ಲಾಘನೀಯ ವಿಷಯವಾಗಿದೆ ಎಂದು ಕರ್ನಾಟಕದ ಭವನದ ಸಿಬ್ಬಂದಿ ಶ್ಲಾಘಿಸಿದ್ದಾರೆ.

## ಕರ್ನಾಟಕ ಭವನ-1 (ಕಾವೇರಿ)ಕಟ್ಟಡ ಮಲ್ಲಿಕಾರ್ಜುನ ಖರ್ಗೆ ಮತ್ತು ಸಿದ್ದರಾಮಯ್ಯ ಅವರಿಂದ ಉದ್ಘಾಟನೆ.







# ವಕ್ಫ್ ಮಸೂದೆಗೆ ಲೋಕಸಭೆ ಅಸ್ತು

**ನವದೆಹಲಿ, ಏ.2:** ಪ್ರತಿಪಕ್ಷಗಳ ತೀವ್ರ ವಿರೋಧದ ನಡುವೆ ವಿವಾದಾತ್ಮಕ ವಕ್ಫ್ ತಿದ್ದುಪಡಿ ಮಸೂದೆಗೆ ಲೋಕಸಭೆಯ ಅಂಗೀಕಾರ ಪಡೆಯುವಲ್ಲಿ ಎನ್‌ಡಿಎ ಸರ್ಕಾರ ಯಶಸ್ವಿಯಾಗಿದೆ.

12ಗಂಟೆಗಳ ಸುದೀರ್ಘ ಚರ್ಚೆಯ ಬಳಿಕ ಬುಧವಾರ ಮಧ್ಯರಾತ್ರಿಯ ನಂತರ ಸ್ಪೀಕರ್ ಓಂ ಬಿರ್ಲಾ ಮಸೂದೆ ಕುರಿತು ಮತದಾನಕ್ಕೆ ಅವಕಾಶ ಕೊಟ್ಟರು. ಮಸೂದೆ ಪರ 288 ಸದಸ್ಯರು ಮತಚಲಾಯಿಸಿದರೆ, ವಿರುದ್ಧವಾಗಿ 232 ಮಂದಿ ಮತ ಹಾಕಿದರು. ಆದರೆ ಪ್ರಧಾನಿ ಮೋದಿ ಮತದಾನದ ವೇಳೆ ಗೈರುಹಾಜರಾಗಿದ್ದರು. ಬಿಜೆಪಿ ನೇತೃತ್ವದ ಎನ್‌ಡಿಎ ಮಿತ್ರ ಪಕ್ಷಗಳು ಮತ್ತು ಇಂಡಿಯಾ ಕೂಟದ ಪ್ರತಿಪಕ್ಷಗಳು ತಮ್ಮ ಸಂಸದರಿಗೆ ಮತದಾನದಲ್ಲಿ ಪಾಲ್ಗೊಳ್ಳುವಂತೆ ವಿಪ್ ಜಾರಿಗೊಳಿಸಿದ್ದವು. ಲೋಕಸಭೆಯಲ್ಲಿ ಅಂಗೀಕಾರಗೊಂಡ ಮಸೂದೆಯನ್ನು ರಾಜ್ಯಸಭೆಗೆ ಕಳುಹಿಸಲಾಗಿದೆ. ಗುರುವಾರ ರಾಜ್ಯಸಭೆಯಲ್ಲಿ ವಕ್ಫ್ ತಿದ್ದುಪಡಿ ಮಸೂದೆ ಕುರಿತು ಎಂಟು ಗಂಟೆಗಳ ಚರ್ಚೆ ನಿಗದಿಯಾಗಿದೆ.

ಇದಕ್ಕೂ ಮುನ್ನ ಮಸೂದೆ ಮೇಲಿನ ಚರ್ಚೆ ವೇಳೆ ಎನ್‌ಡಿಎ–ಇಂಡಿಯಾ ಒಕ್ಕೂಟದ ಪಕ್ಷಗಳ ನಡುವೆ ಜಟಾಪಟಿ ನಡೆಯಿತು. ಕಾಂಗ್ರೆಸ್, ಟಿಎಂಸಿ, ಡಿಎಂಕೆ, ಆರ್‌ಜೆಡಿ, ಎಸ್‌ಪಿ ಸೇರಿದಂತೆ ಪ್ರತಿಪಕ್ಷಗಳ ಸದಸ್ಯರು ಮಸೂದೆಯನ್ನು ತೀವ್ರವಾಗಿ ವಿರೋಧಿಸಿ ಮುಸ್ಲಿಂ ಸಮುದಾಯದ ಮೇಲೆ ಕೇಂದ್ರ ಪ್ರಹಾರಕ್ಕೆ ಮುಂದಾಗಿದೆ ಎಂದು ಟೀಕಿಸಿದರು. ಆದರೆ ಕೇಂದ್ರ ಸಚಿವ ಕಿರಣ ರಿಜಿಜು ಸೇರಿಂದತೆ ಎನ್‌ಡಿಎ ಪಕ್ಷಗಳ ನಾಯಕರು ವಕ್ಫ್ ತಿದ್ದುಪಡಿ ಮಸೂದೆಯನ್ನು ಬಲವಾಗಿ ಸಮರ್ಥಿಸಿಕೊಂಡರು, ಸಾರ್ವಜನಿಕ ಆಸ್ತಿಪಾಸ್ತಿಗಳ ಮೇಲಿನ ದುರುಪಯೋಗವನ್ನು ಇದರಿಂದ ತಪ್ಪಿಸಬಹುದೆಂದು ತಿರುಗೇಟು ನೀಡಿದರು.

ವಿವಾದಾತ್ಮಕ ವಕ್ಫ್ (ತಿದ್ದುಪಡಿ) ಮಸೂದೆ, 2024 ಅನ್ನು ಕೇಂದ್ರ ಸರ್ಕಾರ ಬುಧವಾರ (ಏ.2) ಲೋಕಸಭೆಯಲ್ಲಿ ಮಂಡಿಸಿತು. ನಿರೀಕ್ಷೆಯಂತೆ ಮಸೂದೆ ಮಂಡನೆ ವೇಳೆಯೇ ಪ್ರತಿಪಕ್ಷಗಳ ಸದಸ್ಯರು ಘೋಷಣೆಗಳನ್ನು ಕೂಗಿ ವಿರೋಧ ವ್ಯಕ್ತಪಡಿಸಿದರು.

ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಮತ್ತು ವಿರೋಧ ಪಕ್ಷಗಳ ಇಂಡಿಯಾ ಒಕ್ಕೂಟದ ನಡುವೆ ವಾಗ್ವಾದಕ್ಕೆ ಈ ಮಸೂದೆ ಕಾರಣವಾಯಿತು. ಪ್ರತಿಪಕ್ಷಗಳು ಮಸೂದೆಯನ್ನು ಅಸಂವಿಧಾನಿಕ ಎಂದಿದೆ. 1995ರ ವಕ್ಫ್ ಕಾಯ್ದೆಗೆ ಹೊಸ ಮಸೂದೆ ತಿದ್ದುಪಡಿಗಳನ್ನು ತರಲಿದೆ. ಮಸೂದೆ ಮಂಡಿಸಿದ ಕೇಂದ್ರ ಸಂಸದೀಯ ವ್ಯವಹಾರ ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸರ್ಕಾರ ಯಾವುದೇ ಧಾರ್ಮಿಕ ಸಂಸ್ಥೆಯಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಲೋಕಸಭೆಯಲ್ಲಿ ಮಸೂದೆ ಮೇಲೆ 12 ಗಂಟೆಗಳ ಕಾಲ ಚರ್ಚೆ ನಡೆಯಿತು. ಮಧ್ಯರಾತ್ರಿಯ ನಂತರ ಸದನ ಮಸೂದೆಯನ್ನು ಅಂಗೀಕರಿಸಿದೆ. ಗುರುವಾರ ರಾಜ್ಯಸಭೆಯಲ್ಲಿ 8 ಗಂಟೆಗಳ ಕಾಲ ಚರ್ಚೆ ನಡೆದ ಬಳಿಕ ಅಂಗೀಕೃತಗೊಂಡರೆ ಕಾಯಿದೆಯಾಗಿ ಮಾರ್ಪಡಲಿದೆ.

### ವಕ್ಫ್ ಮಸೂದಿ UMEED ವಿಧೇಯಕ ಎಂದು ಮರುನಾಮಕರಣ: ಕಿರಣ್ ರಿಜಿಜು

ನವದೆಹಲಿ, ಏ.2: ಲೋಕಸಭೆಯಲ್ಲಿ ವಕ್ಫ್(ತಿದ್ದುಪಡಿ) ಮಸೂದೆ ಮಂಡಿಸಿ ಮಾತನಾಡಿದ ಕಿರಣ್ ರಿಜಿಜು ಅವರು, "ವಕ್ಫ್ ಮಸೂದೆಯನ್ನು ಏಕೀಕೃತ ವಕ್ಫ್ ನಿರ್ವಹಣಾ ಸಬಲೀಕರಣ, ದಕ್ಷತೆ ಮತ್ತು ಅಭಿವೃದ್ಧಿ ಮಸೂದೆ ಎಂದು ಮರುನಾಮಕರಣ ಮಾಡಲಾಗುವುದು" ಎಂದರು.

ಈ ಮಸೂದೆಯು ವಕ್ಫ್ ಆಸ್ತಿಗಳ ಆಡಳಿತವನ್ನು ಸುಧಾರಿಸಲು, ತಂತ್ರಜ್ಞಾನ ಆಧಾರಿತ ನಿರ್ವಹಣೆಯನ್ನು ಪರಿಚಯಿಸಲು, ಸಂಕೀರ್ಣತೆಗಳನ್ನು ಪರಿಹರಿಸಲು ಮತ್ತು ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು ಪ್ರಯತ್ನಿಸುತ್ತದೆ. ಜಂಟಿ ಸಂಸದೀಯ ಸಮಿತಿಯ (ಜೆಪಿಸಿ) ನಡೆಸಿದ ಸಮಾಲೋಚನಾ ಪ್ರಕ್ರಿಯೆಯು ಭಾರತದ ಪ್ರಜಾಪ್ರಭುತ್ವ ಇತಿಹಾಸದಲ್ಲಿಯೇ ಅತಿದೊಡ್ಡ ಪ್ರಕ್ರಿಯೆಯಾಗಿದೆ ಎಂದರು.

"ಭಾರತವು ವಿಶ್ವದಲ್ಲೇ ಅತಿ ಹೆಚ್ಚು ವಕ್ಫ್ ಆಸ್ತಿಗಳನ್ನು ಹೊಂದಿದೆ. ವಕ್ಫ್ ಮಸೂದೆ ಬೆಂಬಲಿಸುವ ಮತ್ತು ವಿರೋಧಿಸುವವರನ್ನು ದೇಶ ಯುಗಯುಗಾಂತರಗಳಿಂದ ನೆನಪಿಸಿಕೊಳ್ಳುತ್ತದೆ. 70 ವರ್ಷಗಳಿಂದ ಮತ ಬ್ಯಾಂಕ್ ರಾಜಕೀಯಕ್ಕಾಗಿ ಮುಸ್ಲಿಮರನ್ನು ದಾರಿ ತಪ್ಪಿಸಲಾಯಿತು; ನೀವು ಅವರನ್ನು ಎಷ್ಟು ದಿನ ದಾರಿ ತಪ್ಪಿಸಲು ಬಯಸುತ್ತೀರಿ. ವಕ್ಫ್ ಆಸ್ತಿಯನ್ನು ಬಡ ಮುಸ್ಲಿಮರಿಗಾಗಿ ಬಳಸಬೇಕು, ಈ ಉದ್ದೇಶವನ್ನು ಸಾಧಿಸಲು ವಕ್ಫ್ ಮಸೂದೆ ಅಗತ್ಯವಿದೆ" ಎಂದರು.

# ಕರ್ನಾಟಕದ ಹೆದ್ದಾರಿ ಯೋಜನೆ ಕೇಂದ್ರ ಸಚಿವ ಗಡ್ಕರಿಗೆ ಸಿಎಂ ಮನವಿ

**ರಾಜ್ಯದ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಪೂರಕ ಪ್ರಸ್ತಾವನೆಗಳನ್ನು ಮಂಜೂರು ಮಾಡಲು ಮನವಿ**



**ನವದೆಹಲಿ, ಏ.2:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿಯವರನ್ನು ಭೇಟಿಯಾಗಿ ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳ ಸಂಪರ್ಕದ ಬಗ್ಗೆ ಚರ್ಚೆ ನಡೆಸಿದರು. ಇದಲ್ಲದೇ ಹಲವು ಯೋಜನೆಗಳಿಗೆ ಅನುಮೋದನೆ ನೀಡುವಂತೆ ಮನವಿ ಮಾಡಿದರು.

ಕರ್ನಾಟಕ ಭವನದ ಉದ್ಘಾಟನೆ ಆಗಮಿಸಿದ ಅವರು, ಗಡ್ಕರಿ ಅವರನ್ನು ಭೇಟಿಯಾದರು.ರಾಷ್ಟ್ರೀಯ ಹೆದ್ದಾರಿ 275 ರಲ್ಲಿ ಮಣಿಪಾಲ್ ಆಸ್ಪತ್ರೆ ಜಂಕ್ಷನ್ (ಮೈಸೂರು ನಗರ)ದಲ್ಲಿ ಫ್ಲೈಓವರ್ ನಿರ್ಮಾಣ. 30.35 ಕಿ.ಮೀ. ಉದ್ದದ ಹುಬ್ಬಳ್ಳಿ ಧಾರವಾಡ ಅಷ್ಟಪಥ ಬೈಪಾಸ್ ನಿರ್ಮಾಣ, ರಾ.ಹೆ 369 ಇ( ಸಿಗಂದೂರು ಸೇತುವೆ) ರಲ್ಲಿ ಶರಾವತಿ ಹಿನ್ನೀರಿನ ಮೇಲೆ ಪ್ರಮುಖ ಸೇತುವೆ ನಿರ್ಮಾಣ. ರಾ.ಹೆ.167 ಹಗರಿ–ಜೆಡ್‌ಚೆರ್ಲಾ ಸೆಕ್ಷನ್ ನಲ್ಲಿ ಕೃಷ್ಣಾ ನದಿ ಮೇಲೆ 180.865 ಕಿ.ಮೀ.ನಲ್ಲಿ ಪ್ರಮುಖ ಸೇತುವೆ ನಿರ್ಮಾಣ. ಹೊಸಪೇಟೆ ಯಿಂದ ಬಳ್ಳಾರಿ ಸೆಕ್ಷನ್‌ನ ಹಳೆಯ ರಾ.ಹೆ–63(ಹೊಸ ರಾ.ಹೆ–67) ನ ಕಿ.ಮಿ.340+640 (ಬಳ್ಳಾರಿ ನಗರ ಮಿತಿಯಲ್ಲಿನ ಸುಧಾ ಕ್ರಾಸ್) ನಲ್ಲಿ ಐಅ–110ಇ ಬದಲಿಗೆ 2–ಲೇನ್ ಖಔಃ ನಿರ್ಮಾಣ. ರಾ.ಹೆ.150ಎ ರಲ್ಲಿನ ಸಿಂದಿಗೇರಿ–ಬಳ್ಳಾರಿ ಸೆಕ್ಷನ್ನ ಕಿ.ಮೀ.235.00 ರಿಂದ 254.800ವರೆಗೆ Two Lane with Paved Shoulders ಗೆ ಅಗಲೀಕರಣ ಯೋಜನೆಗೆ ಮನವಿ ಮಾಡಿದರು.

ಕರ್ನಾಟಕ ಸರ್ಕಾರವು ರಾಜ್ಯದ ರಾಷ್ಟ್ರೀಯ ಹೆದ್ದಾರಿ ಸಂಪರ್ಕ ಜಾಲದ ಅಭಿವೃದ್ಧಿಯನ್ನು ಬೆಂಬಲಿಸುತ್ತಿದ್ದು, ರಸ್ತೆ ನಿರ್ಮಾಣಕ್ಕೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆಗಳನ್ನು ಚುರುಕುಗೊಳಿಸಲು ಕಂದಾಯ ಇಲಾಖೆಯೊಂದಿಗೆ ಹಾಗೂ ಅರಣ್ಯ ತೀರುವಳಿ ಪ್ರಕ್ರಿಯೆ ತ್ವರಿತಗೊಳಿಸಲು ಅರಣ್ಯ ಇಲಾಖೆಯೊಂದಿಗೆ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸುತ್ತಿದೆ. ನೀರು ಹಾಗೂ ವಿದ್ಯುತ್ ಸಂಪರ್ಕ ಸೇರಿದಂತೆ Utility Shifting ಕಾರ್ಯವನ್ನು ಚುರುಕುಗೊಳಿಸಲು ಸಂಬಂಧಪಟ್ಟ ಇಲಾಖೆಗೊಂದಿಗೆ ಸಭೆ ನಡೆಸುವ ಮೂಲಕ ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ತ್ವರಿತ ಅನುಷ್ಠಾನಕ್ಕೆ ಆದ್ಯತೆ ನೀಡಲಾಗಿದೆ. 10,000 ಪಿ.ಯು.ಸಿ ಗಿಂತಲೂ ಸಂಚಾರ ತೀವ್ರತೆ ಹೆಚ್ಚಿರುವ ಇರುವ ರಾಜ್ಯ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸಲು ಹಾಗೂ ರಾಜ್ಯದ ಸಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಮಂಜೂರು ಮಾಡಬೇಕೆಂದು ಮಾನ್ಯ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಕೇಂದ್ರ ಸಚಿವರಲ್ಲಿ ಕರ್ನಾಟಕ ಸರ್ಕಾರದ ಪರವಾಗಿ ಮುಖ್ಯಮಂತ್ರಿಗಳು ಮನವಿ ಮಾಡಿದ್ದಾರೆ. ಸಂಚಾರ ದಟ್ಟಣೆಯನ್ನು ಸುಗಮಗೊಳಿಸಲು ಮೈಸೂರಿನ ರಾಷ್ಟ್ರೀಯ ಹೆದ್ದಾರಿ –275ರಲ್ಲಿ 9 ಗ್ರೇಡ್ ಸಪರೇಟರ್‌ಗಳ ನಿರ್ಮಾಣ. ರಾಷ್ಟ್ರೀಯ ಹೆದ್ದಾರಿ–75 ( ಹಳೆಯ ರಾ.ಹೆ 48) ರ ಶಿರಾಡಿ ಘಾಟ್ ನ 237+000 ರಿಂದ 263+000 (ಮಾರನಹಳ್ಳಿಯಿಂದ ಅಡ್ಡಹೊಳೆ ಸೆಕ್ಷನ್)

(3ನೇ ಪುಟಕ್ಕೆ)

# ರಾಜ್ಯದ ಅಭಿವೃದ್ಧಿಯಲ್ಲಿ ಕಾನೂನು ಸುವ್ಯವಸ್ಥೆ ಪಾತ್ರ ಬಹಳ ದೊಡ್ಡದು

## ಪೊಲೀಸರ ಪಾತ್ರದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಗುಣಗಾನ




**ಬೆಂಗಳೂರು, ಏ.2:** ಕಾನೂನು ಸುವ್ಯವಸ್ಥೆ ಮತ್ತು ಬಂಡವಾಳ ಹೂಡಿಕೆ ಹಾಗೂ ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿ ಒಂದಕ್ಕೊಂದು ನೇರ ಸಂಬಂಧವಿದೆ. ನಿರುದ್ಯೋಗ ಬಹಳ ದೊಡ್ಡ ಸಮಸ್ಯೆ ಆಗಿದೆ. ಇದನ್ನು ನಿರ್ವಹಿಸಬೇಕಾದರೆ ಕಾನೂನು ಸುವ್ಯವಸ್ಥೆ , ಶಾಂತಿ ಪಾಲನೆ ಉತ್ತಮವಾಗಿರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು. ಕೋರಮಂಗಲ ಕವಾಯತು ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆಯಲ್ಲಿ ಮುಖ್ಯಮಂತ್ರಿಗಳ ಪದಕ ಪುರಸ್ಕೃತರಿಗೆ ಪದಕಗಳನ್ನು ಪ್ರದಾನ ಮಾಡಿ ಮಾತನಾಡಿದರು.

ಮೂರು ವರ್ಷಗಳಿಂದ ಬಾಕಿ ಉಳಿದಿದ್ದ ಮುಖ್ಯಮಂತ್ರಿಗಳ ಪದಕವನ್ನು ಈ ಬಾರಿ ಒಟ್ಟಾಗಿ ವಿತರಿಸಿದ್ದೇವೆ. ಎಲ್ಲಾ ಪದಕ ಪುರಸ್ಕೃತರಿಗೂ ಅಭಿನಂದನೆಗಳು ಎಂದು ಅಭಿನಂದಿಸಿದರು.

ತಂತ್ರಜ್ಞಾನದ ಬೆಳವಣಿಗೆಯಿಂದ ಸೈಬರ್ ಅಪರಾಧಗಳು ವ್ಯಾಪಕವಾಗಿ ಹೆಚ್ಚುತ್ತಿವೆ. ಅದೇ ತಂತ್ರಜ್ಞಾನದ ಸಾಧ್ಯತೆಗಳನ್ನು ಬಳಸಿಕೊಂಡು ಸೈಬರ್ ಅಪರಾಧಗಳನ್ನು ನಿಗ್ರಹಿಸಬೇಕು ಎಂದು ಕರೆ ನೀಡಿದರು. ಮಾದಕ ವಸ್ತು ಮುಕ್ತ ರಾಜ್ಯ ಮಾಡುವುದು ನನ್ನ ಗುರಿ. ಇದಕ್ಕಾಗಿ ಬಹಳಷ್ಟು ಶ್ರಮಿಸಬೇಕು. ಪೊಲೀಸರು ಮಾದಕ ವಸ್ತು ಜಾಲವನ್ನು ಬೇರು ಸಮೇತ ಕಿತ್ತಾಕಲು ಪಣ ತೊಡಬೇಕು ಎಂದು ಕರೆ ನೀಡಿದರು. ಪದಕಗಳನ್ನು ಪಡೆದವರು ಬೇರೆಯವರಿಗೆ ಪ್ರೇರಣೆ ಆಗಬೇಕು. ಸಿಎಂ ಪದಕ ಪಡೆಯಲು ದಕ್ಷತೆ, ಪ್ರಾಮಾಣಿಕತೆಯಿಂದ ವೃತ್ತಿಪರತೆ ತೋರಿಸಬೇಕು ಎಂದರು. ಕಳೆದ ಎರಡು ವರ್ಷಗಳಲ್ಲಿ ಅಪರಾಧಗಳ ಸಂಖ್ಯೆ ಇಳಿಮುಖ ಆಗುತ್ತಿದೆ. ಇದು ಇನ್ನಷ್ಟು ಕಡಿಮೆ ಆಗಬೇಕು ಎಂದರು. ಕಾನೂನು ಸುವ್ಯವಸ್ಥೆ ಮತ್ತು ಬಂಡವಾಳ ಹೂಡಿಗೆ ಹಾಗೂ ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿ ಒಂದಕ್ಕೊಂದು ನೇರ ಸಂಬಂಧವಿದೆ. ನಿರುದ್ಯೋಗ ಬಹಳ ದೊಡ್ಡ ಸಮಸ್ಯೆ ಆಗಿದೆ. ಇದನ್ನು ನಿರ್ವಹಿಸಬೇಕಾದರೆ ಕಾನೂನು ಸುವ್ಯವಸ್ಥೆ , ಶಂತಿ ಪಾಲನೆ ಉತ್ತಮವಾಗಿರಬೇಕು ಎಂದರು. ಜರ್ಮನಿಯ ಪ್ರಧಾನಿ, ಪ್ರತಿನಿಧಿಗಳು ರಾಜ್ಯದ ಪೊಲೀಸ್ ಕೌಶಲ್ಯ ಮತ್ತು ವೃತ್ತಿಪರತೆಯನ್ನು ಶ್ಲಾಘಿಸಿದ್ದಾರೆ. ಇದು ಅಪಾರ ಮೆಚ್ಚುಗೆಯ ವಿಷಯ ಎಂದರು. ಪೊಲೀಸರ ಅಗತ್ಯ ಮತ್ತು ಬೇಡಿಕೆಗಳನ್ನು ಈಡೇರಿಸಲು ನಮ್ಮ ಸರ್ಕಾರ ಸದಾ ಸಿದ್ಧ ಇದೆ. ನಾವು ನಿರಂತರವಾಗಿ ನಿಮ್ಮ ಜೊತೆಗಿರುತ್ತವೆ. ಆದರೆ ಕರ್ತವ್ಯಲೋಪವನ್ನು ಮಾತ್ರ ಸಹಿಸುವುದಿಲ್ಲ. ಪೊಲೀಸ್ ಬೀಟ್ ವ್ಯವಸ್ಥೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಿ ಎಂದರು.

(5ನೇ ಪುಟಕ್ಕೆ)

## ನಿತ್ಯ ಪಂಚಾಂಗ 3.04.2025 ಗುರುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ಚೈತ್ರ ಶುದ್ಧ

ಷಷ್ಠಿ, ರೋಹಿಣಿ ನಕ್ಷತ್ರ, ಸ್ಕಂದ ದವನಾರ್ಪಣೆ, ಮಿತ್ತಬಾಗಿಲು, ಕೊಲ್ಲಿ ಬಾರ್ಕೂರು ರಥ, ಶೃಂಗೇರಿ ಭಾರತೀತೀರ್ಥ ವರ್ಧಂತಿ, ಪುತ್ತಿಗೆ ಕಡೇಬಂಡಿ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಶೀಘ್ರವೇ ಫೆಬ್ರವರಿಯ ಗೃಹಲಕ್ಷ್ಮಿ ಹಣ ಬಿಡುಗಡೆ

**ಬೆಂಗಳೂರು, ಏ.2:** ಗೃಹಲಕ್ಷ್ಮಿ ಯೋಜನೆಯ ಜನವರಿ ತಿಂಗಳ ಹಣ ಈಗಾಗಲೇ ಫಲಾನುಭವಿಗಳ ಖಾತೆಗೆ ಸಂದಾಯವಾಗಿದೆ. ಫೆಬ್ರವರಿ ತಿಂಗಳ ಹಣ ಕೂಡ ಬಿಡುಗಡೆಯಾಗಿದ್ದು, ಶೀಘ್ರವೇ ಜಮೆಯಾಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.ಸುದ್ದಿಗಾರರ ಜೊತೆ ಮಾತನಾಡಿದ ಅವರು ಜನವರಿ ತಿಂಗಳ ಹಣವನ್ನು ನಾವು ಈಗಾಗಲೇ ಕ್ಲಿಯರ್ ಮಾಡಿದ್ದೇವೆ. ಇನ್ನು ಫೆಬ್ರವರಿ ಕಂತಿನ ಹಣವನ್ನು ಕೂಡ ಶೀಘ್ರದಲ್ಲೇ ಫಲಾನುಭವಿಗಳ ಖಾತೆಗೆ ಹಾಕಲಿದ್ದೇವೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸ್ಪಷ್ಟಪಡಿಸಿದ್ದಾರೆ. ಮೊನ್ನೆ ಫಲಾನುಭವಿಗಳ ಖಾತೆಗೆ ಜನವರಿ ತಿಂಗಳ ಹಣ ಜಮಾ ಆಗಿದೆ. 2500 ಕೋಟಿ ರೂ. ಹಣ ಕ್ಲಿಯರ್ ಆಗಿದೆ. ಏಪ್ರಿಲ್ ಮೊದಲ ವಾರದಲ್ಲಿ ಫೆಬ್ರವರಿ ತಿಂಗಳ ಗೃಹಲಕ್ಷ್ಮಿ ಹಣ ಜಮಾ ಮಾಡಲಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

# ಸವಾಲುಗಳನ್ನು ಮೆಟ್ಟಿ ನಿಂತು ಪೊಲೀಸರು ಕೆಲಸ ಮಾಡಬೇಕು – ಗೃಹ ಸಚಿವ ಜಿ.ಪರಮೇಶ್ವರ್

## ಇಲಾಖೆಯ ಆಧುನಿಕರಣ, ಬಲವರ್ಧನೆ, ಸಿಬ್ಬಂದಿಗಳ ಕ್ಷೇಮಾಭಿವೃದ್ಧಿ ಮುಖ್ಯ



**ಬೆಂಗಳೂರು, ಏ.2:** ರಾಜ್ಯದಲ್ಲಿ ಅಪರಾಧ ಹಾಗೂ ಮಾದಕ ದ್ರವ್ಯ ಚಟುವಟಿಕೆಯನ್ನು ಸಂಪೂರ್ಣವಾಗಿ ಮಟ್ಟ ಹಾಕುವುದು ಸೇರಿದಂತೆ ಮಹಿಳೆಯರ ಸುರಕ್ಷತೆಗೆ ಮತ್ತಷ್ಟು ಹೆಚ್ಚಿನ ಒತ್ತು ನೀಡಬೇಕು ಎಂದು ಗೃಹ ಸಚಿವರಾದ ಡಾ. ಜಿ.ಪರಮೇಶ್ವರ ಅವರು ಹೇಳಿದರು. ನಗರದ ಕೋರಮಂಗಲದ ಕೆಎಸ್ಆರ್ಪಿ ಪೆರೇಡ್ ಮೈದಾನದಲ್ಲಿ ಇಂದು ನಡೆದ ಪೊಲೀಸ್ ಧ್ವಜ ದಿನಾಚರಣೆ ಹಾಗೂ ಮುಖ್ಯಮಂತ್ರಿಯವರ ಪದಕ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಬೆಂಗಳೂರು ನಗರದಲ್ಲಿ ಶಾಂತಿ ನೆಲೆಸಬೇಕು. ಇದರ ಪರಿಣಾಮ ರಾಜ್ಯಕ್ಕೆ ಹೆಚ್ಚು ಬಂಡಾವಾಳ ಹರಿದು ಬರಲಿದೆ. ಆರ್ಥಿಕ ಸ್ಥಿತಿ ಉತ್ತಮವಾಗಿ, ಉದ್ಯೋಗಗಳು ಹೆಚ್ಚಾಗಲಿವೆ ಎಂದರು.

ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವುದರ ಜೊತೆಗೆ ಜನರ ನೆಮ್ಮದಿಯನ್ನ ಕಾಪಾಡಲಾಗಿದೆ. ಕೋಮು ಪ್ರಚೋದನೆ ಮಾಡುವವರು ಅಡಗಿದ್ದಾರೆ. ದಕ್ಷತೆ ಮತ್ತು ಪ್ರಾಮಾಣಿಕತೆಯಲ್ಲಿ ರಾಜ್ಯ ಪೊಲೀಸ್ ಇಲಾಖೆಯು ದೇಶದಲ್ಲಿ ಮೊದಲ ಸ್ಥಾನಕ್ಕೆ ಬರಬೇಕು ಎಂದು ತಿಳಿಸಿದರು. ಪೊಲೀಸ್ ಇಲಾಖೆಯನ್ನು ಅಧುನಿಕರಣ, ಬಲವರ್ಧನೆ ಗೊಳಿಸುವುದು ಹಾಗೂ ಸಿಬ್ಬಂದಿಗಳ ಕ್ಷೇಮಾಭಿವೃದ್ಧಿ ನಮಗೆ ಮುಖ್ಯ. ಈ ನಿಟ್ಟಿನಲ್ಲಿ ಹಲವು ಯೋಜನೆಗಳನ್ನು ಮುಖ್ಯಮಂತ್ರಿಯವರು ನೀಡಿದ್ದಾರೆ. ಸವಾಲುಗಳನ್ನು ಮೆಟ್ಟಿ ನಿಂತು ನಮ್ಮ ಇಲಾಖೆ ಕೆಲಸ ಮಾಡಬೇಕಾಗಿದೆ ಎಂದು ಹೇಳಿದರು. ದೇಶದಲ್ಲಿ ಸೈಬರ್ ಕ್ರೈಂ ಅತಿದೊಡ್ಡ ಸವಾಲಾಗಿದೆ. ರಾಜ್ಯದಲ್ಲಿ ವಾರ್ಷಿಕ 20 ಸಾವಿರ ಪ್ರಕರಣಗಳು ದಾಖಲಾಗುತ್ತಿವೆ. ಬೆಂಗಳೂರು ಐಟಿ ಸಿಟಿಯಾಗಿರುವುದು ಹಾಗೂ ಇಂಟರ್ನೆಟ್ ಕನೆಕ್ಟಿವಿಟಿ ಹೆಚ್ಚಿರುವುದರಿಂದ ಸೈಬರ್ ಕ್ರೈಮ್ಗಳು ಹೆಚ್ಚಾಗುತ್ತಿರಬಹುದು. ಇದನ್ನು ಮಟ್ಟಹಾಕುವ ನಿಟ್ಟಿನಲ್ಲಿ ಕೆಲಸ ಮಾಡಲಾಗುತ್ತಿದೆ. ಮತ್ತಷ್ಟು ಕಠಿಣವಾಗಿ ಕೆಲಸ ಮಾಡಬೇಕಿದೆ ಎಂದರು. ಬೆಂಗಳೂರು ನಗರ ಸಂಚಾರ ನಿರ್ವಹಣಾ ಕೇಂದ್ರವು ಅಸ್ತ್ರಂ ಅಪ್ಲಿಕೇಶನ್ ಪ್ರಾರಂಭಿಸಿದೆ. ಇದಕ್ಕೆ ರಾಷ್ಟ್ರಮಟ್ಟದಲ್ಲಿ ಮನ್ನಣೆ ಸಿಕ್ಕಿರುವುದು ಶ್ಲಾಘನೀಯ. ಮುಖ್ಯಮಂತ್ರಿಯವರು ಪೊಲೀಸ್ ಅಧಿಕಾರಿ ಮತ್ರು ಸಿಬ್ಬಂದಿಗಳಿಗಾಗಿ ಗೃಹಗಳನ್ನು ನಿರ್ಮಿಸಲಾಗುತ್ತಿದೆ. ಈವರೆಗೆ ಶೇ. 60ರಷ್ಟು ಸಾಧ್ಯವಾಗಿದೆ. ಪ್ರಸಕ್ತ ಬಜೆಟ್ನಲ್ಲಿ ಪೊಲೀಸ್ ಗೃಹ ಯೋಜನೆಯನ್ನು ಮುಂದಿನ ಐದು ವರ್ಷದವರೆಗೆ ಮುಂದುವರಿಸಲಾಗಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ಡ್ರಗ್ಸ್ ದುಷ್ಪರಿಣಾಮದ ಕುರಿತು ಯುವ ಸಮೂಹಕ್ಕೆ ಜಾಗೃತಿ ಮೂಡಿಸಬೇಕಿದೆ. ಈವರೆಗೆ ಪೊಲೀಸ್ ಇಲಾಖೆಯಿಂದ ಶಾಲಾ–ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ 10 ಲಕ್ಷ ಯುವಕರಿಗೆ ತಿಳುವಳಿಕೆ ಮೂಡಿಸಲಾಗಿದೆ. ಕರ್ನಾಟಕ ಪೊಲೀಸ್ ಉತ್ತಮವಾಗಿ ಕೆಲಸ ಮಾಡುತ್ತಿದೆ. ನಕ್ಸಲರನ್ನು ಶರಣಾಗತಿ ಮಾಡಿಸಿ, ನಕ್ಸಲ್ ಮುಕ್ತ ಕರ್ನಾಟಕವಾಗಿಸಿದ್ದಾರೆ. ಮಂಗಳೂರಿನಲ್ಲಿ ನಡೆದ ಬ್ಯಾಂಕ್ ಪ್ರಕರಣದ ಆರೋಪಿಗಳನ್ನು 24 ಗಂಟೆಯಲ್ಲಿ ಬಂಧಿಸಿದ್ದಾರೆ. ದಾವಣಗೆರೆಯಲ್ಲಿನ ದರೋಡೆ ಪ್ರಕರಣದ ಆರೋಪಿಗಳನ್ನು ಬಂಧಿಸಿ ಕೋಟ್ಯಂತರ ರೂ. ಮೌಲ್ಯದ ಚಿನ್ನಾಭರಣ ಪತ್ತೆಹಚ್ಚಿದ್ದಾರೆ. ಮುಂದಿನ ದಿನಗಳಲ್ಲಿಯೂ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಪ್ರಾಮಾಣಿಕತೆ, ದಕ್ಷತೆಯಿಂದ ಕೆಲಸ ಮಾಡಿ ಮುಖ್ಯಮಂತ್ರಿಯವರ ಪದಕ ಪಡೆಯುವಂತಾಗಲಿ ಎಂದು ಹೇಳಿದರು.

ಇಲಾಖೆಯಲ್ಲಿ ನಿಸ್ವಾರ್ಥ ಸೇವೆ, ಹಗಲಿರುಳು ದುಡಿದಿರುವ ಹಾಗೂ ಕರ್ತವ್ಯದ ಸಂದರ್ಭದಲ್ಲಿ ಪ್ರಾಣ ತ್ಯಾಗ ಮಾಡಿರುವ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಸ್ಮರಿಸುತ್ತೇನೆ. ಏಪ್ರಿಲ್ 2 ಪೊಲೀಸ್ ಇಲಾಖೆಯಲ್ಲಿ ವಿಶೇಷವಾದ ದಿನ. 1955ರಲ್ಲಿ ಕರ್ನಾಟಕದಲ್ಲಿ ಪೊಲೀಸ್ ಕಾಯ್ದೆ ಆರಂಭವಾಗಿದ್ದರಿಂದ ಏ2ರಂದು ಧ್ವಜ ದಿನಾಚರಣೆ ಆಚರಿಸಲಾಗುತ್ತಿದೆ. ಈ ದಿನದಂದು ಎಲ್ಲ ಅಧಿಕಾರಿ, ಸಿಬ್ಬಂದಿಗಳಿಗೆ ವಿಶೇಷ ಅಭಿನಂದನೆಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಜೀರ್ ಅಹ್ಮದ್, ರಾಜ್ಯ ಪೊಲೀಸ್ ಮಹಾನಿರ್ದೇಶಕರಾದ ಅಲೋಕ್ ಮೋಹನ್, ಮುಖ್ಯಮಂತ್ರಿಯವರ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಎಲ್. ಕೆ.ಅತೀಕ್, ಗೃಹ ಇಲಾಖೆಯ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಉಮಾಶಂಕರ್ ರವರು ಹಾಗೂ ಪೊಲೀಸ್ ಇಲಾಖೆಯ ಎಲ್ಲ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಇದ್ದರು.

# ಕರ್ನಾಟಕ ಸಾಬೂನು–ಮಾರ್ಜಕ ಸಂಸ್ಥೆಗೆ ಅತ್ಯಧಿಕ ಲಾಭ: ಅಧ್ಯಕ್ಷ ನಾಡಗೌಡ ಮಾಹಿತಿ



**ಬೆಂಗಳೂರು, ಏ.2:** ಸರ್ಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತವು ಕಳೆದ 2024–25ನೇ ಸಾಲಿನಲ್ಲಿ ಅತ್ಯಧಿಕ ವಹಿವಾಟು ನಡೆಸಲಾಗಿದೆ. ಇದರಿಂದ ಅತ್ಯಧಿಕ ಲಾಭ ಗಳಿಕೆ ಆಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರು ಮತ್ತು ಅಧ್ಯಕ್ಷರೂ ಆದ ಶಾಸಕ ಅಪ್ಪಾಜಿ ಸಿ. ಎಸ್.ನಾಡಗೌಡ ಅವರು ಬುಧವಾರ ಮಾಹಿತಿ ನೀಡಿದರು. ಜಂಟಿ ಹೇಳಿಕೆ ನೀಡಿರುವ ಅವರು, ಸರ್ಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತವು 2024–25ರಲ್ಲಿ 1,787 ಕೋಟಿ ರೂಪಾಯಿ ದಾಖಲೆ ವಹಿವಾಟು ನಡೆಸಿ, 416 ಕೋಟಿ ನಿವ್ವಳ ಲಾಭ ಗಳಿಸಿದೆ. ಇದು ಕಳೆದ ಸಾಲಿಗಿಂತ 54 ಕೋಟಿ ಹೆಚ್ಚು ಆದಾಯ ಎಂದು ತಿಳಿಸಿರು. ಕಳೆದ ಹಣಕಾಸು ವರ್ಷದಲ್ಲಿ ಸಂಸ್ಥೆಯು 43,144 ಮೆಟ್ರಿಕ್ ಟನ್ ಸಾಬೂನು ಮತ್ತು ಮಾರ್ಜಕಗಳನ್ನು ಮಾರಾಟ ಮಾಡಿ, ದಾಖಲೆಯ ಲಾಭ ಗಳಿಸಿದೆ. ಲಾಭದಲ್ಲಿ ನಿಯಮಾನುಸಾರ ಶೇ.30ರಷ್ಟನ್ನು, ಅಂದರೆ 123 ಕೋಟಿಯನ್ನು ಸರ್ಕಾರಕ್ಕೆ ಹಸ್ತಾಂತರಿಸಲಾಗುವುದು ಎಂದರು.ಸಂಸ್ಥೆಯು 2023–24ರಲ್ಲಿ 37,916 ಟನ್ ಉತ್ಪನ್ನ ಮಾರಾಟ ಮಾಡಿ, 1,570 ಕೋಟಿ ರೂಪಾಯಿ ವಹಿವಾಟು ನಡೆಸುವ ಮೂಲಕ 362 ಕೋಟಿ ರೂಪಾಯಿ ನಿವ್ವಳ ಲಾಭ ಗಳಿಸಿತ್ತು. ಆ ಪೈಕಿ 108 ಕೋಟಿ ರೂ.ಗಳನ್ನು ಸರಕಾರಕ್ಕೆ ಕೊಡಲಾಗಿತ್ತು. ಹಿಂದೆ ಸಂಸ್ಥೆಯು ಲಾಭಾಂಶ ಕೊಡುವ ಸರ್ಕಾರಿ ಉದ್ದಿಮೆಗಳ ಪೈಕಿ 21ನೇ ಸ್ಥಾನದಲ್ಲಿತ್ತು. ಈಗ 3ನೇ ಸ್ಥಾನದಲ್ಲಿದೆ ಎಂದು ಸಚಿವರು ಹರ್ಷ ವ್ಯಕ್ತಪಡಿಸಿದರು.2024–25ರಲ್ಲಿ ಸಂಸ್ಥೆಯು ಉತ್ಪಾದನೆ, ಮಾರಾಟ ಮತ್ತು ಲಾಭ ಮೂರರಲ್ಲೂ ಸಾರ್ವಕಾಲಿಕ ದಾಖಲೆ ಬರೆದಿದೆ. ಕಳೆದ ಸಾಲಿನಲ್ಲಿ ರಫ್ತು ವಹಿವಾಟಿನ ಮೂಲಕವೂ ಏಖಆಐ 23.2 ಕೋಟಿ ರೂಪಾಯಿ ಮೊತ್ತದ ವಹಿವಾಟು ನಡೆಸಿದೆ.ಸಂಸ್ಥೆಯು ಗ್ರಾಹಕರ ನಿರೀಕ್ಷೆಗೆ ತಕ್ಕಂತೆ 19 ಉತ್ಪನ್ನಗಳನ್ನು ಒಳಗೊಂಡಿದೆ. ಇದರಲ್ಲಿ ಮೈಸೋಪು, ಹ್ಯಾಂಡ್ ವಾಶ್, ಶವರ್ ಜೆಲ್, ಕುಡಿಯುವ ನೀರು, ಅಗರಬತ್ತಿ ಮುಂತಾದ ಉತ್ಕೃಷ್ಟ ಉತ್ಪನ್ನಗಳನ್ನು ಹೊಂದಿದೆ. ಮಾರುಕಟ್ಟೆ ವಿಸ್ತರಣೆ ಮತ್ತು ದಕ್ಷ ಉತ್ಪಾದನಾ ವಿಧಾನದ ಮೂಲಕ ಲಾಭವನ್ನು ಮತ್ತಷ್ಟು ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.ಸಂಸ್ಥೆಯು ಈಗ ಇ–ಕಾಮರ್ಸ್ ಮತ್ತು ಆಧುನಿಕ ವ್ಯಾಪಾರ ಮಾದರಿಗಳನ್ನು ಅಳವಡಿಸಿಕೊಂಡಿದೆ. ಸಂಸ್ಥೆಯ ಚೆನ್ನೈ, ಹೈದರಾಬಾದ್, ಮುಂಬೈ, ಅಹಮದಾಬಾದ್, ದೆಹಲಿ, ಛತ್ತೀಸಗಢ ಮತ್ತು ಕೋಲ್ಕತಾ ಹಾಗೂ ಒಡಿಶಾ ಶಾಖೆಗಳಲ್ಲಿ ಕೂಡ ವಹಿವಾಟು ಹೆಚ್ಚಳ ಕಂಡಿದೆ ಎಂದು ಅವರು ನುಡಿದಿದ್ದಾರೆ. ವಿಜಯಪುರದಲ್ಲಿ ಘಟಕ ಸ್ಥಾಪನೆ–ಸಂಸ್ಥೆಯಲ್ಲಿ ಈಗ ಮೂರು ಪಾಳಿಗಳ ಕೆಲಸದ ವ್ಯವಸ್ಥೆ ಇದೆ. ವಿಜಯಪುರದಲ್ಲಿ 250 ಕೋಟಿ ರೂಪಾಯಿ ವೆಚ್ಚದಲ್ಲಿ ಸಂಸ್ಥೆಯ ಘಟಕವನ್ನು ತೆರೆಯಲಾಗುವುದು. ಇದಕ್ಕೆ 50 ಎಕರೆ ಜಾಗವನ್ನು ಕೆಐಎಡಿಬಿ ಹಂಚಿಕೆ ಮಾಡಿದೆ. 2025–26ರಲ್ಲಿ ಸಂಸ್ಥೆಯು 1,819 ಕೋಟಿ ರೂಪಾಯಿ ಮೊತ್ತದ ವಹಿವಾಟು ನಡೆಸುವ ಗುರಿ ಹೊಂದಿದೆ ಎಂದು ಸಚಿವರು ಹೇಳಿದರು.ಕೆಎಸ್ ಡಿಎಲ್ ವ್ಯವಸ್ಥಾಪಕ ನಿರ್ದೇಶಕ ಪಿ.ಕೆ.ಎಂ.ಪ್ರಶಾಂತ ಅವರು ಮಾತನಾಡಿ, ಕಳೆದ ಎರಡು ವರ್ಷಗಳಿಂದ ಸಂಸ್ಥೆಯ ಲಾಭದ ಪ್ರಮಾಣ ಏರುಮುಖವಾಗಿದೆ. ಪಾರದರ್ಶಕತೆ, ದಕ್ಷತೆ, ಮಾರುಕಟ್ಟೆ ವಿಸ್ತರಣೆ ಮತ್ತು ಗುಣಮಟ್ಟ ಈ ನಾಲ್ಕು ಅಂಶಗಳಿಗೆ ಆದ್ಯತೆ ನೀಡಿರುವುದೇ ಇದಕ್ಕೆ ಮುಖ್ಯ ಕಾರಣವಾಗಿದೆ ಎಂದರು.ಸಂಸ್ಥೆಯ ಸಾಬೂನು ಘಟಕವು ಕಳೆದ ಸಾಲಿನಲ್ಲಿ 36,268 ಟನ್, ಡಿಟರ್ಜೆಂಟ್ ಘಟಕವು 5,788 ಟನ್ ಮತ್ತು ಸೌಂದರ್ಯ ವರ್ಧಕಗಳ ಘಟಕವು 1,087 ಟನ್ ಉತ್ಪನ್ನಗಳನ್ನು ತಯಾರಿಸಿದೆ ಎಂದು ಅವರು ಹೇಳಿದ್ದಾರೆ.

# ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ವಿರೋಧಿಸಿ ಅಹೋರಾತ್ರಿ ಧರಣಿ ಆರಂಭ

**ಬೆಂಗಳೂರು, ಏ.2:** ರಾಜ್ಯದಲ್ಲಿ ಬೆಲೆ ಏರಿಕೆ ಗ್ಯಾರಂಟಿ ಕೊಡುವ ಕಾಂಗ್ರೆಸ್ ಪಕ್ಷದ ಸರಕಾರ ಅಧಿಕಾರದಲ್ಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ವಿರೋಧಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಇಂದು ಬಿಜೆಪಿಯ ಅಹೋರಾತ್ರಿ ಧರಣಿಯ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ರಾತ್ರಿ ಮಲಗಿ ಬೆಳಗೆದ್ದರೆ ಯಾವುದರ ಬೆಲೆ ಏರಿಕೆಯಾಗುವುದೋ" ಎಂಬ ಆತಂಕದ ಪರಿಸ್ಥಿತಿ ನಾಡಿನ ಜನಸಾಮಾನ್ಯರಲ್ಲಿ ಮನೆಮಾಡಿದೆ. ಬೆಲೆ ಏರಿಕೆಯ ದಂಡ ನಿರಂತರ ಪ್ರಯೋಗಿಸುತ್ತಿರುವ ನಿಷ್ಪ್ರಯೋಜಕ ಕಾಂಗ್ರೆಸ್ ಸರ್ಕಾರ ಎಂದಿನಂತೆ ಜನರ ಬದುಕನ್ನು ಹಿಂಡುವುದನ್ನು ಮುಂದುವರೆಸಿದೆ.ತನ್ನ ಖಾಲಿ ಖಜಾನೆ ತುಂಬಿಸಿಕೊಳ್ಳಲು ಡೀಸೆಲ್ ಮಾರಾಟ ತೆರಿಗೆಯನ್ನು ದಿಢೀರ್ ಹೆಚ್ಚಿಸಿರುವುದರಿಂದ ರಾಜ್ಯದಲ್ಲಿ ಡೀಸೆಲ್ ದರವು ಪ್ರತಿ ಲೀಟರ್ಗೆ '2' ರೂಪಾಯಿ ಹೆಚ್ಚಳವಾಗಲಿದ್ದು ನಾಡಿನ ಜನಸಾಮಾನ್ಯರಿಗೆ ಈ ದರ ಏರಿಕೆಯ ಬಿಸಿ ನೇರವಾಗಿ ತಟ್ಟಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅವರು ಹೇಳಿದರು. ವಿಜಯೇಂದ್ರ ಅವರು, ಕರ್ನಾಟಕ ರಾಜ್ಯದ ಇತಿಹಾಸದಲ್ಲಿ ಇಂದಿನ ಕಾಂಗ್ರೆಸ್ ಸರ್ಕಾರದಷ್ಟು ಜನ ವಿರೋಧಿ ಸರ್ಕಾರವನ್ನು ರಾಜ್ಯದ ಜನತೆ ಎಂದೂ ಕಂಡಿಲ್ಲ. ಸುಳ್ಳು ಭರವಸೆಗಳು ಹಾಗೂ ಯೋಜನೆಗಳನ್ನು ಪೂರೈಸಲಾಗದೇ ರಾಜ್ಯದ ಖಜಾನೆಯನ್ನು ಬರಿದು ಮಾಡಿಕೊಂಡಿರುವ ಈ ಸರ್ಕಾರ ನಿತ್ಯವೂ ಒಂದಿಲ್ಲೊಂದು ದರ ಏರಿಸಿ ರಾಜ್ಯದ ಜನತೆಯನ್ನು ಸಂಕಷ್ಟಕ್ಕೆ ತಳ್ಳುತ್ತಿದೆ. ಹಾಲು, ಮೊಸರು, ವಿದ್ಯುತ್,ಆಟೋ ಮೊಬೈಲ್ ಪಾರ್ಟ್ಸ್, ಬೆಂಗಳೂರಿನಲ್ಲಿ ಕಸದ ತೆರಿಗೆ, ನೋಂದಣಿ ಮತ್ತು ಮುದ್ರಾಂಕ ಶುಲ್ಕ, ಅಫಿಡವಿಟ್ ಛಾಪಾ ಕಾಗದ, ಎಟಿಎಂ ಚಾರ್ಜ್ ಸೇರಿದಂತೆ ಜನರ ದೈನಂದಿನ ಬದುಕಿನ ಮೇಲೆ ಹೊರೆ ಹೊರಿಸಿದ್ದ ರಾಜ್ಯ ಸರ್ಕಾರ ಇದೀಗ ಡೀಸೆಲ್ ದರ ಹೆಚ್ಚಿಸಿರುವುದು ಇನ್ನುಮುಂದೆ ರಾಜ್ಯದಲ್ಲಿ ಪ್ರತಿಯೊಂದು ವಸ್ತುಗಳ ಬೆಲೆಗಳೂ ಗಗನಕ್ಕೇರಲಿವೆ, ಜನಸಾಮಾನ್ಯರು, ಕಾರ್ಮಿಕರು, ಬಡವರು ಹಾಗೂ ಮಧ್ಯಮ ವರ್ಗದವರು ಬೆಲೆ ಏರಿಕೆಯ ಚಕ್ರವ್ಯೂಹದಲ್ಲಿ ಸಿಲುಕಿ ನಲುಗುವ ಪರಿಸ್ಥಿತಿ ನಿರ್ಮಾಣವಾಗಲಿದೆ. ಬಿತ್ತನೆ ಬೀಜದ ದರ ಹೆಚ್ಚಾಗಿದೆ. ಕಳೆದ 20 ತಿಂಗಳ ಆಡಳಿತದಲ್ಲಿ ಜನರು ಖುಷಿ ಆಗಿದ್ದಾರಾ ಎಂಬ ಬಗ್ಗೆ ಅರಿತುಕೊಳ್ಳಲು ರಾಜ್ಯ ಪ್ರವಾಸ ಮಾಡಿ ಎಂದು ಆಗ್ರಹಿಸಿದರು. ಇದರಿಂದ ಸರಕುಗಳ ದರವೂ ಹೆಚ್ಚಾಗಲಿದೆ ಎಂದು ತಿಳಿಸಿದರು.ಏಪ್ರಿಲ್ 7ರಿಂದ ಜನಾಕ್ರೋಶ ಯಾತ್ರೆ ಪ್ರಾರಂಭಿಸುತ್ತೇವೆ. ಕೇಂದ್ರದ ಸಚಿವ ಪ್ರಲ್ಹಾದ ಜೋಶಿಯವರು ಉದ್ಘಾಟಿಸುತ್ತಾರೆ ಎಂದು ವಿಜಯೇಂದ್ರ ಅವರು ತಿಳಿಸಿದರು. ಸರಕಾರಿ ಕಾಮಗಾರಿಗಳಲ್ಲಿ ಮುಸಲ್ಮಾನರಿಗೆ ಕಾನೂನುಬಾಹಿರವಾಗಿ ಶೇ 4 ಮೀಸಲಾತಿ ನೀಡಿದ್ದಾರೆ. ಮತ್ತೊಂದು ಕಡೆ ಪರಿಶಿಷ್ಟ ಜಾತಿ, ಪಂಗಡಗಳ ಅಭಿವೃದ್ಧಿಗೆ ಮೀಸಲಿಟ್ಟ ಎಸ್ಇಪಿ, ಟಿಎಸ್ಪಿ ಹಣವನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಇನ್ನೊಂದು ಕಡೆ ಬೆಲೆ ಏರಿಕೆ ನಿರಂತರವಾಗಿದೆ. ಇವೆಲ್ಲವನ್ನೂ ವಿರೋಧಿಸಿ ಜನಾಕ್ರೋಶ ಯಾತ್ರೆ ನಡೆಸಲಿದ್ದೇವೆ ಎಂದು ತಿಳಿಸಿದರು.ಭ್ರಷ್ಟ ಕಾಂಗ್ರೆಸ್ ಸರಕಾರದ ಬೆಲೆ ಏರಿಕೆಯ ವಿರುದ್ಧ ಭಾರತೀಯ ಜನತಾ ಪಾರ್ಟಿ ಹಮ್ಮಿಕೊಂಡಿರುವ ಹೋರಾಟ ಇದು ಎಂದು ವಿವರಿಸಿದರು.

# ಏ.27ಕ್ಕೆ 42345 ಮನೆ ಹಂಚಿಕೆ: ಜಮೀರ್ ಖಾನ್



**ಬೆಂಗಳೂರು, ಏ.2:** ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಬಡ ಕುಟುಂಬಗಳಿಗೆ ' ಸರ್ವರಿಗೂ ಸೂರು' ಯೋಜನೆಯಡಿ ನಿರ್ಮಿಸ ಲಾಗುತ್ತಿರುವ 1.82 ಲಕ್ಷ ಮನೆಗಳ ಪೈಕಿ ಎರಡನೇ ಹಂತದಲ್ಲಿ 42345 ಮನೆಗಳನ್ನು ಇದೇ ತಿಂಗಳು ಹಂಚಿಕೆ ಮಾಡಲಾಗುವುದು ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ. ಕೊಳಗೇರಿ ಅಭಿವೃದ್ಧಿ ಮಂಡಳಿ ಸಭಾಂಗಣ ದಲ್ಲಿ ಈ ಸಂಬಂಧ ಪೂರ್ವಬಾವಿ ಸಭೆ ನಡೆಸಿದ ನಂತರ ಮಾತನಾಡಿದ ಸಚಿವರು, ಮೊದಲ ಹಂತದಲ್ಲಿ ಕಳೆದ ವರ್ಷ ಫೆಬ್ರವರಿ ಯಲ್ಲಿ 36,789 ಮನೆ ಹಂಚಿಕೆ ಮಾಡಲಾಗಿತ್ತು. ಇದೀಗ 2ನೇ ಹಂತದಲ್ಲಿ ಏ.27 ರಂದು ಹುಬ್ಬಳ್ಳಿಯಲ್ಲಿ ನಡೆಯಲಿರುವ ಕಾರ್ಯಕ್ರಮ ದಲ್ಲಿ 42,345 ಮನೆ ಗಳನ್ನು ಹಂಚಿಕೆ ಮಾಡಲಾಗುವುದು ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ್ ಅಬ್ಬಯ್ಯ ಸೇರಿದಂತೆ ಹಲವು ಸಚಿವರು, ಶಾಸಕರು ಕಾರ್ಯಕ್ರಮ ದಲ್ಲಿ ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು. ಮುಖ್ಯಮಂತ್ರಿ ಯವರು ಹಂಚಿಕೆ ಮಾಡಲಿರುವ ಮನೆಗಳನ್ನು ಮೂಲಭೂತ ಸೌಕರ್ಯ ಸಹಿತ ಒಂದು ವಾರದಲ್ಲಿ ಪೂರ್ಣ ಗೊಳಿಸಬೇಕು ಎಂದು ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. 2013 ರಿಂದ 2023 ರವರೆಗೆ ಬಡ ಕುಟುಂಬಗಳಿಗೆ 1.82 ಲಕ್ಷ ಮನೆ ನಿರ್ಮಾಣ ಯೋಜನೆ ರೂಪಿಸಲಾಗಿತ್ತು. ಫಲಾನುಭವಿಗಳ ವಂತಿಗೆ ಪಾವತಿ ಕಷ್ಟ ವಾಗಿ ಮನೆಗಳು ಅರ್ಧಕ್ಕೆ ನಿಂತಿತ್ತು. ಮುಖ್ಯಮಂತ್ರಿ ಯವರಿಗೆ ಸಮಸ್ಯೆ ಮನವರಿಕೆ ಮಾಡಿಕೊಟ್ಟು ಫಲಾನುಭವಿಗಳ ವಂತಿಗೆ ತಲಾ ನಾಲ್ಕು ಲಕ್ಷ ರೂ. ಸರ್ಕಾರವೇ ಭರಿಸುವ ತೀರ್ಮಾನ ಕೈಗೊಂಡು ಮನೆ ಪೂರ್ಣ ಗೊಳಿಸಲಾಗುತ್ತಿದೆ ಎಂದು ಹೇಳಿದರು. ಆಯುಕ್ತ ಅಶೋಕ್, ತಾಂತ್ರಿಕ ಸಲಹೆಗಾರ ಬಾಲರಾಜ್, ಪ್ರಧಾನ ಅಭಿಯಂತರ ಸುಧೀರ್, ನಿರ್ದೇಶಕರಾದ ವೆಂಕಟೇಶ್, ವಿನಯ್ ಕುಮಾರ್, ರಶೀದ್ ಉಪಸ್ಥಿತರಿದ್ದರು

# ನಮ್ಮದು ರೈತಸ್ನೇಹಿ ಜನಹಿತ ಸರ್ಕಾರ: ನಾವೀಗ ಪ್ರಶ್ನಿಸಬೇಕಾಗಿರುವುದು ತೆರಿಗೆ ಹಂಚಿಕೆಯ ಪಾಲು ಎಂಬುದನ್ನು, ಸದಾ ನೆನಪಿಡೋಣ ಡಿಸಿಎಂ ಡಿ.ಕೆ.ಶಿವಕುಮಾರ್



**ಬೆಂಗಳೂರು, ಏ.2:** ನಂದಿನಿ ಹಾಲಿನ ದರವನ್ನು ಸ್ವಲ್ಪಮಟ್ಟಿಗೆ ಪರಿಷ್ಕರಣೆ ಮಾಡುವ ಮೂಲಕ ಹೈನುಗಾರರ ನೆರವಿಗಾಗಿ ನಮ್ಮ ಕಾಂಗ್ರೆಸ್ ಸರ್ಕಾರ ಮುಂದಡಿ ಇಟ್ಟಿದೆ. ಆದರೆ ಇದಕ್ಕೆ ಬೆಲೆ ಏರಿಕೆ ಎಂಬ ದೊಡ್ಡ ಹಣೆಪಟ್ಟಿಯನ್ನು ಕಟ್ಟಿ ಅಪಪ್ರಚಾರ ಮಾಡುತ್ತಿರುವುದು ನೋಡಿ ಅಚ್ಚರಿ ಎನಿಸಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ, ಪಂಚ ಗ್ಯಾರಂಟಿಗಳನ್ನು ಜಾರಿ ಮಾಡಿ ಜನರ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಿದೆ. ಜನರು ಗ್ಯಾರಂಟಿಗಳಿಂದ ಉಳಿಸಿದ ಹಣದಿಂದ ಫ್ರಿಡ್ಜ್, ವಾಹನ ಖರೀದಿ ಮಾಡುತ್ತಿದ್ದಾರೆ, ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುತ್ತಿದ್ದಾರೆ, ಸ್ವತಂತ್ರವಾಗಿ ಉದ್ಯಮಗಳನ್ನು ನಡೆಸುತ್ತಿದ್ದಾರೆ. ಕೇವಲ ಐದು ಗ್ಯಾರಂಟಿಗಳು ಮಾಡಿರುವ ಮ್ಯಾಜಿಕ್ನಿಂದಾಗಿ ಸಾಮಾಜಿಕ–ಆರ್ಥಿಕ ಪರಿಸ್ಥಿತಿ ಸಾಕಷ್ಟು ಅಭಿವೃದ್ಧಿಯಾಗಿದೆ. ಇವ್ಯಾವುದನ್ನೂ ಪರಿಗಣಿಸದೆ, ನಂದಿನಿ ಹಾಲಿನ ದರ ಪರಿಷ್ಕರಣೆ ಬಗ್ಗೆ ಏಕಾಏಕಿ ದಾಳಿ ನಡೆಸುತ್ತಿರುವುದು ಕೇವಲ ರಾಜಕೀಯ ಎಂಬುದರಲ್ಲಿ ಅನುಮಾನವೇ ಇಲ್ಲ. ಇಂತಹ ಅಪಪ್ರಚಾರಕ್ಕೆ ಜನರು ಕಿವಿಗೊಡಬಾರದು.

ಇಷ್ಟಕ್ಕೂ ಇದನ್ನು ಟೀಕೆ ಮಾಡುತ್ತಿರುವವರು ಯಾರು ಎಂದು ನೋಡಿದರೆ ದೊಡ್ಡ ಹಾಸ್ಯ ಎನಿಸಬಹುದು. ಕೋವಿಡ್ ಕಳೆದ ಬಳಿಕ, 2022–2023 ರ ಸಮಯದಲ್ಲಿ ಬೆಲೆಗಳು ಗಗನಕ್ಕೇರಿತ್ತು. ಎಣ್ಣೆ, ಪೆಟ್ರೋಲ್–ಡೀಸೆಲ್, ಅಡುಗೆ ಅನಿಲ, ಬೇಳೆಕಾಳು ಸೇರಿದಂತೆ ಎಲ್ಲ ಅಗತ್ಯ ಪದಾರ್ಥಗಳ ಬೆಲೆ ದಾಖಲೆಯ ಮಟ್ಟದಲ್ಲಿತ್ತು. ನರೇಂದ್ರ ಮೋದಿ ನೇತೃತ್ವದ ಎನ್ಡಿಎ ಸರ್ಕಾರ ಕೈಗೊಂಡ ಎಡವಟ್ಟು ಆರ್ಥಿಕ ನೀತಿಗಳಿಂದಾಗಿ ಬೆಲೆಗಳು ಅವೈಜ್ಞಾನಿಕ ರೀತಿಯಲ್ಲಿ ಮೇಲಕ್ಕೇರಿದ್ದವು. ಇದಕ್ಕೆ ತಡೆ ಹಾಕಲು ಕರ್ನಾಟಕದಲ್ಲಿ ಕಾಂಗ್ರೆಸ್ನಿಂದ ಗ್ಯಾರಂಟಿಗಳನ್ನು ಘೋಷಿಸಲಾಯಿತು. ಅದಕ್ಕೆ ಅಭೂತಪೂರ್ವ ಸ್ಪಂದನ ವ್ಯಕ್ತವಾಯಿತು. ಬಿಜೆಪಿಯ ಆರ್ಥಿಕ ಅವ್ಯವಸ್ಥೆಯಿಂದ ಬೇಸತ್ತ ಪ್ರತಿಯೊಬ್ಬರೂ ಕಾಂಗ್ರೆಸ್ನ ಕೈ ಹಿಡಿದರು. ಇದು ಮುಂದಿನ 2024 ರ ಲೋಕಸಭಾ ಚುನಾವಣೆಯಲ್ಲೂ ಪ್ರತಿಧ್ವನಿಸಿತು. 300 ಸೀಟುಗಳನ್ನು ದಾಟುತ್ತೇವೆ ಎಂದು ಬೀಗುತ್ತಿದ್ದ ಬಿಜೆಪಿ ನಾಯಕರು, ಸ್ವಂತ ಬಲವಿಲ್ಲದೆ ಬೇರೆ ಪಕ್ಷಗಳ ಜೊತೆಗೂಡಿ ಸರ್ಕಾರ ರಚಿಸಬೇಕಾದ ದುರಂತ ಸೃಷ್ಟಿಯಾಯಿತು. ಕರ್ನಾಟಕದಲ್ಲಿ ಬಿಜೆಪಿ ಸಂಪೂರ್ಣ ದುರ್ಬಲವಾಗಲು

ಹಾಗೂ ದೇಶದಲ್ಲಿ ಸ್ವಂತ ಬಲವನ್ನು ಕಳೆದುಕೊಳ್ಳಲು ಕಾರಣವಾದ ಅಂಶಗಳಲ್ಲಿ ಬೆಲೆ ಏರಿಕೆ ಮುಖ್ಯ ಪಾತ್ರ ವಹಿಸಿತ್ತು. ನಂದಿನಿ ಹಾಲಿನ ದರ ಪರಿಷ್ಕರಣೆಯ ಸಮಯದಲ್ಲಿ ಈ ಇತಿಹಾಸವನ್ನು ಬಿಜೆಪಿ ನಾಯಕರು ಮರೆತಿದ್ದಾರೆ.

ನಂದಿನಿ ಬಗ್ಗೆ ಇಷ್ಟು ಪ್ರೀತಿ ತೋರಿಸುವವರು, ಕೇಂದ್ರ ಸಹಕಾರ ಸಚಿವ ಅಮಿತ್ ಶಾ, ಅಮೂಲ್ ಜೊತೆಗೆ ಕೆಎಂಎಫ್ ವಿಲೀನದ ಬಗ್ಗೆ ಪ್ರಸ್ತಾಪ ಮಾಡಿದ್ದಾಗ ಅದನ್ನೂ ಸಮರ್ಥಿಸಿಕೊಂಡಿದ್ದರು.

ಇದೇ ಏಪ್ರಿಲ್ 1 ರಿಂದ ಹೆದ್ದಾರಿಗಳ ಟೋಲ್ ಶುಲ್ಕ ಶೇ.3 ರಿಂದ ಶೇ.5 ರಷ್ಟು ಹೆಚ್ಚಾಗಿದೆ. ಮಧುಮೇಹ ಹಾಗೂ ಕ್ಯಾನ್ಸರ್ ರೋಗಗಳ ಔಷಧಿಗಳ ಬೆಲೆಗಳನ್ನು ಹೆಚ್ಚಿಸಲಾಗಿದೆ. ಇದರ ಜೊತೆಗೆ ಅಡುಗೆ ಅನಿಲದ ಬೆಲೆ ಏರುತ್ತಲೇ ಇದೆ. ಈ ಬಗ್ಗೆ ಬಿಜೆಪಿಯಿಂದ ಯಾವುದೇ ದೂರುಗಳಿಲ್ಲ.

### ದರ ಪರಿಷ್ಕರಣೆ ಏಕೆ ಬೇಕಿತ್ತು?

ಈ ಸಮಯದಲ್ಲಿ ದರ ಏರಿಕೆ ಬೇಕಿತ್ತೆ ಎಂದು ಪ್ರಶ್ನೆ ಮಾಡುವವರು ರಾಜ್ಯದ ಅನ್ನದಾತರ ಬಗ್ಗೆ ಸ್ವಲ್ಪ ಚಿಂತಿಸಬೇಕಿದೆ. ಗ್ರಾಹಕರಿಗೆ ಹೆಚ್ಚಿನ ಹೊರೆಯಾಗದಂತೆ ಹಾಗೂ ಹೈನುಗಾರರ ನೆರವಿಗೆ ಧಾವಿಸಲು ದರ ಹೆಚ್ಚಳ ಮಾಡಲಾಗಿದೆ. ನಮ್ಮ ರೈತರಿಗಾಗಿ ಹಾಗೂ ಅಭಿವೃದ್ಧಿ ಕಾರ್ಯಗಳಿಗಾಗಿ ನ್ಯಾಯವಾಗಿ ಬರಬೇಕಿದ್ದ ತೆರಿಗೆ ಹಂಚಿಕೆ ಹಾಲನ್ನು ಹಲವಾರು ಬಾರಿ ಕೇಳಲಾಗಿದೆ. ಅದರೂ ಕೇಂದ್ರ ಸರ್ಕಾರ ಈ ಬಗ್ಗೆ ತಲೆ ಕೆಡಿಸಿಕೊಂಡಿಲ್ಲ. ಬಿಜೆಪಿ ಸಂಸದರು ಅಥವಾ ಶಾಸಕರು ರಾಜ್ಯಕ್ಕೆ ನ್ಯಾಯವಾಗಿ ಬರಬೇಕಿರುವ ತೆರಿಗೆ ಹಾಲನ್ನು ಕೇಳಲು ನಮ್ಮೊಂದಿಗೆ ಕೈ ಜೋಡಿಸಿಲ್ಲ. ಇಂತಹ ಪರಿಸ್ಥಿತಿಯಲ್ಲಿ, ರೈತರ ಆರ್ಥಿಕ ಮಟ್ಟವನ್ನು ಸುಸ್ಥಿರಗೊಳಿಸಲು ಈ ನಿರ್ಧಾರಕ್ಕೆ ಬರಲಾಗಿದೆ.

ಆದರೂ ಇಲ್ಲಿ ಗ್ರಾಹಕರ ಹಿತವನ್ನು ಕೂಡ ಪರಿಗಣಿಸಿ ಅತಿ ಕಡಿಮೆ ಮಟ್ಟದಲ್ಲಿ ಹಾಲು ಹಾಗೂ ಮೊಸರಿನ ದರವನ್ನು 4 ರೂ.ನಂತೆ ಪರಿಷ್ಕರಿಸಲಾಗಿದೆ. ಹೈನುಗಾರಿಕೆ ಉದ್ಯಮ ಲಾಭದಾಯಕವಾಗಿದ್ದರೂ, ಅದರ ನಿರ್ವಹಣೆ ಸವಾಲಿನದ್ದು. ಪಶು ಆಹಾರ ಉತ್ಪಾದನೆಗೆ ಬಳಸುವ ಮೆಕ್ಕೆಜೋಳ, ಅಕ್ಕಿ ತೌಡು, ಹತ್ತಿಕಾಳು ಹಿಂಡಿ, ಖನಿಜ ಪದಾರ್ಥಗಳ ದರ ಶೇ.35–40 ರಷ್ಟು ಏರಿಕೆಯಾಗಿದೆ. ಹೆಚ್ಚಿಸಿದ ದರದ ಲಾಭವನ್ನು ನೇರವಾಗಿ ಹೈನುಗಾರರಿಗೆ ತಲುಪಿಸುವಂತೆ ಕ್ರಮ ವಹಿಸಲಾಗಿದೆ ಎಂಬುದನ್ನು ಇಲ್ಲಿ ಗಮನಿಸಬೇಕಿದೆ.


ಗುಣಮಟ್ಟದಲ್ಲಿ ಅತ್ಯಂತ ಜನಪ್ರಿಯವಾಗಿರುವ ನಂದಿನಿ ಹಾಲು ಹಾಗೂ ಕೆಎಂಎಫ್ ಉತ್ಪನ್ನಗಳ ಮಾರುಕಟ್ಟೆಯನ್ನು ದೇಶಾದ್ಯಂತ ವಿಸ್ತರಿಸಲಾಗಿದೆ. ಇತ್ತೀಚೆಗೆ ರಾಜಧಾನಿ ದೆಹಲಿಯಲ್ಲೂ ಉತ್ತಮ ಮಾರುಕಟ್ಟೆಯನ್ನು ನಂದಿನಿ ಸ್ಥಾಪಿಸಿಕೊಂಡಿದೆ. ಇದಕ್ಕೆ ಬೇಕಾದ ಎಲ್ಲ ಬಗೆಯ ಪ್ರೋತ್ಸಾಹಗಳನ್ನು ನೀಡಲಾಗಿದೆ. ಈಗ ದರ ಪರಿಷ್ಕರಣೆ ಕೂಡ ಪ್ರೋತ್ಸಾಹದ ಒಂದು ಸಣ್ಣ ಭಾಗವಷ್ಟೆ.

ಇಷ್ಟಕ್ಕೂ ದರ ಪರಿಷ್ಕರಣೆ ಎಂದಾಕ್ಷಣ ಜನರು ಬೆಚ್ಚಿ ಬೀಳುವಂತೆ ಅಪಪ್ರಚಾರ ಮಾಡುವುದು ಬೇಕಿರಲಿಲ್ಲ. ಏಕೆಂದರೆ ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಂದಿನಿ ಹಾಲಿನ ದರ ಬಹಳ ಕಡಿಮೆಯೇ ಇದೆ. ಕೇರಳದ ಮಲಬಾರ್ ಹಾಲು ಒಕ್ಕೂಟದ ಹಾಲಿನ ದರ ಲೀಟರ್ಗೆ 52 ರೂ., ಗುಜರಾತ್ನ ಬನಸ್ಕಾಂತದ ಹಾಲಿನ ದರ ಲೀಟರ್ಗೆ 53 ರೂ., ಮಹಾರಾಷ್ಟ್ರದ ಕೊಲ್ಲಾಪುರದ ಹಾಲಿನ ದರ ಲೀಟರ್ಗೆ 52 ರೂ., ಅಸ್ಸಾಂನ ಪಮುಲ್ನ ಹಾಲಿನ ದರ ಲೀಟರ್ಗೆ 60 ರೂ., ಹರಿಯಾಣದ ಅಂಬಲದ ಹಾಲಿನ ದರ ಲೀಟರ್ಗೆ 56 ರೂ., ರಾಜಸ್ತಾನದ ಜೈಪುರ ಹಾಲಿನ ದರ ಲೀಟರ್ಗೆ 50 ರೂ. ಇದೆ. ಆದರೆ ಕರ್ನಾಟಕದ ಕೆಎಂಎಫ್ನ ಹಾಲು ಲೀಟರ್ಗೆ 46 ರೂ. ನಲ್ಲಿ ದೊರೆಯುತ್ತದೆ. ದೇಶದ ಮಾರುಕಟ್ಟೆಯಲ್ಲಿ ಅತಿ ಕಡಿಮೆ ದರಕ್ಕೆ ನಂದಿನಿ ಹಾಲು ಜನರ ಕೈ ಸೇರುವಂತೆ ದರದಲ್ಲೂ ಗುಣಮಟ್ಟವನ್ನು ಕಾಯ್ದುಕೊಳ್ಳಲಾಗಿದೆ.

### ತೆರಿಗೆ ಪಾಲಿನ ಬಗ್ಗೆ ಪ್ರಶ್ನಿಸೋಣ

ಒಂದು ಉದಾಹರಣೆ ನೋಡಿ. ವಿಜಯಪುರ ಜಿಲ್ಲೆಯ ಇಂಡಿಯ ಬಬಲಾದ ಗ್ರಾಮದ 20 ಮಹಿಳೆಯರು 'ಒಡಲ ಧ್ವನಿ' ಎಂಬ ಸಂಘ ರಚಿಸಿಕೊಂಡು ಹೋಳಿಗೆ ತಯಾರಿಸಿ, ಬೆಂಗಳೂರಿನಲ್ಲಿ ಮಾರಾಟ ಮಾಡುತ್ತಿದ್ದಾರೆ. ಇವರು ವಿಜಯಪುರದಿಂದ ಬೆಂಗಳೂರಿಗೆ ಬರಲು ಶಕ್ತಿ ಯೋಜನೆಯ ಉಚಿತ ಬಸ್ ನೆರವಾಗಿದೆ. ಇದೇ ರೀತಿ 200 ಯುನಿಟ್ ಉಚಿತ ವಿದ್ಯುತ್, ಅನ್ನಭಾಗ್ಯ, 2,000 ರೂ. ನೀಡುವ ಗೃಹಲಕ್ಷ್ಮಿ ಗ್ಯಾರಂಟಿಗಳ ಮೂಲಕ ಕೋಟ್ಯಂತರ ಜನರ ಬದುಕನ್ನು ಕಟ್ಟಿಕೊಡುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ. ಈ ಯೋಜನೆಗಳಿಂದಾಗಿ ಜನರ ಮನೆಯ ತಿಂಗಳ ಬಜೆಟ್ನಲ್ಲಿ ಉಳಿತಾಯ ಇನ್ನಷ್ಟು ಹೆಚ್ಚಾಗಿದೆ. ಬೆಲೆಗಳನ್ನು ಬೇಕಾಬಿಟ್ಟಿಯಾಗಿ ಏರಿಸಿ, ಕರ್ನಾಟಕಕ್ಕೆ ನ್ಯಾಯದ ಪಾಲನ್ನು ನೀಡದೆ ಅನ್ಯಾಯ ಮಾಡುತ್ತಿರುವುದು ಬಿಜೆಪಿ ಮಾತ್ರ. ಬೆಲೆ ಏರಿಕೆಯ ವಿಚಾರದಲ್ಲಿ ಹಾಗೂ ತೆರಿಗೆ ಮರು ಹಂಚಿಕೆಯ ವಿಚಾರದಲ್ಲಿ ಕೇಳಬೇಕಾದ ಪ್ರಶ್ನೆಗಳನ್ನು ಮರೆಮಾಚಿ, ಹಾಲಿನ ದರ ಪರಿಷ್ಕರಣೆ ಬಗ್ಗೆ ಸುಖಾಸುಮ್ಮನೆ ರಾಜಕೀಯ ಟೀಕೆಗಳನ್ನು ಮಾಡುವುದರಿಂದ ಜನರ ಹಿತ ಕಾಯುವಂತಾಗುವುದಿಲ್ಲ. ರಾಜ್ಯಗಳಿಗೆ ನೀಡುವ ತೆರಿಗೆ ಹಾಲನ್ನು ಶೇ.41 ರಿಂದ ಶೇ.40 ಕ್ಕೆ ಇಳಿಸಲು ಕೇಂದ್ರ ಸರ್ಕಾರ ಹಣಕಾಸು ಆಯೋಗಕ್ಕೆ ಸೂಚನೆ ನೀಡಿದೆ. 15 ನೇ ಹಣಕಾಸು ಆಯೋಗ ತೆರಿಗೆ ಹಂಚಿಕೆಯ ಪ್ರಮಾಣವನ್ನು ಶೇ.4.71 ರಿಂದ ಶೇ.3.64ಕ್ಕೆ ಇಳಿಸಿದ್ದರಿಂದ ಕರ್ನಾಟಕಕ್ಕೆ ಕಳೆದ 5 ವರ್ಷಗಳಲ್ಲಿ 68,775 ಕೋಟಿ ರೂ. ನಷ್ಟವಾಗಿದೆ. ನಾವೆಲ್ಲರೂ ಒಂದಾಗಿ ಪ್ರಶ್ನಿಸಬೇಕಾ ಗಿರುವುದು ರಾಜ್ಯಕ್ಕೆ ಬರಬೇಕಿರುವ ತೆರಿಗೆ ಹಂಚಿಕೆಯ ಹಾಲು ಎಂಬುದನ್ನು ಸದಾ ನೆನಪಿಡೋಣ.

**********



ಲೇಖಕರು,
– ಡಿ.ಕೆ.ಶಿವಕುಮಾರ್
ಉಪಮುಖ್ಯಮಂತ್ರಿ,
ಕರ್ನಾಟಕ

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# 18 ಬಿಜೆಪಿ ಶಾಸಕರನ್ನು ಆರು ತಿಂಗಳ ಕಾಲ ಅಮಾನತುಗೊಳಿಸಿರುವುದು ಸಂವಿಧಾನಬಾಹಿರ; ಬಿಜೆಪಿ

**ಬೆಂಗಳೂರು, ಏಪ್ರಿಲ್ 02:** ಸ್ಪೀಕರ್ ಅವರು ಕಾಂಗ್ರೆಸ್ ಪಕ್ಷದ ಕೈಗೊಂಬೆಯಾಗಿ ವರ್ತಿಸುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ಆರೋಪಿಸಿದ್ದಾರೆ.ಬಿಜೆಪಿಯ 18 ಶಾಸಕರನ್ನು ಆರು ತಿಂಗಳ ಕಾಲ ಅಮಾನತು ಮಾಡಿದ ಕ್ರಮವನ್ನು ಖಂಡಿಸಿ ಬೆಂಗಳೂರಿನ ವಿಧಾನ ಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಇಂದು ಪ್ರತಿಭಟನೆ ನಡೆಯಿತು. ಈ ಸಂದರ್ಭದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬಿಜೆಪಿಯ 18 ಶಾಸಕರ ಅಮಾನತು ಕ್ರಮ ಸಂವಿಧಾನಬಾಹಿರ ಎಂದು ಆಕ್ಷೇಪಿಸಿದರು.ಜನಪ್ರತಿನಿಧಿಯನ್ನು 6 ತಿಂಗಳ ಕಾಲ ಅಮಾನತು ಮಾಡಿ, ವಿಧಾನಸೌಧದ ಮೊಗಸಾಲೆಗೂ ಬರಬಾರದೆಂದು ಆದೇಶ ಮಾಡಿದ್ದಾರೆ. ಸ್ಪೀಕರ್ ಅವರು ಖಂಡಿತವಾಗಿ ಆಡಳಿತ ಪಕ್ಷದ ಕೈಗೊಂಬೆಯಾಗಿ ಹಾಗೂ ಮುಖ್ಯಮಂತ್ರಿಗಳನ್ನು ತೃಪ್ತಿಪಡಿಸಲು ಕಾನೂನು ಬಾಹಿರವಾಗಿ ಹಾಗೂ ಸಂವಿಧಾನಕ್ಕೆ ವಿರುದ್ಧವಾಗಿ ಈ ರೀತಿ ಆದೇಶ ಮಾಡಿದ್ದಾರೆ ಎಂದು ಟೀಕಿಸಿದರು.ಅಮಾನತು ಹಿಂಪಡೆಯುವುದಾಗಿ ಹೇಳಿಕೆ ನೀಡಿದ್ದ ಸ್ಪೀಕರ್ ಅವರು ಯಾತಕ್ಕೋಸ್ಕರ ಕಾಯುತ್ತಿದ್ದಾರೆ ಎಂದು ಪ್ರಶ್ನಿಸಿದರು. ತಮ್ಮ ನಿರ್ಣಯ ಸಂವಿಧಾನವಿರೋಧಿ ಎಂಬುದು ಸ್ಪೀಕರ್ ಅವರಿಗೂ ಅರ್ಥವಾಗಿದೆ. ಆದರೂ ಕೂಡ ಆಡಳಿತ ಪಕ್ಷದ ಒತ್ತಡಕ್ಕೆ ಮಣಿದು ಸ್ಪೀಕರ್ ಅವರು ಭಂಡತನ ಪ್ರದರ್ಶಿಸುತ್ತಿದ್ದಾರೆ ಎಂದು ಆರೋಪಿಸಿದರು.ಇದು ಮತದಾರರಿಗೆ ಮಾಡಿದ ಅವಮಾನ ಎಂದರಲ್ಲದೆ, 18 ಶಾಸಕರ ಅಮಾನತನ್ನು ತಕ್ಷಣ ಹಿಂದಕ್ಕೆ ಪಡೆಯಲು




ಆಗ್ರಹಿಸಿದರು. ಅಮಾನತು ಹಿಂಪಡೆಯುವ ವರೆಗೆ ಬಿಜೆಪಿಯ ಶಾಸಕರು ಕಮಿಟಿ ಮೀಟಿಂಗ್‌ನಲ್ಲಿ ಭಾಗವಹಿಸುವುದಿಲ್ಲ ಎಂದು ಪಕ್ಷದ ನಿರ್ಧಾರವನ್ನು ತಿಳಿಸಿದರು.

### ಶಾಸಕರ ಅಮಾನತು ಆದೇಶ ವಾಪಸ್ ಪಡೆಯಿರಿ, ಇಲ್ಲವಾದರೆ ತೀವ್ರ ಹೋರಾಟ: ಆರ್.ಅಶೋಕ

ಬಿಜೆಪಿಯ 18 ಶಾಸಕರ ಅಮಾನತು ಆದೇಶ ವಾಪಸ್ ಪಡೆಯದೇ ಹೋದಲ್ಲಿ ತೀವ್ರ ಹೋರಾಟ ಮಾಡಲಾಗುವುದು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಎಚ್ಚರಿಕೆ ನೀಡಿದರು. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಸ್ಲಿಮರಿಗೆ ನೀಡಿದ ಮೀಸಲಾತಿಯನ್ನು ವಿರೋಧಿಸಿ ಹಾಗೂ ಹನಿಟ್ರ್ಯಾಪ್ ಪ್ರಕರಣ ಖಂಡಿಸಿ 18 ಶಾಸಕರು ಪ್ರತಿಭಟನೆ ಮಾಡಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಕುರಿತು ಸಿಬಿಐ, ಎಸ್‌ಐಟಿ ಅಥವಾ ಯಾವುದೇ ತನಿಖೆ ಮಾಡುವುದಾಗಿ ಹೇಳಿದ್ದರೆ ಅಥವಾ ಸ್ಪಷ್ಟತೆ ನೀಡಿದ್ದರೆ ಪ್ರತಿಭಟನೆ ಕೈ ಬಿಡಬಹುದಿತ್ತು. ಸಿದ್ದರಾಮಯ್ಯನವರು ಪೊಲೀಸ್ ಕಮೀಷನರ್ ಬ್ಯಾಡ್ಜ್ ಕಿತ್ತು ಹಾಕಿ, ಬಾಗಿಲನ್ನು ಕಾಲಿನಲ್ಲಿ ಒದ್ದಿದ್ದರು ಎಂದು ನೆನಪಿಸಿಕೊಂಡರು. ಅಮಾನತು ಸಮಯದಲ್ಲಿ ಸ್ಪೀಕರ್ ಯು.ಟಿ.ಖಾದರ್ ಸೌಜನ್ಯಕ್ಕೂ ಶಾಸಕರನ್ನು ಕರೆದು ಮಾತಾಡಿಲ್ಲ ಎಂದು ದೂರಿದರು. ಸ್ಪೀಕರ್ ಕಾಂಗ್ರೆಸ್ ಸರ್ಕಾರದ ಪರವಾಗಿ ನಿಂತಿದ್ದಾರೆ.

ಈಗ ಸಚಿವ ಸಂಪುಟ ಪುನರ್ ರಚನೆಯಾಗಲು ಸಿದ್ಧತೆ ನಡೆದಿದೆ. ಇಂತಹ ಸಮಯದಲ್ಲಿ ವಿರೋಧ ಪಕ್ಷದ ಸದಸ್ಯರ ವಿರುದ್ಧ ಕ್ರಮ ಕೈಗೊಂಡರೆ ಸಚಿವ ಸ್ಥಾನ ಸಿಗಬಹುದು ಎಂಬ ನಿರೀಕ್ಷೆ ಸ್ಪೀಕರ್ ಯು.ಟಿ.ಖಾದರ್ ಅವರಿಗಿದೆ. ಸಭಾಧ್ಯಕ್ಷರ ಪೀಠ ಬಹಳ ಪವಿತ್ರವಾದುದು. ಸದನ ನಡೆಯದೆ ಇರುವಾಗ ಸ್ಪೀಕರ್ ಪೀಠದಲ್ಲಿ ಕುಳಿತು ನಿಮ್ಮ ಸಂಬಂಧಿಗಳು, ಧರ್ಮಗುರುಗಳ ಜೊತೆ ಫೋಟೊ ತೆಗೆಸಿಕೊಳ್ಳುವುದು ನ್ಯಾಯವೇ ಇದು ಪ್ರಜಾಪ್ರಭುತ್ವವೇ ಇಂಥ ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು. ಮುಸ್ಲಿಮರಿಗೆ ಶೇ. 4 ಮೀಸಲಾತಿ ಮಸೂದೆ ವಿಚಾರದಲ್ಲಿ ಸ್ಪೀಕರ್ ಕುತಂತ್ರ ಮಾಡಿದ್ದಾರೆ. ಸ್ಪೀಕರ್ ಹುದ್ದೆ ಧರ್ಮ– ಮತೀಯ– ಪಕ್ಷಾಧಾರಿತವಲ್ಲ ಎಂದು ವಿವರಿಸಿದರು. ಆದರೆ ಶಾಸಕರು ಪೀಠದ ಬಳಿ ಬಂದು ಪ್ರತಿಭಟನೆ ಮಾಡಿದರೆ ಅವರನ್ನು ಅಮಾನತು ಮಾಡಲಾಗುತ್ತದೆ.



ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮಾತನಾಡಿ, ಶಾಸಕರ ಅಮಾನತು ಮಾಡುವ ಮೂಲಕ ಪ್ರತಿಪಕ್ಷಗಳನ್ನು ಹಣಿಯುವ ಸರ್ಕಾರದ ಪ್ರಯತ್ನಕ್ಕೆ ನಾವು ಜಗ್ಗಲ್ಲ, ಬಗ್ಗಲ್ಲ. ಇನ್ನು 6 ತಿಂಗಳು ಶಾಸಕರನ್ನು ಅಮಾನತು ಮಾಡಿದರೂ ನಾವು ಹೆದರಲ್ಲ. ರಾಜ್ಯಪಾಲರನ್ನು ಭೇಟಿ ಮಾಡಿ ಅವರಿಗೂ ಮನವಿ ಮಾಡುತ್ತೇವೆ. ಕೂಡಲೇ ಶಾಸಕರ ಅಮಾನತು ವಾಪಸ್ ಪಡೆಯಬೇಕು ಎಂದರು.



ಇದೇ ಸಂದರ್ಭದಲ್ಲಿ ಮಾತನಾಡಿದ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ವಿಧಾನಸಭಾಧ್ಯಕ್ಷರು ಮಂತ್ರಿಗಿರಿಗಾಗಿ ಈ ಕೆಲಸ ಮಾಡಿದ್ದಾರೆ. ಇವರ ತೀರ್ಮಾನ ಸರಿಯಲ್ಲ. ಶಾಸಕರನ್ನು ಸದನದ ಅವಧಿಗೆ ಮಾತ್ರ ಅಮಾನತ್ತು ಮಾಡಬಹುದು. 90 ದಿನ ಅಮಾನತ್ತು ಮಾಡಿದರೆ ಕಷ್ಟ. ಶಾಸಕರ ಸದಸ್ಯತ್ವವೇ ಹೋಗುತ್ತದೆ, ಹೀಗಿರುವಾಗ 6 ತಿಂಗಳು ಶಾಸಕರನ್ನು ಅಮಾನತ್ತು ಮಾಡಿರುವುದು ಖಂಡನೀಯ ಎಂದರು.

ಸ್ಪೀಕರ್ ಕೂಡಲೇ ಅಮಾನತು ಆದೇಶ ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ರಾಜ್ಯಪಾಲರನ್ನೂ ಭೇಟಿ ಮಾಡುತ್ತೇವೆ ಎಂದು ಪ್ರಕಟಿಸಿದರು.

ಮೊದಲನೇ ಪುಟದಿಂದ

## ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಭೇಟಿ ಮಾಡಿದ ಸಿಎಂ ಸಿದ್ದರಾಮಯ್ಯ

ವರೆಗೆ ಸುರಂಗ ನಿರ್ಮಾಣ ಮಾಡುವ ಮೂಲಕ ಮಂಗಳೂರು ಬಂದರು (ದೇಶದ 7ನೇ ಅತಿ ದೊಡ್ಡ ಬಂದರು) ಮತ್ತು ರಾಜ್ಯ ರಾಜಧಾನಿ ಬೆಂಗಳೂರಿನ ನಡುವೆ ಸಂಪರ್ಕವನ್ನು ಸುಧಾರಿಸುವುದು. ಪುಣೆ– ಬೆಂಗಳೂರು ಗ್ರೀನ್ ಫೀಲ್ಡ್ ಎಕ್ಸ್‌ಪ್ರೆಸ್‌ವೇಯನ್ನು ಶೀಘ್ರವಾಗಿ ಮಂಜೂರು ಮಾಡುವುದು. ಮುಂಬರಲಿರುವ ವಾರ್ಷಿಕ ಯೋಜನೆ 20205–26 ರಡಿ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು 24000 ಕೋಟಿಗಳಿಗೆ ಹೆಚ್ಚಿಸಿ ಮಂಜೂರು ಮಾಡುವುದು. ಬೆಂಗಳೂರಿ ನಗರದ ಹೆಬ್ಬಾಳ ಜಂಕ್ಷನ್ ನ ರಾಷ್ಟ್ರೀಯ ಹೆದ್ದಾರಿ– 44 ರಲ್ಲಿ ಮೇಲ್ಸೇತುವೆ ನಿರ್ಮಾಣ. ತಾತ್ವಿಕವಾಗಿ ಘೋಷಿತವಾಗಿರುವ ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಆದ್ಯತೆ ಮೇಲೆ ಮೇಲ್ದರ್ಜೆಗೇರಿಸುವುದು.

ಬೆಂಗಳೂರು ನಗರದಲ್ಲಿ ಮೈಸೂರು ರಸ್ತೆಯನ್ನು ಸಂಪರ್ಕಿಸುವ ಸುರಂಗದ ನಿರ್ಮಾಣ ( ರಾ.ಹೆ– 275) ಮತ್ತು ಹೊಸೂರು ರಸ್ತೆ (ರಾ.ಹೆ–48 ಮತ್ತು ರಾ.ಹೆ–75) (ಎಲೆಕ್ಟ್ರಾನಿಕ್ ಸಿಟಿ) ಮಾರ್ಗವಾಗಿ ತುಮಕೂರು ರಸ್ತೆ (ರಾ.ಹೆ–48), ಬಳ್ಳಾರಿ ರಸ್ತೆ (ರಾ.ಹೆ–44) ಮತ್ತು ಹಳೆ ಮದ್ರಾಸು ರಸ್ತೆ (ಹಳೆ ರಾ.ಹೆ –4), ಬೆಳಗಾವಿ ನಗರ ಸಂಚಾರ ದಟ್ಟಣೆಯನ್ನು ಸುಗಮಗೊಳಿಸಲು ಬೆಳಗಾವಿ ನಗರದ ರಾ.ಹೆ–4 ರಲ್ಲಿ ಎಲಿವೇಟೆಡ್ ಕಾರಿಡಾರ್ ನಿರ್ಮಾಣ.ಕಲಬುರ್ಗಿ–ವಾಡಿ–ಯಾದಗಿರಿ–ಕೆಂದೆಚೂರ್–ಜಡ್ ಚೇರ್ಲಾ ವಿಭಾಗದಲ್ಲಿ ಚತುಷ್ಪಥ ರಸ್ತೆ ನಿರ್ಮಿಸಿ ರಸ್ತೆ ಅಗಲೀಕರಣ ಕೈಗೊಳ್ಳುವುದು. ರಾಜ್ಯದ ಯಾದಗಿರಿ ಜಿಲ್ಲೆಯಲ್ಲಿ ರಾ.ಹೆ 150ಎ (ಜೇವರ್ಗಿ– ಚಾಮರಾಜನಗರ ವಿಭಾಗ) ರಲ್ಲಿ ಭೀಮರಾಯನಗುಡಿ ಮತ್ತು ಶಹಪುರ ಪಟ್ಟಣಕ್ಕೆ 2 ಎಲ್+ ಪಿಎಸ್ ಗ್ರೀನ್ ಫೀಲ್ಡ್ ಸಂಯೋಜಿತ ಬೈಪಾಸ್ ನಿರ್ಮಾಣ. ಕರ್ನಾಟಕ ರಾಜ್ಯದಲ್ಲಿ ಎಸ್ ಪಿ ಯು ಆರ್ ಅಡಿಯಲ್ಲಿ ರಾ.ಹೆ–752ಕೆ ನಿಂದ ರಾ.ಹೆ –65 ವರೆಗೆ ರಾಷ್ಟ್ರೀಯ ಹೆದ್ದಾರಿ ಎಂದು ಘೋಷಿಸುವುದು. ಕರ್ನಾಟಕ ರಾಜ್ಯದಲ್ಲಿ ಎಸ್ ಪಿ ಯು ಆರ್ ಅಡಿಯಲ್ಲಿ ದೇವಲ್ ಗಾಣಗಾಪುರದಿಂದ ಪಂಡರಾಪುರವರೆಗಿನ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ ಎಂದು ಘೋಷಿಸುವುದು. ಈ ಎಲ್ಲಾ ಪ್ರಸ್ತಾವನೆಗಳನ್ನು ಪರಿಗಣಿಸಿ ಮಂಜೂರಾತಿಗಳನ್ನು ನೀಡಲು ಸಂಬಂಧಿಸಿದವರಿಗೆ ಅಗತ್ಯ ನಿರ್ದೇಶನಗಳನ್ನು ನೀಡುವಂತೆ ಮುಖ್ಯಮಂತ್ರಿಗಳು ಕೇಂದ್ರ ಸಚಿವರನ್ನು ಪತ್ರದಲ್ಲಿ ಕೋರಿದ್ದಾರೆ.

## ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿಯಾದ ಸಂಸದ ಕ್ಯಾ. ಬ್ರಿಜೇಶ್ ಚೌಟ

ನವದೆಹಲಿ: ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ತಮ್ಮ ತಂದೆ–ತಾಯಿ ಜತೆಗೆ ಇಂದು ನವದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಸೌಜನ್ಯದ ಭೇಟಿ ಮಾಡಿದ್ದಾರೆ. ಕ್ಯಾ. ಚೌಟ ಅವರು ತಮ್ಮ ತಂದೆ ಸೇಸಣ್ಣ ಚೌಟ ಹಾಗೂ ತಾಯಿ ಶ್ರೀಮತಿ ಪುಷ್ಪಾ ಚೌಟ ಅವರೊಂದಿಗೆ ನರೇಂದ್ರ ಮೋದಿ ಅವರನ್ನು ಪ್ರಧಾನಮಂತ್ರಿಗಳ ಕಚೇರಿಯಲ್ಲಿ ಭೇಟಿ ಮಾಡಿ ಅವರ ಆಶೀರ್ವಾದ ಹಾಗೂ ಮಾರ್ಗದರ್ಶನವನ್ನು ಪಡೆದುಕೊಂಡಿದ್ದಾರೆ. ಈ ಸಂದರ್ಭದಲ್ಲಿ ಕ್ಯಾ. ಚೌಟ ಅವರು ತುಳುನಾಡಿನ ಸಂಸ್ಕೃತಿಯ ಸಂಕೇತವಾಗಿರುವ ಪಿಲಿ ನಲಿಕೆಯಲ್ಲಿ ಪ್ರಧಾನವಾಗಿರುವ 'ಪಿಲಿ ಮಂಡೆ' ( ಹುಲಿ ವೇಷದ ಮುಖವಾಡ)ಯನ್ನು ಸ್ಮರಣಿಕೆ ರೂಪದಲ್ಲಿ ಪ್ರಧಾನಿಯವರಿಗೆ ನೀಡಿದರು. ಜತೆಗೆ, ಮಂಗಳೂರು ಕಂಬಳದ ಫೋಟೋ ಫ್ರೇಮ್ ಮತ್ತು ಕೊಲ್ಲೂರು ಶ್ರೀ ಮೂಕಾಂಬಿಕೆ ದೇವಸ್ಥಾನದ ಪ್ರಸಾದವನ್ನು ಕೂಡ ನೀಡುವ ಮೂಲಕ ಈ ಅಪೂರ್ವ ಅವಕಾಶ ಹಾಗೂ ಅತ್ಯಂತ ಗೌರವದ ಈ ಭೇಟಿಯನ್ನು ಸ್ಮರಣೀಯವಾಗಿಸಿಕೊಂಡರು.



ಭೇಟಿ ಬಳಿಕ ಪ್ರತಿಕ್ರಿಯಿಸಿರುವ ಸಂಸದ ಕ್ಯಾ ಚೌಟ, " ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ನನ್ನ ಹೆತ್ತವರ ಜತೆಗೆ ಭೇಟಿ ಮಾಡುವ ಅವಕಾಶ ಲಭಿಸಿರುವುದು ಬದುಕಿನಲ್ಲಿನ ಬಹಳ ಖುಷಿಯ ಹಾಗೂ ಸಂತೃಪ್ತಿಯ ಭಾವವನ್ನು ಮೂಡಿಸಿದೆ. ಅವರೊಂದಿಗಿನ ಈ ಭೇಟಿ ವೇಳೆ ಹಲವು ವಿಚಾರಗಳ ಕುರಿತು ಮಾಹಿತಿ ಹಂಚಿಕೊಂಡಿದ್ದಾರೆ. ಅದರಲ್ಲಿಯೂ ನಮ್ಮ ಕರಾವಳಿ ಬಗೆಗಿನ ಕಲೆ–ಸಂಸ್ಕೃತಿ, ಪರಂಪರೆ ಬಗ್ಗೆ ಅವರಿಗಿರುವ ಅಗಾಧ ಜ್ಞಾನವು ನನಗೆ ಬಹಳ ಸ್ಫೂರ್ತಿ ಹಾಗೂ ಹೆಮ್ಮೆಯ ಕ್ಷಣವಾಗಿ ಬಹಳ ಕಾಲ ನೆನೆಪಿನಲ್ಲಿ ಉಳಿಯುವಂತೆ ಮಾಡಿದೆ. ವಿಶ್ವದ ಮಹಾನ್ ನಾಯಕರಾಗಿರುವ ಮೋದಿ ಅವರು ನನ್ನ ಬೆನ್ನುತಟ್ಟಿ ನೀಡಿದ ಪ್ರೋತ್ಸಾಹದಾಯಕ ಮಾತುಗಳನ್ನು ನನಗೆ ಜನಸೇವೆಗೆ ಮತ್ತಷ್ಟು ಸ್ಫೂರ್ತಿಯನ್ನು ನೀಡಿದೆ ಎಂದಿದ್ದಾರೆ.

ನಮ್ಮ ಹೆಮ್ಮೆಯ ಪ್ರಧಾನಿಮಂತ್ರಿ ಮೋದಿ ಅವರನ್ನು ನನ್ನ ಹೆತ್ತವರೊಂದಿಗೆ ಭೇಟಿಯಾದ ಸಂದರ್ಭ ಅವಿಸ್ಮರಣೀಯವಾಗಿದ್ದು, ಒಬ್ಬ ಸಾಮಾನ್ಯ ಮಧ್ಯಮ ವರ್ಗದ ಕುಟುಂಬದಲ್ಲಿ ಹುಟ್ಟಿ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ಮತ್ತು ಪಾರ್ಟಿಯ ಸಾಮಾನ್ಯ ಕಾರ್ಯಕರ್ತನಾಗಿ ಸೇವೆ ಸಲ್ಲಿಸಿ ಇಂದು ವಿಶ್ವ ನಾಯಕನ ಜೊತೆ ನಿಲ್ಲುವ ಅವಕಾಶ ಸಿಕ್ಕಿದ್ದು ನನ್ನ ಪಾಲಿಗೆ ಅಮೂಲ್ಯವಾದದ್ದು. ರಾಜಕೀಯದಲ್ಲಿ ತೊಡಗಿಸುವ ಕನಸನ್ನು ನೆಟ್ಟು ಅದನ್ನು ನನಸಾಗಿಸುವ ಭರವಸೆ ನೀಡಿದ ಮಹಾನ್ ನಾಯಕ ಭೇಟಿಯಾದ ಈ ಕ್ಷಣವೂ ಅಪೂರ್ವವಾಗಿತ್ತು ಎಂದು ಕ್ಯಾ. ಚೌಟ ಕೃತಜ್ಞತೆ ವ್ಯಕ್ತಪಡಿಸಿದ್ದಾರೆ.


## ಬಾಲಾಜಿಕೃಪಾ ಪ್ರಾಜೆಕ್ಟ್ ಪ್ರೈವೇಟ್ ಲಿ. ಸಂಸ್ಥೆ ವತಿಯಿಂದ
## ಕರ್ನಾಟಕ ಸರ್ಕಾರಕ್ಕೆ ಧನ್ಯವಾದಗಳು





ಸನ್ಮಾನ್ಯ ಶ್ರೀ ಸಿದ್ದರಾಮಯ್ಯ
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಶ್ರೀ ಡಿ.ಕೆ.ಶಿವಕುಮಾರ್
ಉಪಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಶ್ರೀ ಸತೀಶ್ ಜಾರಕಿಹೊಳಿ
ಲೋಕೋಪಯೋಗಿ ಸಚಿವರು
ಕರ್ನಾಟಕ ಸರ್ಕಾರ

ಬೆಂಗಳೂರಿನ ಹೆಸರಾಂತ ಇಂಜಿನಿಯರ್ಸ್ ಮತ್ತು ಕಂಟ್ರಾಕ್ಟರ್ ಸಂಸ್ಥೆಯಾದ ಬಾಲಾಜಿಕೃಪಾ ಪ್ರಾಜೆಕ್ಟ್ ಪ್ರೈವೇಟ್ ಲಿ.ಗೆ ನವದೆಹಲಿಯಲ್ಲಿ "ಕರ್ನಾಟಕ ಭವನ-1' (ಕಾವೇರಿ) ವನ್ನು ನಿರ್ಮಾಣ ಮಾಡಲು ಅವಕಾಶ ಕೊಟ್ಟು ಎಲ್ಲ ರೀತಿಯಿಂದಲೂ ಸಹಕರಿಸಿದ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರಿಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಹಾಗೂ ಲೋಕೋಪಯೋಗಿ ಇಲಾಖೆ ಸಚಿವರಾದ ಶ್ರೀ ಸತೀಶ ಜಾರಕಿಹೊಳಿ ಅವರಿಗೆ ಹಾಗೂ ಎಲ್ಲ ಸಚಿವರಿಗೂ, ವಿರೋಧ ಪಕ್ಷಗಳ ನಾಯಕರಿಗೆ ಹಾಗೂ ಸರ್ಕಾರದ ಮುಖ್ಯಕಾರ್ಯದರ್ಶಿಗಳಾದ ಶ್ರೀಮತಿ ಡಾ.ಶಾಲಿನಿ ರಜನೀಶ್ ಅವರಿಗೆ, ಅಪರ ಮುಖ್ಯ ಕಾರ್ಯದರ್ಶಿಗಳಾದ ಶ್ರೀಗೌರವ್ ಗುಪ್ತ ಅವರಿಗೆ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ ( ಲೋಕೋಪಯೋಗಿ ಇಲಾಖೆ)ಗಳಾದ ಡಾ.ಎಸ್. ಸೆಲ್ವಕುಮಾರ್, ಕರ್ನಾಟಕ ಭವನದ ನಿವಾಸಿ ಆಯುಕ್ತರಾದ ಶ್ರೀಮತಿ ಇಮ್ ಕೊಂಗ್ಲ ಜಮೀರ್, ಸರ್ಕಾರದ ಕಾರ್ಯದರ್ಶಿಗಳಾದ ಶ್ರೀ ಮತಿ ಜಿ.ಸತ್ಯವತಿ ಹಾಗೂ ಶ್ರೀ ಸಿ. ಸತ್ಯನಾರಾಯಣ ಅವರಿಗೆ ಹಾಗೂ ಸರ್ಕಾರದ ಸಕಲ ಆಡಳಿತ ವರ್ಗಕ್ಕೆ ನಮ್ಮ ಸಂಸ್ಥೆಯ ಪರವಾಗಿ ಧನ್ಯವಾದಗಳು.

# 14/1, ಬಾಲಾಜಿಕೃಪಾ, 2ನೇ ಮುಖ್ಯರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560 020, ದೂರವಾಣಿ: 080-2346 2988, ಮೊಬೈಲ್.ನಂ. 98801 50207

# ವಕ್ಫ್ ತಿದ್ದುಪಡಿ ಮಸೂದೆಯ ಬಗ್ಗೆ ಅಮಿತ್ ಶಾ ಸ್ಪಷ್ಟನೆ



**ನವದೆಹಲಿ, ಏಪ್ರಿಲ್ 2:** ವಕ್ಫ್ (ತಿದ್ದುಪಡಿ) ಮಸೂದೆ, 2024 ರ ಬಗ್ಗೆ "ತಪ್ಪು ಮಾಹಿತಿ" ಹರಡಿದ್ದಕ್ಕಾಗಿ ಕಾಂಗ್ರೆಸ್ ಅನ್ನು ಬುಧವಾರ ತರಾಟೆಗೆ ತೆಗೆದುಕೊಂಡ ಕೇಂದ್ರ ಗೃಹ ಸಚಿವ ಅಮಿತ್ ಶಾ, ಮುಸ್ಲಿಮರ ಧಾರ್ಮಿಕ ವಿಷಯಗಳಲ್ಲಿ ಹಸ್ತಕ್ಷೇಪ ಮಾಡಲು ಈ ಕಾಯ್ದೆ ಪ್ರಯತ್ನಿಸುವುದಿಲ್ಲ ಎಂದು ಭರವಸೆ ನೀಡಿದರು. "ಈ ಕಾಯ್ದೆಯು ಮುಸ್ಲಿಮರ ಧಾರ್ಮಿಕ ನಡವಳಿಕೆಯಲ್ಲಿ ಹಸ್ತಕ್ಷೇಪ ಮಾಡುತ್ತದೆ ಮತ್ತು ಅವರು ದಾನ ಮಾಡಿದ ಆಸ್ತಿಯಲ್ಲಿ ಹಸ್ತಕ್ಷೇಪ ಮಾಡುತ್ತದೆ ಎಂಬುದು ದೊಡ್ಡ ತಪ್ಪು ಕಲ್ಪನೆ. ತಮ್ಮ ಮತ ಬ್ಯಾಂಕ್‌ಗಾಗಿ ಅಲ್ಪಸಂಖ್ಯಾತರಲ್ಲಿ ಭಯ ಹುಟ್ಟಿಸಲು ಈ ತಪ್ಪು ಕಲ್ಪನೆಯನ್ನು ಹರಡಲಾಗುತ್ತಿದೆ" ಎಂದು ಲೋಕಸಭೆಯಲ್ಲಿ ಶಾಸನದ ಮೇಲಿನ ಚರ್ಚೆಯಲ್ಲಿ ಭಾಗವಹಿಸುತ್ತಾ ಶಾ ಹೇಳಿದರು. ಧಾರ್ಮಿಕ ವಿಷಯದಲ್ಲಿ ಮಧ್ಯಪ್ರವೇಶಿಸುವ ಸಮಿತಿಯಲ್ಲಿ ಮುಸ್ಲಿಮೇತರರು ಇರುವುದಿಲ್ಲ ಎಂದು ಕೇಂದ್ರ ಗೃಹ ಸಚಿವರು ಸ್ಪಷ್ಟಪಡಿಸಿದರು ಮತ್ತು ವಕ್ಫ್ ಕಾನೂನಿನಡಿಯಲ್ಲಿ ಯಾರಾದರೂ ದಾನ ಮಾಡಿದ ಆಸ್ತಿಯ ಆಡಳಿತವನ್ನು ಮಾತ್ರ ಮುಸ್ಲಿಮೇತರರು ನೋಡಿಕೊಳ್ಳುತ್ತಾರೆ, ಅದನ್ನು ಕಾನೂನಿನ ಪ್ರಕಾರ ಮಾಡಲಾಗುತ್ತಿದೆಯೇ, ಆಸ್ತಿಯನ್ನು ದಾನ ಮಾಡಿದ ಉದ್ದೇಶಕ್ಕಾಗಿ ಬಳಸಲಾಗುತ್ತಿದೆಯೇ ಎಂದು ಹೇಳಿದರು. ಹೊಸ ಮಂಡಳಿಯಲ್ಲಿ 12 ಮುಸ್ಲಿಮೇತರರ ಆಯ್ಕೆಯ ಬಗ್ಗೆ ವಿರೋಧ ಪಕ್ಷಗಳು ಪ್ರಶ್ನೆಯನ್ನು ಎತ್ತಿದಾಗ ಶಾ ಈ ಹೇಳಿಕೆಗಳನ್ನು ನೀಡಿದರು. ವಕ್ಫ್ ಆಸ್ತಿಗಳ ಮೇಲಿನ ಯಾವುದೇ ವಿವಾದವನ್ನು ನ್ಯಾಯಾಲಯಗಳು ನಿರ್ಧರಿಸುತ್ತವೆ ಎಂದು ಅವರು ಪ್ರತಿಪಾದಿಸಿದರು, "ಸಾರ್ವಜನಿಕರು ತಮ್ಮ ಆಸ್ತಿಯನ್ನು ವಕ್ಫ್ ಸ್ವಾಧೀನಪಡಿಸಿಕೊಂಡರೆ, ಅವರು ನ್ಯಾಯಾಲಯಗಳನ್ನು ಬಿಟ್ಟು ಎಲ್ಲಿಗೆ ಹೋಗುತ್ತಾರೆ" ಎಂದು ಹೇಳಿದರು. ವಕ್ಫ್ ಮಂಡಳಿಯು ಶಾಸನಬದ್ಧ ಸಂಸ್ಥೆಯಾಗಿದೆ ಮತ್ತು ಮುಸ್ಲಿಂ ಸಮುದಾಯದ ವಿಶೇಷ ಕ್ಷೇತ್ರವಲ್ಲ ಎಂದು ಅವರು ಹೇಳಿದರು. "ಈ ಮಸೂದೆಯನ್ನು ಮುಸ್ಲಿಮರು ಸ್ವೀಕರಿಸುವುದಿಲ್ಲ ಎಂದು ಯಾರೋ ಹೇಳಿದರು, ಇವು ಯಾವ ಬೆದರಿಕೆಗಳು? ಸಂಸತ್ತಿನ ಕಾನೂನನ್ನು ಎಲ್ಲರೂ ಒಪ್ಪಿಕೊಳ್ಳಬೇಕು, ಎಂದು ಶಾ ಹೇಳಿದರು. ವಕ್ಫ್ ಅಡಿಯಲ್ಲಿರುವ ಆಸ್ತಿಯ ಬಗ್ಗೆ ವಿವರಗಳನ್ನು ನೀಡಿದ ಗೃಹ ಸಚಿವರು, 1913 ರಿಂದ 2013 ರವರೆಗೆ, 18 ಲಕ್ಷ ಎಕರೆ ಭೂಮಿ ವಕ್ಫ್ ನಿಯಂತ್ರಣದಲ್ಲಿತ್ತು, ಮತ್ತು ಅದು 2025 ರ ವೇಳೆಗೆ 21 ಲಕ್ಷ ಎಕರೆಗೆ ಏರಿತು ಮತ್ತು ಅವರು ಅದನ್ನು ದುರುಪಯೋಗ ಪಡಿಸಿಕೊಳ್ಳುತ್ತಿಲ್ಲ ಎಂದು ಹೇಳುತ್ತಿದ್ದಾರೆ ಎಂದು ಹೇಳಿದರು. 2001–12 ರ ನಡುವೆ, ಎರಡು ಲಕ್ಷ ಕೋಟಿ ರೂ. ಮೌಲ್ಯದ ವಕ್ಫ್ ಆಸ್ತಿಗಳನ್ನು 100 ವರ್ಷಗಳ ಗುತ್ತಿಗೆಯ ಮೇಲೆ ಖಾಸಗಿ ಸಂಸ್ಥೆಗಳಿಗೆ ವರ್ಗಾಯಿಸಲಾಯಿತು. ಬೆಂಗಳೂರಿನ ಹೈಕೋರ್ಟ್ ಮಧ್ಯಪ್ರವೇಶಿಸಿ 602 ಎಕರೆ ಭೂಮಿಯನ್ನು ಮುಟ್ಟುಗೋಲು ಹಾಕಿಕೊಳ್ಳುವುದನ್ನು ನಿಲ್ಲಿಸಬೇಕಾಯಿತು. ಈ ಹಣ ದೇಶದ ಬಡ ಮುಸ್ಲಿಮರಿಗೆ ಸೇರಿದ್ದು, ಶ್ರೀಮಂತರು ಕದಿಯಲು ಸಾಧ್ಯವಿಲ್ಲ. ಲೋಕಸಭೆಯಲ್ಲಿ ಮಸೂದೆಯ ಕುರಿತು ಹೆಚ್ಚಿನ ವಿವರಗಳನ್ನು ನೀಡಿದ ಗೃಹ ಸಚಿವರು, ?ಕೇವಲ ಘೋಷಣೆಯಿಂದ ಯಾವುದೇ ಭೂಮಿಯನ್ನು ವಕ್ಫ್ ಆಸ್ತಿಯನ್ನಾಗಿ ಮಾಡಲು ಸಾಧ್ಯವಿಲ್ಲ. "ಮಸೂದೆ ಅಂಗೀಕಾರದ ನಂತರ, ಶಿಯಾ, ಪಾಸ್ಮಾಂಡಾ, ಅಹ್ಮದಿಯಾ, ಬೊಹ್ರಿಸ್ ಆಗಿರಲಿ, ಎಲ್ಲಾ ಮುಸ್ಲಿಂ ಸಮುದಾಯಗಳು ವಕ್ಫ್ ಮೂಲಕ ಹೋಗುವ ಅಗತ್ಯವಿಲ್ಲ, ಟ್ರಸ್ಟ್‌ಗಳನ್ನು ನೋಂದಾಯಿಸಿಕೊಳ್ಳಬಹುದು" ಎಂದು ಅವರು ಹೇಳಿದರು.

# ವಕ್ಫ್ ಮಸೂದೆ ಸಂವಿಧಾನ ದುರ್ಬಲಗೊಳಿಸುವ ಯತ್ನ: ಗೌರವ್ ಗೊಗೊಯ್



**ನವದೆಹಲಿ, ಏ. 2:** ಬುಧವಾರ (ಏ.2) ಸಂಸತ್ತಿನಲ್ಲಿ ಮಂಡನೆಯಾದ ವಕ್ಫ್ ತಿದ್ದುಪಡಿ ಮಸೂದೆಯ ಕುರಿತು ಮಾತನಾಡಿದ ಲೋಕಸಭೆಯ ಪ್ರತಿಪಕ್ಷದ ಉಪ ನಾಯಕ ಹಾಗೂ ಕಾಂಗ್ರೆಸ್ ಸಂಸದ ಗೌರವ್ ಗೊಗೊಯ್ ನರೇಂದ್ರ ಮೋದಿ ಸರ್ಕಾರದ ವಕ್ಫ್ ತಿದ್ದುಪಡಿ ಮಸೂದೆ ಮೂಲಕ ಸಂವಿಧಾನವನ್ನು ದುರ್ಬಲಗೊಳಿಸಲು ಪ್ರಯತ್ನಿಸುತ್ತಿದೆ ಎಂದು ವಾಗ್ದಾಳಿ ನಡೆಸಿದರು. ಈ ಮಸೂದೆಯು ಸಂವಿಧಾನವನ್ನು ದುರ್ಬಲಗೊಳಿಸುವ, ಅಲ್ಪಸಂಖ್ಯಾತ ಸಮುದಾಯವನ್ನು ಅವಮಾನಿಸುವ, ಭಾರತೀಯ ಸಮಾಜವನ್ನು ವಿಭಜಿಸುವ ಮತ್ತು ಅಲ್ಪಸಂಖ್ಯಾತರ ಹಕ್ಕುಗಳನ್ನು ಕಸಿದುಕೊಳ್ಳುವ ಗುರಿಯನ್ನು ಹೊಂದಿದೆ ಎಂದರು.

ಮಸೂದೆ ಕುರಿತ ಎಲ್ಲಾ ಪಕ್ಷಗಳ ಅಭಿಪ್ರಾಯಗಳನ್ನು ಪರಿಗಣಿಸಿ ಜಂಟಿ ಸಂಸದೀಯ ಸಮಿತಿಯಲ್ಲಿ (ಜೆಪಿಸಿ) ಚರ್ಚೆ ನಡೆದಿದೆ ಎಂಬ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರ ಸಮರ್ಥನೆಯನ್ನು ತಿರಸ್ಕರಿಸಿದ ಗೊಗೊಯ್ ನಿಮಯ ಪ್ರಕಾರ ಚರ್ಚೆ ನಡೆದಿಲ್ಲ ಎಂದು ಹೇಳಿದರು. ವಿರೋಧ ಪಕ್ಷಗಳು ಸೂಚಿಸಿದ ಒಂದೇ ಒಂದು ತಿದ್ದುಪಡಿಯನ್ನು ಅಂಗೀಕರಿಸಿಲ್ಲ. ಅಭಿಪ್ರಾಯ ಸಂಗ್ರಹಿಸುವಾಗ ವಕ್ಫ್ ಬಗ್ಗೆ ಮಾಹಿತಿ ಇಲ್ಲದವರನ್ನು ಜೆಪಿಸಿಗೆ ಆಹ್ವಾನಿಸಲಾಗಿದೆ. ಸರ್ಕಾರವು ಭವಿಷ್ಯದಲ್ಲಿ ಇತರ ಅಲ್ಪಸಂಖ್ಯಾತರ ಮೇಲೂ ದಾಳಿ ನಡೆಸಲಿದೆ. ಇಂದು ಒಂದು ಸಮುದಾಯದ ಭೂಮಿಯನ್ನು ಗುರಿಯಾಗಿಸಿಕೊಂಡಿದ್ದಾರೆ; ನಾಳೆ ಇವರು ಇನ್ನೊಂದು ಸಮುದಾಯದ ಮೇಲೆ ದಾಳಿ ಮಾಡುತ್ತಾರೆ ಎಂದು ಗೊಗೊಯ್ ಎಚ್ಚರಿಸಿದರು. ಇದಕ್ಕೂ ಮೊದಲು, ವಕ್ಫ್ ತಿದ್ದುಪಡಿ ಮಸೂದೆ ಮಂಡಿಸಿದ ಸಚಿವ ಕಿರಣ್ ರಿಜಿಜು ಸಂವಿಧಾನದ 25(1) ನೇ ವಿಧಿಯಲ್ಲಿ ಉಲ್ಲೇಖಿಸಿರುವಂತೆ ಧರ್ಮವನ್ನು ಪ್ರತಿಪಾದಿಸುವ, ಆಚರಿಸುವ ಮತ್ತು ಪ್ರಚಾರ ಮಾಡುವ ಯಾರ ಸ್ವಾತಂತ್ರ್ಯದಲ್ಲೂ ನರೇಂದ್ರ ಮೋದಿ ಸರ್ಕಾರ ಹಸ್ತಕ್ಷೇಪ ಮಾಡುತ್ತಿಲ್ಲ. ಈ ಮಸೂದೆಯು ವಕ್ಫ್ ಆಸ್ತಿಗಳ ನಿರ್ವಹಣೆಗೆ ಸಂಬಂಧಿಸಿದೆ. ಇತರರ ಧರ್ಮಗಳಲ್ಲಿ ಹಸ್ತಕ್ಷೇಪ ಮಾಡುವುದಕ್ಕೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದರು. ಒಬ್ಬ ವ್ಯಕ್ತಿ ಐದು ವರ್ಷಗಳ ಕಾಲ ಇಸ್ಲಾಂ ಧರ್ಮವನ್ನು ಪಾಲಿಸಿದ್ದರೆ ಮಾತ್ರ ಆಸ್ತಿಯನ್ನು ವಕ್ಫ್ ಮಾಡಲು ಅವರು ಅರ್ಹರು ಎಂಬ ಸಚಿವ ರಿಜಿಜು ಹೇಳಿಕೆಯನ್ನು ಪ್ರಶ್ನಿಸಿದ ಗೊಗೊಯ್ ಇತರ ಧರ್ಮಗಳ ಜನರಿಗೆ ನೀವು ಐದು ವರ್ಷಗಳಿಂದ ಧರ್ಮ ಪಾಲಿಸುತ್ತಿದ್ದೀರಾ ಎಂದು ಸರ್ಕಾರ ಪ್ರಮಾಣ ಪತ್ರ ಕೇಳುತ್ತದಯೇ ಹೀಗಿರುವಾಗ ಈ ಮಸೂದೆಯಲ್ಲಿ ಮಾತ್ರ ಈ ಮಾನದಂಡವನ್ನು ಅಳವಡಿಸಲಾಗಿದೆ. ಸರ್ಕಾರ ಧರ್ಮದ ವಿಚಾರದಲ್ಲಿ ಏಕೆ ಹಸ್ತಕ್ಷೇಪ ಮಾಡುತ್ತಿದೆ. ಮಸೂದೆಯಲ್ಲಿ ಪ್ರಸ್ತಾಪಿಸಲಾದ ತಿದ್ದುಪಡಿಗಳು ಭಾರತದಲ್ಲಿ ಹೆಚ್ಚಿನ ಮೊಕದ್ದಮೆಗಳಿಗೆ ಕಾರಣವಾಗುತ್ತವೆ ಎಂದ ಗೊಗೊಯ್, ತಿದ್ದುಪಡಿಗಳು ಮಸೂದೆಯನ್ನು ಬಲಪಡಿಸುವ ಗುರಿಯನ್ನು ಹೊಂದಿರಬೇಕೇ ಹೊರತು, ಹೆಚ್ಚಿನ ವಿವಾದಗಳನ್ನು ಸೃಷ್ಟಿಸಬಾರದು ಎಂದರು.



ಪಶ್ಚಿಮ ನೌಕಾ ಕಮಾಂಡ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾರತೀಯ ನೌಕಾಪಡೆಯ ಮುಂಚೂಣಿ ಯುದ್ಧನೌಕೆ ಐಎನ್‌ಎಸ್ ತರ್ಕಶ್ ಬುಧವಾರ ಪಶ್ಚಿಮ ಹಿಂದೂ ಮಹಾಸಾಗರದಲ್ಲಿ 2500 ಕೆಜಿಗೂ ಹೆಚ್ಚು ಮಾದಕವಸ್ತುಗಳನ್ನು ಯಶಸ್ವಿಯಾಗಿ ತಡೆಹಿಡಿದು ವಶಪಡಿಸಿಕೊಂಡಿದೆ.

# ವಕ್ಫ್ ಮಸೂದೆ ವಿರುದ್ಧ ಕಾನೂನು ಹೋರಾಟ



**ನವದೆಹಲಿ, ಏ. 2:** ವಕ್ಫ್ ತಿದ್ದುಪಡಿ ಮಸೂದೆ ಮುಸ್ಲಿಮರ ಹಕ್ಕುಗಳನ್ನು ಕಿತ್ತುಕೊಳ್ಳುವ ಕರಾಳ ಕಾನೂನು ಎಂದಿರುವ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ (ಎಐಎಂಪಿಎಲ್‌ಬಿ), ತಿದ್ದುಪಡಿ ಮಸೂದೆಯನ್ನು ನ್ಯಾಯಾಲಯದಲ್ಲಿ ಪ್ರಶ್ನಿಸುವುದಾಗಿ ಹೇಳಿದೆ. ವಿವಾದಿತ ವಕ್ಫ್ ತಿದ್ದುಪಡಿ ಮಸೂದೆಯನ್ನು ಬುಧವಾರ (ಏ.2) ಲೋಕಸಭೆಯಲ್ಲಿ ಮಂಡಿಸಲಾಗಿದೆ. ಅದು ಲೋಕಸಭೆಯಲ್ಲಿ ಅಂಗೀಕಾರಗೊಂಡರೆ, ಗುರುವಾರ ರಾಜ್ಯಸಭೆಯಲ್ಲಿ ಮಂಡಿಸುವ ಸಾಧ್ಯತೆ ಇದೆ. ಪತ್ರಿಕಾಗೋಷ್ಠಿ ನಡೆಸಿ ಮಸೂದೆಯನ್ನು ಟೀಕಿಸಿದ ಎಐಎಂಪಿಎಲ್‌ಬಿ ಸದಸ್ಯ ಎಂ.ಡಿ ಅದೀಬ್, ಇದು ಮುಸ್ಲಿಂ ಸಮುದಾಯದ ಆಸ್ತಿಗಳನ್ನು ವಶಪಡಿಸಿಕೊಳ್ಳುವ ಪ್ರಯತ್ನ ಎಂದು ಆರೋಪಿಸಿದರು. ನಮ್ಮ ಆಸ್ತಿಗಳನ್ನು ಕಿತ್ತುಕೊಳ್ಳಬಹುದೆಂದು ಭಾವಿಸಿ ಅವರು ಈ ನಾಟಕ ಆರಂಭಿಸಿದ್ದಾರೆ. ಇದನ್ನು ಒಪ್ಪಿಕೊಳ್ಳಲು ಸಾಧ್ಯವೇ ನಾವು ಸೋತಿದ್ದೇವೆ ಎಂದು ಭಾವಿಸಬೇಡಿ. ಇದು ಮಸೂದೆಯ ವಿರುದ್ಧದ ಹೋರಾಟದ ಆರಂಭವಷ್ಟೇ ಎಂದು ಅದೀಬ್ ಹೇಳಿದ್ದಾರೆ. ಮಸೂದೆಗೆ ಸಂಬಂಧಿಸಿದಂತೆ ರಚಿಸಲಾಗಿದ್ದ ಜಂಟಿ ಸಂಸದೀಯ ಸಮಿತಿ ಸಭೆಯಲ್ಲಿ ನಾವು ತಿದ್ದುಪಡಿಯನ್ನು ವಿರೋಧಿಸಿದ್ದೆವು. ನಾವು ಯುದ್ಧದಲ್ಲಿ ಸೋತಿದ್ದೇವೆ ಎಂದು ಭಾವಿಸಬೇಡಿ, ಈಗಷ್ಟೇ ಆರಂಭಿಸಿದ್ದೇವೆ ಎಂದು ಕಿಡಿಕಾರಿದ್ದಾರೆ. ಭಾರತ ಎಂಬುವುದರ ರಚನೆಗೇ ಈ ಮಸೂದೆ ಸವಾಲು ಒಡ್ಡುವುದರಿಂದ, ನಮ್ಮ ಹೋರಾಟ ದೇಶ ಉಳಿಸಲು. ಆತ್ಮಸಾಕ್ಷಿ ಇರುವ ಎಲ್ಲಾ ನಾಗರಿಕರು ಮಸೂದೆಯನ್ನು ವಿರೋಧಿಸಬೇಕು. ನಾವು ಕಾನೂನಾತ್ಮಕವಾಗಿ ಮತ್ತು ಹೊರತಾಗಿಯೂ ಮಸೂದೆಯ ವಿರುದ್ಧ ಹೋರಾಡಲಿದ್ದೇವೆ. ನಾವು ನ್ಯಾಯಾಲಯಕ್ಕೆ ಹೋಗುತ್ತೇವೆ. ಸರ್ಕಾರ ಕಾನೂನು ಹಿಂತೆಗೆದುಕೊಳ್ಳುವವರೆಗೆ ವಿರಮಿಸುವುದಿಲ್ಲ ಎಂದು ಅದೀಬ್ ತಿಳಿಸಿದ್ದಾರೆ. ದೇಶವನ್ನು ಉಳಿಸಲು ನಾವು ಈ ಹೋರಾಟವನ್ನು ಪ್ರಾರಂಭಿಸಿದ್ದೇವೆ. ಈ ಕರಾಳ ಕಾನೂನನ್ನು ಕೊನೆಗಾಣಿಸುವುದು ನಮ್ಮ ಗುರಿ ಎಂದು ಎಐಎಂಪಿಎಲ್‌ಬಿ ವಕ್ತಾರ ಮೊಹಮ್ಮದ್ ಅಲಿ ಮೊಹ್ಸಿನ್ ಹೇಳಿದ್ದಾರೆ. ರೈತರ ಹೋರಾಟದಂತೆ ವಕ್ಫ್ ತಿದ್ದುಪಡಿ ಮಸೂದೆಯ ವಿರುದ್ಧ ದೇಶದಾದ್ಯಂತ ಹೋರಾಟ ರೂಪಿಸುತ್ತೇವೆ. ರಸ್ತೆ ತಡೆ ಪ್ರತಿಭಟನೆ ಸೇರಿದಂತೆ ಎಲ್ಲಾ ಶಾಂತಿಯುತ ಹೋರಾಟದ ಮಾರ್ಗಗಳನ್ನು ನಾವು ಬಳಸುತ್ತೇವೆ ಎಂದು ಎಐಎಂಪಿಎಲ್‌ಬಿ ತಿಳಿಸಿದೆ.

# ಕಾಶ್ಮೀರ ಪಕ್ಷಗಳಿಂದ ವಕ್ಫ್ (ತಿದ್ದುಪಡಿ) ಮಸೂದೆಯನ್ನು ಮುಸ್ಲಿಂ ಹಕ್ಕುಗಳ ಮೇಲಿನ ದಾಳಿ ಎಂದು ಟೀಕೆ



**ಶ್ರೀನಗರ, ಏಪ್ರಿಲ್ 2** (ಗ೦೩) ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ವಕ್ಫ್ (ತಿದ್ದುಪಡಿ) ಮಸೂದೆ, 2025 ಅನ್ನು ಮಂಡಿಸಿದ ದಿನದಂದು, ಕಾಶ್ಮೀರದ ಪ್ರಮುಖ ರಾಜಕೀಯ ಪಕ್ಷಗಳು ಇದನ್ನು ಮುಸ್ಲಿಂ ಹಕ್ಕುಗಳ ಮೇಲಿನ ದಾಳಿ ಮತ್ತು ವಕ್ಫ್ ಮಂಡಳಿಯ ಸ್ವಾಯತ್ತತೆಯನ್ನು ಕಸಿದುಕೊಳ್ಳುವ ಪ್ರಯತ್ನ ಎಂದು ಖಂಡಿಸಿವೆ. ಮಾಜಿ ಮುಖ್ಯಮಂತ್ರಿ ಮತ್ತು ಪೀಪಲ್ಸ್ ಡೆಮಾಕ್ರಟಿಕ್ ಪಕ್ಷದ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಪ್ರಸ್ತಾವಿತ ಮಸೂದೆಯು ಮುಸ್ಲಿಮರನ್ನು ಅಸಹಾಯಕರನ್ನಾಗಿ ಮಾಡುವ ಪಿತೂರಿಯ ಭಾಗವಾಗಿದೆ ಎಂದು ಆರೋಪಿಸಿದ್ದಾರೆ.

ಬಿಜೆಪಿ ನೇತೃತ್ವದ ಸರ್ಕಾರವು ಮುಸ್ಲಿಂ ಸಮುದಾಯದ ವಿರುದ್ಧ ನೀತಿಗಳನ್ನು ಅನುಸರಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ, ಗುಂಪು ಹತ್ಯೆ, ಮಸೀದಿ ಧ್ವಂಸ ಮತ್ತು ಮುಸ್ಲಿಂ ಸ್ಮಶಾನಗಳ ಮೇಲಿನ ಅತಿಕ್ರಮಣ ಪ್ರಕರಣಗಳನ್ನು ಉಲ್ಲೇಖಿಸಿದ್ದಾರೆ. ಬಿಜೆಪಿ ಸರ್ಕಾರದಿಂದ ತನಗೆ ಯಾವುದೇ ಭರವಸೆ ಇಲ್ಲ ಎಂದು ಮುಫ್ತಿ ಹೇಳಿದರು ಮತ್ತು ಹಿಂದೂ ಬಹುಸಂಖ್ಯಾತರು ಮುಂದೆ ಬಂದು ಅಂತಹ ಅನ್ಯಾಯಗಳ ವಿರುದ್ಧ ನಿಲುವು ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು."ಈ ದೇಶವನ್ನು ಸಂವಿಧಾನದಿಂದ ಆಳಬೇಕು, ಬಿಜೆಪಿಯ ಕಾರ್ಯಸೂಚಿಯಿಂದಲ್ಲ. ನಮ್ಮ ದೇಶವು ಮ್ಯಾನ್ಮಾರ್‌ನಂತಾಗಬಾರದು ಅಥವಾ ಕಾಶ್ಮೀರಿ ಪಂಡಿತರಂತೆಯೇ ಆಗಬಾರದು ಎಂದು ಹಿಂದೂ ಬಹುಸಂಖ್ಯಾತರು ಬಯಸದಿದ್ದರೆ – ನಾವು ಇನ್ನೂ ನಾಚಿಕೆಪಡುವ ಮತ್ತು ನಿರಂತರವಾಗಿ ನಿಂದಿಸಲ್ಪಡುವ ಪ್ರಸಂಗ – ಈ ದೇಶದ ಜನರು ಮೌನ ಪ್ರೇಕ್ಷಕರಾಗಿ ಉಳಿಯಬಾರದು.

ಈ ಉದಾಸೀನತೆ ಮುಂದುವರಿದರೆ, ದೇಶವು ವಿಭಜನೆಯಾಗುವುದನ್ನು ತಡೆಯಲು ಯಾವುದೂ ಸಾಧ್ಯವಿಲ್ಲ. ಬಿಜೆಪಿಯ ನೀತಿಗಳು ರಾಷ್ಟ್ರವನ್ನು ಹರಿದು ಹಾಕುತ್ತಿವೆ" ಎಂದು ಮುಫ್ತಿ ಶ್ರೀನಗರದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

# ಕಚ್ಚತೀವು ಮರಳಿ ಪಡೆಯುವ ನಿರ್ಣಯಕ್ಕೆ ಮುಂದಾದ ಸ್ಟಾಲಿನ್



**ಚೆನ್ನೈ, ಏ. 2:** ಶ್ರೀಲಂಕಾ ವಶದಲ್ಲಿರುವ ಕಚ್ಚತೀವು ದ್ವೀಪವನ್ನು ಮರಳಿ ಪಡೆಯುವ ಬಗ್ಗೆ ತಮಿಳುನಾಡು ಮುಖ್ಯಮಂತ್ರಿ ಎಂ. ಕೆ. ಸ್ಟಾಲಿನ್ ರಾಜ್ಯ ವಿಧಾನಸಭೆಯಲ್ಲಿ ನಿರ್ಣಯ ಮಂಡಿಸಲಿದ್ದಾರೆ. ನಿರ್ಣಯದ ಪ್ರಕಾರ, ತಮಿಳುನಾಡಿನ ಮೀನುಗಾರರ ಸಾಂಪ್ರದಾಯಿಕ ಮೀನುಗಾರಿಕೆಯನ್ನು ರಕ್ಷಿಸಲು ಕಚ್ಚತೀವು ದ್ವೀಪವನ್ನು ಮರಳಿ ಪಡೆಯುವುದು ಏಕೈಕ ಶಾಶ್ವತ ಪರಿಹಾರವಾಗಿದೆ ಎಂದು ಪ್ರತಿಪಾದಿಸಿದ್ದಾರೆ.

ಶ್ರೀಲಂಕಾ ನೌಕಾಪಡೆಯಿಂದ ಮೀನುಗಾರರು ಎದುರಿಸುತ್ತಿರುವ ನೋವುಗಳನ್ನು ಕಡಿಮೆ ಮಾಡಲು, ಕಚ್ಚತೀವು ದ್ವೀಪವನ್ನು ನಮ್ಮ ವಶಕ್ಕೆ ಪಡೆಯುವುದು ಏಕೈಕ ಶಾಶ್ವತ ಪರಿಹಾರವಾಗಿದೆ ಎಂದು ನಿರ್ಣಯವು ಹೇಳುತ್ತದೆ.

1976 ರಲ್ಲಿ ದ್ವೀಪ ರಾಷ್ಟ್ರ ಮತ್ತು ಭಾರತ ನಡುವೆ ಮಾಡಿಕೊಂಡ ಒಪ್ಪಂದದ ಪ್ರಕಾರ ಕಚ್ಚತೀವು ದ್ವೀಪವನ್ನು ಶ್ರೀಲಂಕಾಕ್ಕೆ ಬಿಟ್ಟುಕೊಡಲಾಯಿತು. ನಿರ್ಣಯ ಪರಿಗಣಿಸಿ, ಭಾರತ–ಶ್ರೀಲಂಕಾ ಒಪ್ಪಂದವನ್ನು ತಕ್ಷಣವೇ ಪರಿಶೀಲಿಸಲು ಮತ್ತು ಕಚ್ಚತೀವು ದ್ವೀಪವನ್ನು ಮರಳಿ ಪಡೆಯಲು ಎಲ್ಲ ಕ್ರಮಗಳನ್ನು ತೆಗೆದುಕೊಳ್ಳುವಂತೆ ಈ ಆಗಸ್ಟ್ ಸದನವು ಕೇಂದ್ರ ಸರ್ಕಾರವನ್ನು ಸರ್ವಾನುಮತದಿಂದ ಒತ್ತಾಯಿಸುತ್ತದೆ ಎಂದು ನಿರ್ಣಯದ ಹೇಳಿಕೆಯಲ್ಲಿ ತಿಳಿಸಲಾಗಿದೆ.

ಶ್ರೀಲಂಕಾಕ್ಕೆ ಅಧಿಕೃತ ಭೇಟಿಯ ಸಂದರ್ಭದಲ್ಲಿ, ಜೈಲಿನಲ್ಲಿರುವ ನಮ್ಮ ಎಲ್ಲ ಮೀನುಗಾರರನ್ನು ಅವರ ದೋಣಿಗಳೊಂದಿಗೆ ಸದ್ಭಾವನೆಯ ಆಧಾರದ ಮೇಲೆ ಬಿಡುಗಡೆ ಮಾಡಲು ಶ್ರೀಲಂಕಾ ಸರ್ಕಾರದೊಂದಿಗೆ ಮಾತುಕತೆ ನಡೆಸಬೇಕೆಂದು ನಿರ್ಣಯವು ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸುತ್ತದೆ. ಇತ್ತೀಚಿನ ತಿಂಗಳುಗಳಲ್ಲಿ, ದ್ವೀಪ ದೇಶದ ಸಮುದ್ರ ಗಡಿಯೊಳಗೆ ಅತಿಕ್ರಮಣ ಮಾಡಿದ್ದಕ್ಕಾಗಿ ಶ್ರೀಲಂಕಾ ನೌಕಾಪಡೆಯು ತಮಿಳುನಾಡಿನ ಮೀನುಗಾರರನ್ನು ಬಂಧಿಸಿ ಅವರ ದೋಣಿಗಳನ್ನು ವಶಪಡಿಸಿಕೊಂಡ ಘಟನೆಗಳು ಆಗಾಗ್ಗೆ ನಡೆಯುತ್ತಿವೆ. ಫೆಬ್ರವರಿಯಲ್ಲಿ, ತಮಿಳುನಾಡಿನ ರಾಮೇಶ್ವರಂನಲ್ಲಿರುವ ಮೀನುಗಾರರು ತಮ್ಮ 32 ಸಹೋದ್ಯೋಗಿಗಳನ್ನು ಬಂಧಿಸಿ ಐದು ದೋಣಿಗಳನ್ನು ವಶಪಡಿಸಿಕೊಂಡ ನಂತರ ಅನಿರ್ದಿಷ್ಟ ಮುಷ್ಕರವನ್ನು ಪ್ರಾರಂಭಿಸಿದರು. ಉತ್ತರ ಮನ್ನಾರ್ ಪ್ರದೇಶದ ಬಳಿ ಮೀನುಗಾರರು ಕಾರ್ಯಾಚರಣೆ ನಡೆಸುತ್ತಿದ್ದಾಗ ಹಲವರನ್ನು ಬಂಧಿಲಾಯಿತು.

ಇದು ಕರಾವಳಿ ಸಮುದಾಯದಲ್ಲಿ ವ್ಯಾಪಕ ಪ್ರತಿಭಟನೆಗಳಿಗೆ ಕಾರಣವಾಯಿತು. ಇತ್ತೀಚೆಗೆ, ತಮಿಳುನಾಡಿನ ಪ್ರಾದೇಶಿಕ ರಾಜಕೀಯ ಪಕ್ಷದ ರಾಜ್ಯಸಭಾ ಸದಸ್ಯ ವೈಕೋ, ಶ್ರೀಲಂಕಾ ನೌಕಾಪಡೆಯಿಂದ ತಮಿಳುನಾಡಿನ ಮೀನುಗಾರರ ಮೇಲೆ ನಡೆಯುತ್ತಿರುವ ಆತಂಕಕಾರಿ ಬಂಧನಗಳ ಏರಿಕೆ ಮತ್ತು ನಿರಂತರ ಕಿರುಕುಳದ ಬಗ್ಗೆ ನೌಕಾಪಡೆಯನ್ನು ಕುಂಟ ಬಾತುಕೋಳಿ ಎಂದು ಟೀಕಿಸಿದರು

# ಮಹಾತ್ಮ ಗಾಂಧಿ ಮರಿ ಮೊಮ್ಮಗಳು 92 ವರ್ಷ ವಯಸ್ಸಿನ ನೀಲಾಂಬೆನ್ ಪಾರಿಖ್ ಇನ್ನಿಲ್ಲ



ಗುಜರಾತ್: ಮಹಾತ್ಮ ಗಾಂಧಿಯವರ ಮೊಮ್ಮಗಳು ನೀಲಾಂಬೆನ್ ಪಾರಿಖ್ (92) ಅವರು ಕೊನೆಯುಸಿರೆಳೆದಿದ್ದಾರೆ. 92 ವರ್ಷ ವಯಸ್ಸಾಗಿದ್ದ ನೀಲಾಂಬೆನ್ ಪಾರಿಖ್ ಅವರು ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದರು. ಇದೀಗ ಅವರು ನಿಧನ ಹೊಂದಿದ್ದಾರೆ. ನೀಲಾಂಬೆನ್ ಪಾರಿಖ್ ಅವರು ಮಹಾತ್ಮ ಗಾಂಧಿಯವರ ಮಗ ಹರಿದಾಸ್ ಗಾಂಧಿಯವರ ಮೊಮ್ಮಗಳು. ಹರಿಲಾಲ್ ಗಾಂಧಿ ಮತ್ತು ಅವರ ಪತ್ನಿ ಗುಲಾಬ್ ಅವರ ಐದು ಮಕ್ಕಳಲ್ಲಿ ಹಿರಿಯವರಾದ ರಾಮಿಬೆನ್ ಅವರ ಮಗಳು ನೀಲಾಂಬೆನ್ ತಮ್ಮ ಮಗ ಡಾ. ಸಮೀರ್ ಪಾರಿಖ್ ಅವರೊಂದಿಗೆ ನವಸಾರಿ ಜಿಲ್ಲೆಯಲ್ಲಿ ವಾಸಿಸುತ್ತಿದ್ದರು. ಅವರ ಅಂತ್ಯಕ್ರಿಯೆಯ ಮೆರವಣಿಗೆ ಇಂದು ನಡೆಯಲಿದ್ದು, ವೀರ್ವಾಲ್ ಸ್ಮಶಾನದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ತಿಳಿದು ಬಂದಿದೆ.

ಮೂರು ದಶಕಗಳ ಹಿಂದೆ ನಿವೃತ್ತರಾಗುವವರೆಗೂ, ಬುಡಕಟ್ಟು ಮಹಿಳೆಯರಿಗೆ ಶಿಕ್ಷಣ ನೀಡುವ ಮತ್ತು ಆರ್ಥಿಕ ಸ್ವಾತಂತ್ರ್ಯವನ್ನು ಪಡೆಯುವ ಸಲುವಾಗಿ ವೃತ್ತಿಪರ ತರಬೇತಿಯನ್ನು ನೀಡಿ ಅವರ ಉನ್ನತಿಗಾಗಿ ನೀಲಾಂಬೆನ್ ಸ್ಥಾಪಿಸಿದ್ದ ದಕ್ಷಿಣಪಥ ಎಂಬ ಸಂಸ್ಥೆಯಲ್ಲಿ ತಮ್ಮ ಇಡೀ ಜೀವನವನ್ನು ಕಳೆದರು.

ಹರಿಲಾಲ್ ಗಾಂಧಿ ಮತ್ತು ಅವರ ಪತ್ನಿ ಗುಲಾಬ್ (ಚಂಚಲ್) ಅವರ ಐದು ಮಕ್ಕಳಲ್ಲಿ ಹಿರಿಯರಾದ ರಾಮಿಬೆನ್ ಅವರ ಪುತ್ರಿ ನೀಲಾಂಬೆನ್, ತಮ್ಮ ಜೀವನದುದ್ದಕ್ಕೂ ಮೌನ ಶಕ್ತಿಗೆ ಮತ್ತು ಖಾದಿಯ ಮೇಲಿನ ನಿಷ್ಠೆಗೆ ಹೆಸರುವಾಸಿಯಾಗಿದ್ದರು. ನವಸಾರಿಯಲ್ಲಿ ನೇತ್ರಶಾಸ್ತ್ರಜ್ಞರಾಗಿ ಕೆಲಸ ಮಾಡುತ್ತಿರುವ ಅವರ ಮಗ, ಡಾ. ಸಮೀರ್ ಪಾರಿಖ್ ಅವರು ತಮ್ಮ ತಾಯಿಯ ಬಗ್ಗೆ ಭಾವುಕ ಮಾತುಗಳನ್ನು ಹೇಳಿದ್ದಾರೆ. ತಾಯಿಯ ನಿಧನ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ಡಾ. ಸಮೀರ್ ಪಾರಿಖ್, ನನ್ನ ತಾಯಿ ಯಾವುದೇ ಕಾಯಿಲೆಗಳಿಂದ ಬಳಲುತ್ತಿರಲಿಲ್ಲ, ಆದರೆ ಕಳೆದ ಕೆಲವು ದಿನಗಳಿಂದ ಅವರು ವಯಸ್ಸಿನ ಕಾರಣದಿಂದಾಗಿ ಊಟ ಮಾಡುವುದನ್ನು ಬಹುತೇಕ ತ್ಯಜಿಸಿದ್ದರು. ಅವರಿಗೆ ತೀವ್ರವಾದ ಆಸ್ಟಿಯೊಪೊರೋಸಿಸ್ ಇತ್ತು ಮತ್ತು ಕ್ರಮೇಣ ಕ್ಷೀಣಿಸುತ್ತಿತ್ತು. ಇಂದು ಬೆಳಿಗ್ಗೆ, ನಾನು ನನ್ನ ಆಸ್ಪತ್ರೆಗೆ ಹೋಗದಿರಲು ನಿರ್ಧರಿಸಿದೆ. ನಾನು ಅವರ ಪಕ್ಕದಲ್ಲಿ ಕುಳಿತು ಅವರ ಕೈ ಹಿಡಿದೆ. ಕ್ರಮೇಣ ಅವರ ನಾಡಿಮಿಡಿತ ಕಡಿಮೆಯಾಗುತ್ತಿರುವುದನ್ನು ನಾನು ಗಮನಿಸಿದೆ.

ಅವರು ನಿಧಾನವಾಗಿ ಡೌನ್ ಆದರು. ಅವರು ಶಾಂತಿಯುತವಾಗಿ ಮತ್ತು ಯಾವುದೇ ನೋವು ಇಲ್ಲದೆ ನಿಧನರಾದರು ಎಂದು ಡಾ. ಪಾರಿಖ್ ಹೇಳಿದರು.ಅವರು ನಮ್ಮ ಕುಟುಂಬದ ಮೇಲೆ ಗಾಂಧಿವಾದಿ ಸಿದ್ಧಾಂತಗಳನ್ನು ಹೇರದಿದ್ದರೂ, ಅವರ ವೈಯಕ್ತಿಕ ಮೌಲ್ಯಗಳೇ ಅವರ ಜೀವನದಲ್ಲಿ ಅವರಿಗೆ ಸ್ಫೂರ್ತಿ ನೀಡಿತು ಎಂದು ಡಾ. ಪಾರಿಖ್ ಹೇಳಿದ್ದಾರೆ.

# ಎಡಪಕ್ಷಗಳಿಂದಷ್ಟೆ ಹಿಂದುತ್ವದ ವಿರುದ್ಧ ನಿರಂತರ ಹೋರಾಟ: ಕಾರಟ್



**ನವದೆಹಲಿ, ಏ. 2:** ಹಿಂದುತ್ವ ನವ ಫ್ಯಾಸಿಸಂ ವಿರುದ್ಧ ಹೋರಾಡಲು ಮತ್ತು ಅದನ್ನು ಎದುರಿಸಲು ಶಕ್ತಿ ಮತ್ತು ದೃಢಸಂಕಲ್ಪ ಇರುವುದು ಎಡಪಕ್ಷಗಳಿಗೆ ಮಾತ್ರವಾಗಿದೆ ಎಂದು ಸಿಪಿಐ(ಎಂ) ಹಿರಿಯ ನಾಯಕ, ಪಕ್ಷದ ಸಂಚಾಲಕ ಪ್ರಕಾಶ್ ಕಾರಟ್ ಬುಧವಾರ ಹೇಳಿದ್ದಾರೆ. ದೇಶದ ಮೇಲಿನ ಸಾಮ್ರಾಜ್ಯಶಾಹಿ ಉದ್ದೇಶಗಳ ವಿರುದ್ಧ ಹೋರಾಟವನ್ನು ಮುನ್ನಡೆಸಬಲ್ಲವರು ಎಡಪಕ್ಷಗಳು ಮಾತ್ರ ಎಂದು ಅವರು ತಮಿಳುನಾಡಿನ ಮಧುರೈನಲ್ಲಿ ನಡೆಯುತ್ತಿರುವ ಪಕ್ಷದ 24ನೇ ರಾಷ್ಟ್ರೀಯ ಮಹಾ ಅಧಿವೇಶನದ ತಮ್ಮ ಉದ್ಘಾಟನಾ ಭಾಷಣದಲ್ಲಿ ಹೇಳಿದ್ದಾರೆ. ರಾಷ್ಟ್ರೀಯ ಮಹಾಅಧಿವೇಶನವು ಏಪ್ರಿಲ್ 2 ರಿಂದ 6 ರವರೆಗೆ ನಡೆಯಲಿದೆ.

ಎಡಪಕ್ಷಗಳಷ್ಟೆ ಹಿಂದುತ್ವದ ಪ್ರತಿಗಾಮಿ ಶಕ್ತಿಗಳನ್ನು ಹಿಮ್ಮೆಟ್ಟಿಸಲು ಎಲ್ಲಾ ಎಡ, ಪ್ರಜಾಪ್ರಭುತ್ವ ಮತ್ತು ಜಾತ್ಯತೀತ ಶಕ್ತಿಗಳ ಒಗ್ಗಟ್ಟಿಗೆ ಕರೆ ನೀಡಿದ ಅವರು, ಈ ಕರೆ ಜೋರಾಗಿ ಮತ್ತು ಸ್ಪಷ್ಟವಾಗಿ ಹೋಗಲಿ: ಜಾತ್ಯತೀತ, ಪ್ರಜಾಪ್ರಭುತ್ವ ಮತ್ತು ಪ್ರಗತಿಪರ ಮಾರ್ಗಗಳಲ್ಲಿ ನವ ಭಾರತವನ್ನು ನಿರ್ಮಿಸಲು ನಾವು ಒಟ್ಟಾಗಿ ಕೆಲಸ ಮಾಡೋಣ. ಪ್ರಜಾಪ್ರಭುತ್ವ ಮತ್ತು ಸಮಾಜವಾದದ ಕಡೆಗೆ ಎಂದು ಕಾರಟ್ ಹೇಳಿದ್ದಾರೆ. ಬಿಜೆಪಿ ವಿರುದ್ಧ ಎಲ್ಲಾ ಜಾತ್ಯತೀತ ಶಕ್ತಿಗಳ ವಿಶಾಲವಾದ ವೇದಿಕೆಗೆ ಪಕ್ಷವು ಶ್ರಮಿಸುತ್ತಿದ್ದರೂ, ಎಡಪಕ್ಷಗಳೆ ಸ್ಥಿರವಾದ ಶಕ್ತಿ ಎಡಪಕ್ಷಗಳೆ ಆಗಿದೆ. ನವ–ಉದಾರವಾದಿ ನೀತಿಗಳ ಬಗ್ಗೆ ಎಡಪಕ್ಷಗಳು ರಾಜಿಯಾಗದ ನಿಲುವಿನಿಂದಾಗಿ ಹಿಂದುತ್ವ ಮತ್ತು ಬಹುಸಂಖ್ಯಾತ ಕೋಮುವಾದದ ಎಲ್ಲಾ ಅಭಿವ್ಯಕ್ತಿಗಳ ವಿರುದ್ಧ ದೃಢವಾಗಿ ಮತ್ತು ರಾಜಿಯಾಗದಂತೆ ಹೋರಾಡಬಲ್ಲವು ಎಂಬುದನ್ನು ಮನಸ್ಸಿನಲ್ಲಿಟ್ಟುಕೊಳ್ಳಬೇಕು ಎಂದು ಕಾರಟ್ ಸ್ಪಷ್ಟಪಡಿಸಿದ್ದಾರೆ. ಭಾರತದಲ್ಲಿ ಸಾಮಾಜಿಕ ಸಂಬಂಧಗಳ ಮೂಲ ಚೌಕಟ್ಟಾಗಿ ಜಾತಿ ವ್ಯವಸ್ಥೆಯನ್ನು ಕಾಯ್ದುಕೊಳ್ಳಲು ಬಿಜೆಪಿ–ಆರ್‌ಎಸ್‌ಎಸ್ ಒಕ್ಕೂಟವು ಉಪ–ಜಾತಿ ಗುರುತುಗಳನ್ನು ಮೋಸದಿಂದ ಬಳಸುತ್ತಿದೆ ಎಂದು ಆರೋಪಿಸಿದ ಅವರು, ಮನುವಾದಿ ಮೌಲ್ಯಗಳನ್ನು ಸಾಮಾಜಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಕುತಂತ್ರದಿಂದ ತುಂಬಿಸಲಾಗುತ್ತಿದೆ ಎಂದು ಆರೋಪಿಸಿದದಾರೆ.

ಮಹಿಳೆಯರು, ದಲಿತರು ಮತ್ತು ಆದಿವಾಸಿಗಳ ಹಕ್ಕುಗಳ ಮೇಲೆ ದಾಳಿ ಮಾಡುವ ಮನುವಾದಿ–ಪಿತೃಪ್ರಭುತ್ವ ವ್ಯವಸ್ಥೆಯ ವಿರುದ್ಧದ ಹೋರಾಟವು ಹಿಂದುತ್ವ ಶಕ್ತಿಗಳ ವಿರುದ್ಧದ ಹೋರಾಟದ ಅವಿಭಾಜ್ಯ ಅಂಗವಾಗಿದೆ ಎಂದು ಅವರು ಹೇಳಿದ್ದಾರೆ.

ಪಕ್ಷದ ಮಾಜಿ ಪ್ರಧಾನ ಕಾರ್ಯದರ್ಶಿಯಾಗಿದ್ದ ಕಾರಟ್ ಅವರು ಸೀತಾರಾಮ್ ಯಚೂರಿ ಅವರ ನಿಧನದ ನಂತರ ಮಧ್ಯಂತರವಾಗಿ ಪಕ್ಷದ ಸಂಚಾಲಕರಾಗಿ ಆಯ್ಕೆಯಾಗಿದ್ದರು. ತಮ್ಮ ಪಕ್ಷ ಮತ್ತು ಎಡಪಂಥೀಯರು ಅನೇಕ ಹೋರಾಟಗಳನ್ನು ನಡೆಸುತ್ತಿದ್ದರೂ, ಆ ಹೋರಾಟಗಳಲ್ಲಿ ಭಾಗವಹಿಸುವ ಜನಸಾಮಾನ್ಯರಿಗೆ ಪ್ರತಿಗಾಮಿ ಮತ್ತು ವಿಭಜಕ ಹಿಂದುತ್ವ ಕೋಮುವಾದದ ವಿರುದ್ಧ ತಿಳಿಸಿದರೆ ಮಾತ್ರ ಅವರು ರಾಜಕೀಯೀಕರಣಗೊಳ್ಳುತ್ತಾರೆ ಎಂದು ಅವರು ಹೇಳಿದ್ದಾರೆ. ಡೊನಾಲ್ಡ್ ಟ್ರಂಪ್ ನೇತೃತ್ವದಲ್ಲಿ ಅಮೆರಿಕದ ಸಾಮ್ರಾಜ್ಯಶಾಹಿಯು ಆರ್ಥಿಕ ಮತ್ತು ವ್ಯಾಪಾರಿ ಯುದ್ಧಗಳು ಮತ್ತು ಮಿಲಿಟರಿ ಹಸ್ತಕ್ಷೇಪಗಳ ಮೂಲಕ ಪ್ರಪಂಚದಾದ್ಯಂತದ ದೇಶಗಳ ಮೇಲೆ ಹೊಸ ದಾಳಿಗಳನ್ನು ನಡೆಸಲಿದೆ ಎಂದು ಅವರು ಹೇಳಿದ್ದಾರೆ.

ಸಿಪಿಐ(ಎಂ) ಮತ್ತು ಎಡಪಂಥೀಯರು ಸಾಮ್ರಾಜ್ಯಶಾಹಿ ವಿರೋಧಿ ಹೋರಾಟಗಳನ್ನು ಸಕ್ರಿಯವಾಗಿ ಮುನ್ನಡೆಸಲು ಮತ್ತು ಮೋದಿ ಸರ್ಕಾರದ ಸಾಮ್ರಾಜ್ಯಶಾಹಿ ಪರ ನೀತಿಗಳನ್ನು ಬಹಿರಂಗಪಡಿಸಲು ಇದು ಸುಸಮಯ? ಎಂದು ಅವರು ಹೇಳಿದ್ದಾರೆ. ಸಿಪಿಐ(ಎಂ)ನ ಸ್ವತಂತ್ರ ಬಲವನ್ನು ಹೇಗೆ ಹೆಚ್ಚಿಸುವುದು ಎಂಬ ಪ್ರಮುಖ ವಿಷಯವನ್ನು ಪಕ್ಷದ ಅಧಿವೇಶನವು ಚರ್ಚಿಸುತ್ತದೆ ಎಂದು ಕಾರಟ್ ಹೇಳಿದ್ದಾರೆ.

ಇಡೀ ದೇಶವನ್ನು ತೆಗೆದುಕೊಂಡರೆ, ಪಕ್ಷವನ್ನು ತಳಮಟ್ಟದಲ್ಲಿ ನಿರ್ಮಿಸಲು ಮತ್ತು ಪಕ್ಷದ ಸಂಘಟನೆಯ ಕಾರ್ಯನಿರ್ವಹಣೆಯನ್ನು ಸುಗಮಗೊಳಿಸಲು ವರ್ಗ ಮತ್ತು ಸಾಮೂಹಿಕ ವಿಷಯಗಳ ಕುರಿತು ಸ್ಥಳೀಯ ಹೋರಾಟಗಳನ್ನು ಪ್ರಾರಂಭಿಸಲು ಯೋಜಿತ ಪ್ರಯತ್ನ ಇರಬೇಕು ಎಂದು ಅವರು ಹೇಳಿದ್ದಾರೆ.

# ಪತಿ ಮರಕ್ಕೆ ಕಟ್ಟಿಹಾಕಿ ಪತ್ನಿಯ ಮೇಲೆ ಅತ್ಯಾಚಾರ: 7 ಜನರ ಬಂಧನ

**ಹೈದರಾಬಾದ್, ಏ. 2:** ತೆಲಂಗಾಣದ ನಾಗರ್ಕರ್ನೂಲ್ ಜಿಲ್ಲೆಯಲ್ಲಿ ಮಹಿಳೆಯ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ ಏಳು ಜನರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಶನಿವಾರ ಉರ್ಕೊಂಡಪೇಟ ಗ್ರಾಮದಲ್ಲಿ ಮಹಿಳೆ ತನ್ನ ಪತಿಯೊಂದಿಗೆ ದೇವಸ್ಥಾನ ದರ್ಶನಕ್ಕೆ ಹೋಗಿ ಆವರಣದಲ್ಲಿ ತಂಗಿದ್ದಾಗ ಈ ಘಟನೆ ನಡೆದಿದೆ ಎಂದು ಪೊಲೀಸರು ಹೇಳಿದರು. ಮಹಿಳೆ ಪ್ರಕೃತಿಯ ಕರೆಗೆ ಹೋಗಿದ್ದಾಗ, ಆರೋಪಿಗಳು ಶನಿವಾರದ ಮಧ್ಯರಾತ್ರಿ ಆಕೆಯನ್ನು ಬಲವಂತವಾಗಿ ದೇವಸ್ಥಾನದ ಬಳಿಯ ನಿರ್ಜನ ಸ್ಥಳಕ್ಕೆ ಕರೆದೊಯ್ದು ಪೊದೆಗಳಲ್ಲಿ ಅತ್ಯಾಚಾರ ಎಸಗಿದ್ದಾರೆ, ರಕ್ಷಿಸಲು ಹೋದ ಸಂತ್ರಸ್ತೆಯ ಪತಿಯನ್ನು ಅವರು ಮರಕ್ಕೆ ಕಟ್ಟಿ ಹಾಕಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ನಾಗರ್ಕರ್ನೂಲ್ ಜಿಲ್ಲೆ ಮತ್ತು ಹೈದರಾಬಾದ್‌ನಲ್ಲಿ ನಡೆದ ಲೈಂಗಿಕ ದೌರ್ಜನ್ಯದ ಘಟನೆಗಳನ್ನು ಗಂಭೀರವಾಗಿ ಪರಿಗಣಿಸಿದ ರಾಜ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಡಿ. ಅನಸೂಯ ಸೀತಕ್ಕ, ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಮಹಿಳಾ ಕಲ್ಯಾಣ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿದರು. ಘಟನೆಗಳು ಬೆಳಕಿಗೆ ಬಂದ ನಂತರ ಸರ್ಕಾರ ತ್ವರಿತವಾಗಿ ಕಾರ್ಯನಿರ್ವಹಿಸಿದೆ ಮತ್ತು ಆರೋಪಿಗಳನ್ನು ಬಂಧಿಸಿದೆ ಮತ್ತುಸಂತ್ರಸ್ತರಿಗೆ ಸಹಾಯ ಮಾಡುತ್ತಿದೆ ಎಂದು ಅವರು ಹೇಳಿದರು.

# ಗೂಂಡಾಗಿರಿ, ರೌಡಿಸಂ ಸಂಪೂರ್ಣ ಮಟ್ಟ ಹಾಕಲು ಪೊಲೀಸ್ ಇಲಾಖೆಗೆ ಎಲ್ಲಾ ರೀತಿ ಸಹಕಾರ, ಸವಲತ್ತು ನೀಡಲು ಸಿದ್ಧ: ಸಿಎಂ ಘೋಷಣೆ

**ಬೆಂಗಳೂರು, ಏ.2–** ರಾಜ್ಯದಲ್ಲಿ ಗೂಂಡಾಗಿರಿ, ರೌಡಿಸಂ ಸಂಪೂರ್ಣ ಮಟ್ಟ ಹಾಕಲು ಪೊಲೀಸ್ ಇಲಾಖೆಗೆ ಎಲ್ಲ ಅಗತ್ಯ ಸಹಕಾರ, ಸವಲತ್ತು ನೀಡಲು ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಮೂರು ವರ್ಷಗಳ ಮುಖ್ಯಮಂತ್ರಿಗಳ ಪದಕಗಳನ್ನು ಒಟ್ಟಾಗಿ ಪ್ರದಾನ ಮಾಡಿ ಮಾತನಾಡಿದ ಅವರು, ಕರ್ತವ್ಯಲೋಪ ಸಹಿಸುವುದಿಲ್ಲ, ಪೊಲೀಸ್ ಬೀಟ್ ವ್ಯವಸ್ಥೆ ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಿ ಎಂದರು.

ತಂತ್ರಜ್ಞಾನ ಬೆಳೆದಂತೆ ಸೈಬರ್ ಅಪರಾಧಗಳೂ ಹೆಚ್ಚುತ್ತಿವೆ, ಅದೇ ತಂತ್ರಜ್ಞಾನ ಬಳಸಿಕೊಂಡು ಸೈಬರ್ ಅಪರಾಧಗಳನ್ನು ನಿಗ್ರಹಿಸಬೇಕು. ಮಾದಕ ವಸ್ತು ಮುಕ್ತ ರಾಜ್ಯ ಮಾಡುವುದು ನನ್ನ ಗುರಿ, ಮಾದಕ ವಸ್ತು ಜಾಲವನ್ನು ಬೇರು ಸಮೇತ ಕಿತ್ತುಹಾಕಲು ಪೊಲೀಸರು ಪಣ ತೊಡಬೇಕು. ಕಳೆದ ಎರಡು ವರ್ಷಗಳಲ್ಲಿ ಅಪರಾಧಗಳ ಸಂಖ್ಯೆ ಇಳಿಮುಖವಾಗುತ್ತಿದೆ, ಆದರೂ, ಇನ್ನಷ್ಟು ಕಡಿಮೆ ಆಗಬೇಕು ಎಂದರು. ಕಾನೂನು–ಸುವ್ಯವಸ್ಥೆ, ಬಂಡವಾಳ ಹೂಡಿಕೆ, ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿ ಒಂದಕ್ಕೊಂದು ನೇರ ಸಂಬಂಧ ಹೊಂದಿದ್ದು, ಶಾಂತಿ ಪಾಲನೆ ಉತ್ತಮ ವಾಗಿರಬೇಕು. ಕರ್ನಾಟಕ ಪೊಲೀಸ್



ಕೌಶಲ್ಯ ಮತ್ತು ವೃತ್ತಿಪರತೆಯನ್ನು ಜರ್ಮನಿ ಪ್ರಧಾನಿ ಹಾಗೂ ಪ್ರತಿನಿಧಿಗಳು ಶ್ಲಾಘಿಸಿರುವುದು ಹೆಮ್ಮೆಯ ವಿಷಯ ಎಂದರು.

ಪದಕ ಪಡೆದವರು ಬೇರೆಯುವರಿಗೆ ಪ್ರೇರಣೆ ಆಗಬೇಕು, ಮುಖ್ಯಮಂತ್ರಿ ಪದಕ ಪಡೆಯಲು ದಕ್ಷತೆ, ಪ್ರಾಮಾಣಿಕತೆಯಿಂದ ವೃತ್ತಿಪರತೆ ತೋರಿಸಬೇಕು. ಪೊಲೀಸರ ಅಗತ್ಯ ಬೇಡಿಕೆಗಳ ಈಡೇರಿಕೆಗೆ ಸರ್ಕಾರ ಸದಾ ಸಿದ್ಧವಿದೆ, ನಿರಂತರವಾಗಿ ನಿಮ್ಮ ಜೊತೆ ಇರುತ್ತೇವೆ, ಈ ಬಾರಿಯ ಬಜೆಟ್ನಲ್ಲಿ ಇಲಾಖೆ ಮತ್ತು ಸಿಬ್ಬಂದಿ ಅನುಕೂಲಕ್ಕೆ ಘೋಷಿಸಿರುವ ಎಲ್ಲ ಕಾರ್ಯಕ್ರಮಗಳನ್ನು ಜಾರಿ ಮಾಡಲಾಗುವುದು ಎಂದರು.



ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬುಧವಾರ ಬಿಜೆಪಿ ಕಾರ್ಯಕರ್ತರು ಬೆಲೆ ಏರಿಕೆ ವಿರುದ್ಧ ರಾಜ್ಯ ಸರ್ಕಾರದ ವಿರುದ್ಧ ಹಗಲು–ರಾತ್ರಿ ಪ್ರತಿಭಟನೆ ನಡೆಸಿದರು. ಬಿಜೆಪಿ ನಾಯಕ ಬಿ.ಎಸ್. ಯಡಿಯೂರಪ್ಪ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಬೆಲೆ ಏರಿಕೆ ವಿರುದ್ಧ ರಾಜ್ಯ ಸರ್ಕಾರದ ವಿರುದ್ಧ ಹಗಲು–ರಾತ್ರಿ ಪ್ರತಿಭಟನೆ ನಡೆಸಿದರು.

### ಬೇಸಿಗೆ ಕಾಲದಲ್ಲಿ ಕಚೇರಿ ಕೆಲಸದ ವೇಳೆ ಬದಲಾವಣೆ

## ಬೆಳಿಗೆ 8.00 ರಿಂದ 1.30 ರವರೆಗೆ ನಿಗದಿಪಡಿಸಿ, ಆದೇಶ

**ಬೆಂಗಳೂರು, ಏ.2–** ಬೆಳಗಾವಿ ವಿಭಾಗದ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಿಗೂ ಬೇಸಿಗೆ ಕಾಲದಲ್ಲಿ ಕಚೇರಿ ಕೆಲಸದ ವೇಳೆಯನ್ನು ನಿಗದಿಪಡಿಸಿ ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ರವರು ಬೆಳಗಾವಿ ವಿಭಾಗದ ವಿಜಯಪುರ, ಬಾಗಲಕೋಟೆ ಹಾಗೂ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿರುವುದಿಂದ ನೌಕರರು ಕರ್ತವ್ಯ ನಿರ್ವಹಿಸುವಲ್ಲಿ ಎದುರಿಸುತ್ತಿರುವ ತೊಂದರೆಯನ್ನು ಮಾನವೀಯತೆ ದೃಷ್ಟಿಯಿಂದ ಪರಿಗಣಿಸಿ, ಏಪ್ರಿಲ್ ಮತ್ತು ಮೇ ಮಾಹೆಗಳಲ್ಲಿ ಕಚೇರಿ ಕೆಲಸದ ಸಮಯವನ್ನು ಬೆಳಿಗೆ 8.00 ರಿಂದ 1.30 ರವರೆಗೆ ನಿಗದಿಪಡಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ. ಎಲ್ಲಾ ಜಿಲ್ಲೆಗಳಿಗೆ ಪ್ರಸ್ತುತ ಜಾರಿಯಲ್ಲಿರುವ ಸರ್ಕಾರಿ ಕಚೇರಿಗಳ ವೇಳಾಪಟ್ಟಿಯ ಬದಲಾಗಿ ಏಪ್ರಿಲ್ ಮತ್ತು ಮೇ ತಿಂಗಳುಗಳಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಬದಲಾಯಿಸಿ ಆದೇಶಿಸಿದೆ.

ಈ ಜಿಲ್ಲೆಗಳಲ್ಲಿನ ಸರ್ಕಾರಿ ನೌಕರರು ಬದಲಾದ ಸಮಯದಲ್ಲಿ ತಮ್ಮ ಕರ್ತವ್ಯವನ್ನು ಎಂದಿನಂತೆ ಯಾವುದೇ ಲೋಪ/ಅಡೆತಡೆಯಿಲ್ಲದೆ ಕರ್ತವ್ಯ ನಿರ್ವಹಿಸತಕ್ಕದ್ದು. ಸಾರ್ವಜನಿಕರಿಗೆ ಯಾವುದೇ ರೀತಿ ಅನಾನುಕೂಲತೆಯಾಗದಂತೆ ಮತ್ತು ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್ನ ಕಾರ್ಯನಿರ್ವಾಹಕ ಅಧಿಕಾರಿಗಳು ತುರ್ತು ಸಂದರ್ಭದಲ್ಲಿ ಯಾವುದೇ ಕಾರ್ಯವನ್ನು ನಿರ್ವಹಿಸಲು ನಿರ್ದೇಶಿಸಿದಲ್ಲಿ ಸಮಯದ ಪರಿಮಿತಿಯಿಲ್ಲದೆ ಕರ್ತವ್ಯ ನಿರ್ವಹಿಸತಕ್ಕದ್ದು ಎಂದು ಆದೇಶ ಹೊರಡಿಸಲಾಗಿದೆ.

### ಬಿಜೆಪಿ–ಜೆಡಿಎಸ್

## ಎರಡೂ ಪಕ್ಷಗಳ ನಡುವೆ ಸಮನ್ವಯತೆ ಕೊರತೆ ಉದ್ಭವವಾಗಿದೆ: ಸುರೇಶ್ ಬಾಬು ಅಸಮಾಧಾನ

**ಬೆಂಗಳೂರು, ಏ.2–**ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೆಲೆ ಏರಿಕೆ ಕ್ರಮವನ್ನು ವಿರೋಧಿ ಬಿಜೆಪಿಯು ಇಂದಿನಿಂದ ಅಹೋರಾತ್ರಿ ಧರಣಿಯನ್ನು ಆರಂಭಿಸಿದೆ. ಈ ಹೋರಾಟಕ್ಕೆ ಮಿತ್ರ ಪಕ್ಷ ಜೆಡಿಎಸ್ ಅಂತರ ಕಾಯ್ದು ಕೊಂಡಿದ್ದು ಚರ್ಚೆಗೆ ಕಾರಣ ವಾಗಿದ್ದಲ್ಲದೇ ಎರಡೂ ಪಕ್ಷಗಳ ನಡುವೆ ಸಮನ್ವಯತೆ ಕೊರತೆ ಉದ್ಭವವಾಗಿದೆ ಎಂದು ಸೂಚಿಸುತ್ತಿದೆ.

ಎರಡು ಪಕ್ಷಗಳ ಮಧ್ಯೆ ಸಮನ್ವಯತೆ ಇಲ್ಲ ಎಂದು ಜೆಡಿಎಸ್ ಶಾಸಕಾಂಗ ನಾಯಕ ಸುರೇಶ್ ಬಾಬು ಅವರು ಈಗಾಗಲೇ ಸುದ್ದಿಗೋಷ್ಠಿಯಲ್ಲಿ ಬಹಿರಂಗವಾಗಿಯೇ ಬೇಸರ ವ್ಯಕ್ತಪಡಿಸಿದ್ದು, ಎರಡೂ ಪಕ್ಷಗಳ ನಡುವೆ ಸಮನ್ವಯತೆ ಇಲ್ಲದಂತೆ ಆಗಿದೆ ಎಂದರು.



ಇವತ್ತಿನ ಬಿಜೆಪಿ ಹೋರಾಟಕ್ಕೆ ನಮಗೆ ಮಾಹಿತಿ ಇಲ್ಲ. ನಮ್ಮ ವರಿಷ್ಠ ಹೆಚ್.ಡಿ.ದೇವೇಗೌಡ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೂ ಯಾವ ಮಾಹಿತಿ ನೀಡಿಲ್ಲ. ಮೈಸೂರು ಪಾದಯಾತ್ರೆಯಲ್ಲೂ ಇದೇ ರೀತಿ ಆಗಿತ್ತು ಎಂದು ಸುರೇಶ್ ಬಾಬು ಅಸಮಾಧಾನ ಹೊರಹಾಕಿದರು.

ಈ ಬಗ್ಗೆ ವಿಪಕ್ಷ ನಾಯಕ ಆರ್ ಅಶೋಕ್ ಅವರು ಪ್ರತಿಕ್ರಿಯೆ ನೀಡಿದ್ದು, ವಿಧಾನಸಭೆ ಚುನಾವಣೆಯಲ್ಲಿ ಹೊಂದಾಣಿಕೆಯಾಗಿದೆ.

ಉಳಿದ ಸಂದರ್ಭದಲ್ಲಿ ಬಿಜೆಪಿಯದ್ದು ಪ್ರತ್ಯೇಕ ಹೋರಾಟ ವಿರಲಿದೆ. ಜೆಡಿಎಸ್ ಜೊತೆ ಇದೇ ರೀತಿಯ ಮಾತುಕತೆ ನಡೆದಿತ್ತು ಎಂದು ಹೇಳಿದರು.

ಜೆಡಿಎಸ್ ಆರೋಪಕ್ಕೆ ರಿಯಾಕ್ಟ್ ಮಾಡಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ಸಮಸ್ಯೆ ಇದ್ದರೆ ಬಗೆಹರಿಸಲು ಯತ್ನಿಸುತ್ತೇವೆ. ನಿಖಿಲ್ ಕುಮಾರಸ್ವಾಮಿ ಹೇಳಿಕೆಯನ್ನು ನಾನು ಗಮನಿಸಿದ್ದೇನೆ. ಸಮನ್ವಯ ಸಮಿತಿ ರಚನೆ ಕುರಿತು ನಿಖಿಲ್ ಅವರು ನೀಡಿರುವುದು ಒಳ್ಳೆಯ ಸಲಹೆ ಎಂದು ಅಭಿಪ್ರಾಯಪಟ್ಟರು.

## ವಿಧಾನಪರಿಷತ್‌ನಲ್ಲಿ ಶ್ರೀವೈಷ್ಣವ ಜನಾಂಗಕ್ಕೆ ಪ್ರಾತಿನಿಧ್ಯ ನೀಡಲು ವರಿಷ್ಠರಿಗೆ ಮನವಿ

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಿಧಾನಪರಿಷತ್‌ನಲ್ಲಿ ಶ್ರೀ ವೈಷ್ಣವ ಜನಾಂಗದ ಸಮುದಾಯಕ್ಕೆ ಪ್ರಾತಿನಿಧ್ಯ ನೀಡುವಂತೆ, ವೈಷ್ಣವ ಜನಾಂಗದವರಾದ ನಾವುಗಳು ಮಾನ್ಯ ಎಐಸಿಸಿ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರಿಗೆ ಹಾಗೂ ಉಪಮುಖ್ಯಮಂತ್ರಿಗಳು ಕೆಪಿಸಿಸಿ ಅಧ್ಯಕ್ಷರಾದ ಶ್ರೀಯುತ ಡಿಕೆ ಶಿವಕುಮಾರ್ ಅವರಿಗೆ ಮನವಿ ಮಾಡುವುದೇನೆಂದರೆ ಕೆಲವೇ ದಿನಗಳಲ್ಲಿ

ವಿಧಾನಪರಿಷತ್ ನ 4 ಸ್ಥಾನಗಳನ್ನು ಪೂರ್ಣಗೊಳಿಸಲಿದ್ದು ನಮ್ಮ ಜನಾಂಗದವರು ಇದುವರೆಗೂ ವಿಧಾನ ಪರಿಷತ್ ನ ಸದಸ್ಯರಾಗಲು ಸಾಧ್ಯವಾಗಿರುವುದಿಲ್ಲ, ಬ್ರಾಹ್ಮಣ ಸಮುದಾಯದಲ್ಲಿ ಎಲ್ಲಾ ಪಂಗಡಗಳಿಗೂ ಚುನಾಯಿತ ಪ್ರತಿನಿಧಿಗಳು ಆಗಿದ್ದಾರೆ, ಭಾರತ ದೇಶದ ಇತಿಹಾಸದಲ್ಲಿ 11ನೇ ಶತಮಾನದಲ್ಲಿಯೇ ದಲಿತ ಸಮುದಾಯದ ಪರವಾಗಿ ಧ್ವನಿಯನ್ನುತೆಗೆದು ಅವರನ್ನು ಸಹ ಎಲ್ಲರಂತೆ ಸಮಾನರೆಂದು ತಮ್ಮ ನಡೆನುಡಿಯಿಂದ ಜಗತ್ತಿಗೆ ಸಾರಿದ ರಾಮಾನುಜಾಚಾರ್ಯ ಅವರ ಸಿದ್ಧಾಂತ ಸಾಮಾಜಿಕ ನ್ಯಾಯದ ವಿಚಾರಕ್ಕೆ ಪೂರಕವಾಗಿದೆ.

ಇದನ್ನು ಪರಿಗಣಿಸಿ ಮಾನ್ಯ ವರಿಷ್ಠರು ಇದುವರೆಗೂ ಎಲ್ಲಾ ಜನಾಂಗಕ್ಕೆ ಕಾಂಗ್ರೆಸ್ ಪಕ್ಷದಲ್ಲಿ ಪ್ರಾತಿನಿಧ್ಯ ನೀಡಿದ್ದೀರಿ, ಆದುದರಿಂದ ನಿಮ್ಮ ಪಕ್ಷದ ನಿಷ್ಠಾವಂತ ಕಾರ್ಯಕರ್ತನಾದ ಶ್ರೀ ಎಸ್ ಆರ್ ಸನತ್ ಕುಮಾರ್ (ಮಾಜಿ ಒಖಿಖಿಐ



ನಿರ್ದೇಶಕರು ,ಉದ್ಯಮಿ, ಚಲನಚಿತ್ರ ನಿರ್ಮಾಪಕರು ಹಾಗೂ ಸಮಾಜಸೇವಕರು) ಇವರಿಗೆ ವಿಧಾನ ಪರಿಷತ್ ಸದಸ್ಯರನ್ನಾಗಿ ನೇಮಿಸಿ, ನಮ್ಮ ಶ್ರೀ ವೈಷ್ಣವ ಜನಾಂಗಕ್ಕೆ ಸಾಮಾಜಿಕ ನ್ಯಾಯ ಸಿಗುವಂತೆ ಮಾಡಿ ಹಾಗೂ ಚಲನಚಿತ್ರ ಕೋಟಾದಡಿಯಲ್ಲಿ ವಿಧಾನಪರಿಷತ್ತನ ಸದಸ್ಯರನ್ನಾಗಿ ನೇಮಿಸಲು ನಮ್ಮ ಸ ವ ು ದಾ ಂ ು ದ ವ ರ ು ಕೋರಿಕೊಳ್ಳುತ್ತೇವೆ.

## ಚಿನ್ನದ ಪದಕಕ್ಕೆ ಆಯ್ಕೆಯಾದ ಪೊಲೀಸ್ ಇನ್ಸ್‌ಪೆಕ್ಟರ್ ಕುಮಾರ್ ಪರಾರಿ

**ಬೆಂಗಳೂರು, ಏ.2–** ಲೋಕಾಯುಕ್ತ ಅಧಿಕಾರಿಗಳ ದಾಳಿ ವಿಚಾರ ತಿಳಿಯುತ್ತಿದ್ದಂತೆ ಮುಖ್ಯಮಂತ್ರಿಗಳ ಚಿನ್ನದ ಪದಕಕ್ಕೆ ಆಯ್ಕೆಯಾದ ಪೊಲೀಸ್ ಇನ್ಸ್‌ಪೆಕ್ಟರ್ ಓರ್ವರು ಎಸ್ಕೇಪ್ ಆಗಿರುವ ಘಟನೆ ಬೆಂಗಳೂರಿನಲ್ಲಿ ಜರುಗಿದೆ.

ಲೋಕಾಯುಕ್ತ ದಾಳಿ ವಿಚಾರ ತಿಳಿದು ಅನ್ನಪೂರ್ಣೇಶ್ವರಿ ನಗರ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಕುಮಾರ್ ಪರಾರಿ ಆದವರು. ಸಿಎಂ ಮೆಡಲ್ ಗೆ ಆಯ್ಕೆಯಾಗಿದ್ದ ಪೊಲೀಸ್ ಇನ್ಸ್‌ಪೆಕ್ಟರ್ ಮೇಲೆ ಲೋಕಾಯುಕ್ತ ದಾಳಿ ಮಾಡಲು ಹೋಗಿತ್ತು. ವಿಚಾರ ತಿಳಿದು ಮನೆಯಲ್ಲೇ ಇಲಾಖೆಯ ಜೀಪ್ ಬಿಟ್ಟು ಇನ್ಸ್‌ಪೆಕ್ಟರ್ ಎಸ್ಕೇಪ್ ಆಗಿದ್ದಾರೆ.

ಮತ್ತೊಂದಡೆ ನಾಗರಭಾವಿಯ ಖಾಸಗಿ ಹೋಟೇಲ್‌ನಲ್ಲಿ ಡೀಲ್ ಮಾಡುವ ವೇಳೆ ಇಬ್ಬರು ಪೊಲೀಸ್ ಪೇದೆಗಳ ಮೇಲೆ ಲೋಕಾ ದಾಳಿ ನಡೆಸಿದ್ದು, ಹೆಡ್ ಕಾನ್ಸ್‌ಟೇಬಲ್ ಉಮೇಶ್ (SB), ಪೊಲೀಸ್ ಕಾನ್ ಸ್ಟೇಬಲ್ ಅನಂತ್ ಲೋಕಾಯುಕ್ತ ಬಲೆಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿ ಬಿದ್ದಿದ್ದಾರೆ.

ಠಾಣೆಯ ಸಿಬ್ಬಂಧಿಗಳನ್ನ ಹಾಗೂ ಸಿಕ್ಕಿಬಿದ್ದ ಸಿಬ್ಬಂಧಿಗಳನ್ನು ನಿನ್ನೆ ಸಂಜೆಯಿಂದ ಇಂದು ಬೆಳಗ್ಗಿನ ತನಕ ವಿಚಾರಣೆ ನಡೆಸಲಾಗಿದೆ.ಗುತ್ತಿಗೆದಾರ ಚೆನ್ನೇಗೌಡ ಹಾಗೂ ಕುಟುಂಬಕ್ಕೆ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಇನ್ಸ್‌ಪೆಕ್ಟರ್ ಕುಮಾರ್‌ರಿಂದ ಕಿರುಕುಳ ಆರೋಪ ಕೇಳಿ ಬಂದಿದೆ. ಸುಳ್ಳು ಕೇಸ್ ಹಾಕಿ ಚನ್ನೇಗೌಡರ ನಾಲ್ಕು ಕೋಟಿ ಮೌಲ್ಯದ ಮನೆಯನ್ನ ಹೇಳಿದವ್ರಿಗೆ ಕಡಿಮೆ ಮೊತ್ತಕ್ಕೆ ನೋಂದಣಿ ಮಾಡಿಕೊಡುವಂತೆ ಇನ್ಸ್‌ಪೆಕ್ಟರ್ ಕಿರುಕುಳ ಕೊಟ್ಟಿದ್ದಾರೆಂಬ ಆರೋಪ ಕೇಳಿ ಬಂದಿದೆ. ಇನ್ನೂ ಚೆನ್ನೇಗೌಡ ಪತ್ನಿ ಸರ್ಕಾರಿ ಉದ್ಯೋಗದಲ್ಲಿದ್ದು, ಇವ್ರಿಗೂ ಇನ್ಸ್‌ಪೆಕ್ಟರ್ ಕುಮಾರ್ ಕಿರುಕುಳ ಕೊಟ್ಟಿದ್ದಾರೆಂಬ ಆರೋಪ ಇದೆ. ಈ ಹಿಂದೆ ದಾಖಲಾಗಿದ್ದ ಕೇಸ್ ಒಂದನ್ನ ಬಿ ರಿಪೋರ್ಟ್ ಹಾಕ್ತಿನಿ, ಮನೆಯನ್ನು ಬರೆದುಕೊಡಿ ಎಂದು ಕಿರುಕುಳ ಕೊಟ್ಟಿದ್ದಾರೆ.

ಅಷ್ಟೇ ಅಲ್ಲ, ಚೆನ್ನೇಗೌಡ ಮನೆಗೆ ಕೆಲ ಪುಂಡರನ್ನ ನುಗ್ಗಿಸಿ ದಾಂಧಲೆ ಕೂಡ ಮಾಡಿದ್ದು, ಈ ವೇಳೆ ಚೆನ್ನೇಗೌಡ ವೀಡಿಯೋವನ್ನ ಮಾಡಿಕೊಂಡಿದ್ದ. ಅದರಂತೆ ನಿನ್ನೆ ಸಂಜೆ ಅಗ್ರಿಮೆಂಟ್‌ಗೆ ಸಹಿ ಹಾಕಿಸಲು ನಾಗರಬಾವಿಯ ಖಾಸಗಿ ಹೋಟೆಲ ಗೆ ಇನ್ಸ್‌ಪೆಕ್ಟರ್ ಕುಮಾರ್ ಕರೆಸಿದ್ದ. ಮೊದಲೇ ಈ ಬಗ್ಗೆ ದೂರು




ಕೊಡಲಾಗಿತ್ತು. ಕೂಡಲೇ ದಾಳಿ ನಡೆಸಲು ಲೋಕಾಯುಕ್ತ ಮುಂದಾಗಿದೆ. ಚನ್ನೇಗೌಡನ ಪತ್ನಿ ಅನುಷಾ ಸಹಿ ಹಾಕಿಸಿಕೊಳ್ಳಲು ಕರೆಸಿದ್ದ ವೇಳೆ ಲೋಕಾಯುಕ್ತ ದಾಳಿ ವಿಚಾರ ತಿಳಿದು ಇನ್ಸ್‌ಪೆಕ್ಟರ್ ಕುಮಾರ್ ಪರಾರಿಯಾಗಿದ್ದಾರೆ. ಇಬ್ಬರು ಕಾನ್ಸ್‌ಟೇಬಲ್‌ಗಳನ್ನು ಅರೆಸ್ಟ್ ಮಾಡಲಾಗಿದೆ.

### ಎಚ್. ಕಾಂತರಾಜು ನೇತೃತ್ವದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ವರದಿಯಿಂದ

## ಅಸಮಾನತೆ ತೊಡೆದು ಹಾಕಲು ಸಾಧ್ಯ: ಶಿವರಾಜ್ ತಂಗಡಗಿ

**ಬೆಂಗಳೂರು, ಏ.2–** ರಾಜ್ಯ ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ಎಚ್. ಕಾಂತರಾಜು ನೇತೃತ್ವದ ಜಾತಿವಾರು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ವರದಿಯಿಂದ ಅಸಮಾನತೆ ತೊಡೆದು ಹಾಕಲು ಸಾಧ್ಯ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್.ತಂಗಡಗಿ ಅವರು ಅಭಿಪ್ರಾಯಪಟ್ಟರು.

ಕಾಂತರಾಜು ಅವರ ವರದಿಯಿಂದ ಪ್ರತಿಯೊಂದು ಸಮಾಜದ ಜನಸಂಖ್ಯೆ, ಶಿಕ್ಷಣ, ಸಾಮಾಜಿಕ ಹಾಗೂ ಆರ್ಥಿಕವಾಗಿ ಸಮಾಜದ ಅಂಕಿ–ಅಂಶ ಸ್ಪಷ್ಟವಾಗಿ ತಿಳಿಯಲಿದೆ. ನಮ್ಮ ಸರ್ಕಾರ ವರದಿಯನ್ನು ಸ್ವೀಕಾರ ಮಾಡಿದ್ದು, ಸಚಿವ ಸಂಪುಟ ಸಭೆಗೆ ವರದಿಯನ್ನು ತರಲಾಗುವುದು. ಸಂಪುಟದಲ್ಲಿ ಸಾಧಕ– ಬಾಧಕಗಳ ಬಗ್ಗೆ ಚರ್ಚೆ ನಡೆಸಲಾಗುವುದು. ವರದಿ ಅನುಷ್ಠಾನದಿಂದ ಜಾತಿಗಳ ಸ್ಥಿತಿಗತಿ ಆಧರಿಸಿ ಶಿಕ್ಷಣ, ಉದ್ಯೋಗ ಸೇರಿ ನಾನಾ ವಲಯಗಳಲ್ಲಿ ಅವಕಾಶ ಮತ್ತು ಸೌಲಭ್ಯ ಸಿಗಲಿದೆ. ಸಮೀಕ್ಷೆ



ವರದಿಯಿಂದ ಅಸಮಾನತೆ ತೊಡೆದು ಹಾಕಲು ಸಾಧ್ಯ ಎಂದು ಹೇಳಿದರು.

**ಹಿಂದುಳಿದ ಸಮಾಜದ ಬಗ್ಗೆ ವಿಶೇಷ ಕಾಳಜಿ:** ಹಿಂದುಳಿದ ಸಮುದಾಯಗಳ ಬಗ್ಗೆ ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಶೇಷ ಕಾಳಜಿಯನ್ನು ಹೊಂದಿದ್ದವರಾಗಿದ್ದಾರೆ.

ಈ ಹಿಂದೆ ಮುಖ್ಯಮಂತ್ರಿಗಳು ದೇವಾಂಗ ಸಮುದಾಯಕ್ಕೆ ಉಮಾಶ್ರೀ ಅವರನ್ನು ಸಚಿವರನ್ನಾಗಿ ಮಾಡಿದ್ದರು. ಸಣ್ಣ ಸಮುದಾಯಗಳಿಗೆ ಪ್ರಾತಿನಿಧ್ಯ ಕಲ್ಪಿಸುವ ಮುಖ್ಯಮಂತ್ರಿ ಯಾರದರೂ ಇದ್ದರೆ ಅದು ಸಿದ್ದರಾಮಯ್ಯ ಅವರು ಮಾತ್ರ. ಮುಂದೆಯೂ ಈ ಸಮಾಜಕ್ಕೆ ರಾಜಕೀಯ ಅವಕಾಶ ಕಲ್ಪಿಸಲಿದ್ದಾರೆ ಎಂದರು. ಇನ್ನು ದೇವರದಾಸಿಮಯ್ಯ ಅವರ ಹಾದಿಯಾಗಿ ದಾರ್ಶನಿಕರು ಸಮಾಜಕ್ಕೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ. ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ವಚನಕಾರರ ಆದರ್ಶಗಳನ್ನು ಪಾಲಿಸಿದರೆ ಅದು ನಾವು ಸಮಾಜಕ್ಕೆ ಕೊಡುಗೆ ನೀಡಿದಂತಾಗುತ್ತದೆ. 12ನೇ ಶತಮಾನದಲ್ಲಿ ದೇವರದಾಸಿಮಯ್ಯ ಅವರು ಕ್ರಾಂತಿಕಾರಕವಾದಂತಹ ಹೆಜ್ಜೆಯನ್ನಿಟ್ಟ ಮಹನೀಯರು. ಜಾತಿ ಪದ್ಧತಿ, ಲಿಂಗ ಅಸಮಾನತೆ ಬಗ್ಗೆ ಧ್ವನಿ ಎತ್ತಿದ್ದರು. ಅಂದೇ ಬಡತನದ ಬಗ್ಗೆ ವಿವೇಚನ ಹೊಂದಿದ್ದ ದಾಸಿಮಯ್ಯ ಅವರು ಜನರಲ್ಲಿ ಜಾಗೃತಿ ಮೂಡಿಸುವ ಕೆಲಸವನ್ನು ಮಾಡಿದ್ದರು ಎಂದು ಸಚಿವರು ಶ್ಲಾಘಿಸಿದರು. ಬಸವಣ್ಣ, ದೇವರ ದಾಸಿಮಯ್ಯ, ಕನಕದಾಸರು, ಪುರಂದರ ದಾಸರು ಹಾದಿಯಾಗಿ ಎಲ್ಲ ಶರಣರು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಕೆಲಸ ಮಾಡಿದವರು. ಇಂದು ಮಹನೀಯರೆಲ್ಲರನ್ನು ಒಂದೊಂದು ಸಮಾಜಕ್ಕೆ ಸಿಮೀತಗೊಳಿಸುತ್ತಿರುವುದು ವಿಷಾದನೀಯ ಎಂದರು.

### ಮೊದಲನೇ ಪುಟದಿಂದ

## ರಾಜ್ಯದ ಅಭಿವೃದ್ಧಿಯಲ್ಲಿ ಕಾನೂನು ಸುವ್ಯವಸ್ಥೆ ಪಾತ್ರ ಬಹಳ ದೊಡ್ಡದು

ಗೂಂಡಾಗಿರಿ, ರೌಡಿಸಂ ಪೂರ್ಣ ಮಟ್ಟ ಹಾಕಿ. ಅಗತ್ಯ ಸಹಕಾರ, ಸವಲತ್ತುಗಳನ್ನು ಕೊಡಲು ಸರ್ಕಾರ ಸಿದ್ದವಿದೆ. ಮೊನ್ನೆಯ ಬಜೆಟ್ ನಲ್ಲಿ ಇಲಾಖೆ ಮತ್ತು ಸಿಬ್ಬಂದಿಯ ಅನುಕೂಲಕ್ಕೆ ಘೋಷಿಸಿರುವ ಎಲ್ಲವನ್ನೂ ಜಾರಿ ಮಾಡಲಾಗುವುದು ಎಂದರು. ಗೃಹ ಸಚಿವರಾದ ಜಿ.ಪರಮೇಶ್ವರ್, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಉಮಾಶಂಕರ್, ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್ ಅವರು ಉಪಸ್ಥಿತರಿದ್ದರು.

ದೇಶದಲ್ಲಿ ಸೈಬರ್ ಕ್ರೈಂ ಅತಿದೊಡ್ಡ ಸವಾಲಾಗಿದೆ:

ರಾಜ್ಯದಲ್ಲಿ ವಾರ್ಷಿಕ 20 ಸಾವಿರ ಪ್ರಕರಣಗಳು ದಾಖಲಾಗುತ್ತಿವೆ. ಬೆಂಗಳೂರು ಐಟಿ ಸಿಟಿಯಾಗಿರುವುದು ಹಾಗೂ ಇಂಟರ್ನೆಟ್ ಕನೆಕ್ಟಿವಿಟಿ ಹೆಚ್ಚಿರುವುದರಿಂದ ಸೈಬರ್ ಕ್ರೈಮ್ಗಳು ಹೆಚ್ಚಾಗುತ್ತಿರಬಹುದು. ಇದನ್ನು ಮಟ್ಟಹಾಕುವ ನಿಟ್ಟಿನಲ್ಲಿ ಕೆಲಸ ಮಾಡಲಾಗುತ್ತಿದೆ. ಮತ್ತಷ್ಟು ಕಠಿಣವಾಗಿ ಕೆಲಸ ಮಾಡಬೇಕಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.ಬೆಂಗಳೂರು ನಗರ ಸಂಚಾರ ನಿರ್ವಹಣಾ ಕೇಂದ್ರವು ಅಸ್ತ್ರಂ ಅಪ್ಲಿಕೇಶನ್ ಪ್ರಾರಂಭಿಸಿದೆ. ಇದಕ್ಕೆ ರಾಷ್ಟ್ರಮಟ್ಟದಲ್ಲಿ ಮನ್ನಣೆ ಸಿಕ್ಕಿರುವುದು ಶ್ಲಾಘನೀಯ.

ರಾಜ್ಯದಲ್ಲಿ ನಕ್ಸಲ್ ಚಟುವಟಿಕೆಗಳನ್ನು "ಶೂನ್ಯ"ಗೊಳಿಸಲು ವಿಶೇಷ ಮುತುವರ್ಜಿಯಿಂದ ಪೊಲೀಸ್ ಕಾರ್ಯಾಚರಣೆಗೆ ಮುಂದಾಳತ್ವ ವಹಿಸಿ,ಮಾರ್ಗದರ್ಶನ ನೀಡುವ ಮೂಲಕ ಎಲ್ಲ ನಕ್ಸಲರನ್ನು ಶರಣಾಗುವಂತೆ ಮಾಡಿದ ರಾಜ್ಯ ಗುಪ್ತವಾರ್ತೆ ನಿರ್ದೇಶಕ ಹೇಮಂತ್ ಎಂ ನಿಂಬಾಳ್ಕರ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ವರ್ಣಪದಕ ಪ್ರದಾನ ಮಾಡಿದರು. ಬೆಂಗಳೂರಿನ ಕೋರಮಂಗಲದ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ ಪರೇಡ್ ಮೈದಾನದಲ್ಲಿ ಇಂದು ಬೆಳಿಗ್ಗೆ ಪೊಲೀಸ್ ಧ್ವಜ ದಿನಾಚರಣೆ ಸಮಾರಂಭದಲ್ಲಿ ಪದಕ ಪ್ರದಾನ ಮಾಡಲಾಯಿತು. 1998ರ ಬ್ಯಾಚಿನ ಐಪಿಎಸ್ ಅಧಿಕಾರಿಯಾಗಿರುವ ಹೇಮಂತ್ ಎಂ.ನಿಂಬಾಳ್ಕರ್ ಅವರು ಪ್ರಸ್ತುತ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ.

## ಮೂರು ದಿನ ಆನ್‌ಲೈನ್ ವಿಧಾನ ತೆರಿಗೆ ಪಾವತಿ ಸ್ಥಗಿತ

**ಬೆಂಗಳೂರು, ಏ. 2–** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ನಗರದ ನಿವಾಸಿಗಳಿಗೆ ಕಸದ ಸೆಸ್ ವಿಧಿಸಿದ್ದು, ಅದನ್ನು ಆಸ್ತಿ ತೆರಿಗೆ ಜೊತೆಗೆ ಪಾವತಿಸಬೇಕಿದೆ. ಇದರ ಬೆನ್ನಲ್ಲೆ ಹೊಸ ಆರ್ಥಿಕ ಎದುರಾದ ಹಿನ್ನೆಲೆಯಲ್ಲಿ ಆಸ್ತಿ ತೆರಿಗೆ ಪಾವತಿದಾರರಿಗೆ ಮೂರು ದಿನಗಳವರೆಗೆ ತೆರಿಗೆ ಪಾವತಿ ಬಂದ್ ಮಾಡಲಾಗಿದೆ.



ಕೊನೆಯ ಕ್ಷಣದ ಬದಲಾವಣೆ ಗಳಿಂದಾಗಿ ಬಿಬಿಎಂಪಿಯು ಮುಂದಿನ 48 ಗಂಟೆ ನಂತರ ಎಂದಿನಂತೆ ಸೆಸ್, ಆಸ್ತಿ ತೆರಿಗೆ ಎರಡು ಸೇರಿಸಿ ಪಾವತಿಸಿಕೊಳ್ಳಲಿದೆ. ಬಿಬಿಎಂಪಿ ಅಧಿಕಾರಿಗಳು ತೆರಿಗೆ ಲೆಕ್ಕಾಚಾರದ ವಿಧಾನದಲ್ಲಿ ಕೊನೆಯ ಕ್ಷಣದಲ್ಲಿ ಬದಲಾವಣೆ ಮಾಡಿದೆ. ಈ ಕಾರಣದಿಂದಾಗಿ ತೆರಿಗೆ ಪಾವತಿ ಆನ್‌ಲೈನ್ ವಿಧಾನವನ್ನು ಮೂರು ದಿನ ಸ್ಥಗಿತಗೊಳಿಸಿದೆ.

ಮಂಗಳವಾರ (ಏಪ್ರಿಲ್ 1) ದಿಂದ ಹೊಸ ಹಣಕಾಸು ವರ್ಷ ಆರಂಭ ಹಿನ್ನೆಲೆಯಲ್ಲಿ ತೆರಿಗೆ ಪಾವತಿಯು ಗುರುವಾರ ಏಪ್ರಿಲ್ 3ರ ಸಂಜೆ 5 ಗಂಟೆಯ ನಂತರ ಪುನಃ ಆರಂಭಿಸಲಾಗುವುದು ಎಂದು ಪೋರ್ಟಲ್‌ನಲ್ಲಿ ಪ್ರದರ್ಶಿಸಲಾಗಿದೆ.

ಇದೇ ಏಪ್ರಿಲ್ 1ರಿಂದ ಬಿಬಿಂಪಿಯು ಘನತ್ಯಾಜ್ಯ ನಿರ್ವಹಣೆ ನಿರ್ವಹಣೆಗೆ ಹೊಸ ಕಸದ ಸೆಸ್ ವಿಧಿಸಿದೆ. ಅದನ್ನು ಸೇರಿಸಿ ಆಸ್ತಿ ತೆರಿಗೆ ಪಾವತಿಗೆ ಮುಂದಾಗಿದೆ. ಹೀಗಾಗಿ ನಾಗರಿಕರು ಆಸ್ತಿ ತೆರಿಗೆ ಒಟ್ಟು ಹೆಚ್ಚಳ ಕುರಿತು ಹೆಚ್ಚಿನ ಉತ್ಸುಕತೆ ಹೊಂದಿದ್ದಾರೆ. ಏಕೆಂದರೆ ಆಸ್ತಿ ತೆರಿಗೆ ಜೊತೆಗೆ ವಿವಿಧ ಹಂತಗಳಲ್ಲಿ ತ್ಯಾಜ್ಯ ಸೆಸ್ ಕನಿಷ್ಠ 10 ರೂಪಾಯಿಯಿಂದ 400 ರೂಪಾಯಿವರೆಗೆ ವಿಧಿಸಲಾಗುತ್ತದೆ. ಅದನ್ನು ತಿಳಿಯಲು ಜನರು ಮುಂದಾಗಿದ್ದಾರೆ.

### ಓಲಾ, ಉಬರ್ ಮತ್ತು ರ್‍ಯಾಪಿಡೊಗಳಿಗೆ ಆರು ವಾರಗಳ ಕಾಲಾವಕಾಶ

## ಬೈಕ್, ಟ್ಯಾಕ್ಸಿ ಕಾರ್ಯಾಚರಣೆಯನ್ನು ಸ್ಥಗಿತಕ್ಕೆ ಹೈಕೋರ್ಟ್ ನಿರ್ದೇಶನ


**ಬೆಂಗಳೂರು, ಏ.2–**ಬೈಕ್, ಟ್ಯಾಕ್ಸಿ ಕಾರ್ಯಾಚರಣೆಯನ್ನು ನಿಲ್ಲಿಸಲು ಕರ್ನಾಟಕ ಹೈಕೋರ್ಟ್ ಓಲಾ, ಉಬರ್ ಮತ್ತು ರ್‍ಯಾಪಿಡೊಗಳಿಗೆ ಆರು ವಾರಗಳ ಕಾಲಾವಕಾಶ ನೀಡಿದೆ. ಆರು ವಾರಗಳ ನಂತರ, ಬೈಕ್ ಟ್ಯಾಕ್ಸಿ ಕಾರ್ಯಾಚರಣೆ ರದ್ದಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ. ಮೋಟಾರ್ ಸೈಕಲ್‌ಗಳನ್ನು ಸಾರಿಗೆ ವಾಹನ ಗಳಾಗಿ ನೋಂದಾಯಿಸಲು 2022ರಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ಕೋರಿ ಉಬರ್ ಇಂಡಿಯಾ ಸಿಸ್ಟಮ್ಸ್ ಪ್ರೈ.ಲಿ., ಎಎನ್ಐ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಮತ್ತು ಇತರರು ಸಲ್ಲಿಸಿದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾ ಬಿ ಎಂ ಶ್ಯಾಮ್ ಪ್ರಸಾದ್ ಅವರು ಬುಧವಾರ ಈ ಆದೇಶ ಹೊರಡಿಸಿದ್ದಾರೆ. ಮೋಟಾರು ವಾಹನ ಕಾಯ್ದೆ, 1988 ರ ಸೆಕ್ಷನ್ 93 ಮತ್ತು ಅದರ ಅಡಿಯಲ್ಲಿರುವ ನಿಯಮಗಳ ಬಗ್ಗೆ ರಾಜ್ಯ ಸರ್ಕಾರ ಮಾರ್ಗಸೂಚಿಗಳನ್ನು ಹೊರಡಿಸಿದ ಹೊರತು, ಅರ್ಜಿದಾರರು ಬೈಕ್ ಟ್ಯಾಕ್ಸಿ ಸೇವೆ ನೀಡಲು ಸಾಧ್ಯವಿಲ್ಲ ಮತ್ತು ಈ ಸಂಬಂಧ ಕರ್ನಾಟಕ ಸಾರಿಗೆ ಇಲಾಖೆಗೆ ಮೋಟಾರ್ ಸೈಕಲ್‌ಗಳನ್ನು ಸಾರಿಗೆ ವಾಹನಗಳಾಗಿ ನೋಂದಾಯಿಸಲು ನಿರ್ದೇಶನ ನೀಡಲಾಗುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ.

## ಹಾಲಿನ ದರ, ಡೀಸೆಲ್ ಸೆಸ್ ಹೆಚ್ಚಳವನ್ನು ಸಮರ್ಥಿಸಿಕೊಂಡ ಆರ್.ವಿ.ದೇಶಪಾಂಡೆ

**ಬೆಂಗಳೂರು, ಏ. 2–** ಹಾಲಿನ ದರ, ಡೀಸೆಲ್ ಮೇಲಿನ ಸೆಸ್ ಹೆಚ್ಚಳವನ್ನು ಕಾಂಗ್ರೆಸ್ ಹಿರಿಯ ಶಾಸಕ ಆರ್.ವಿ.ದೇಶಪಾಂಡೆ ಸಮರ್ಥಿಸಿಕೊಂಡಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಸ್ತುಸ್ಥಿತಿಯನ್ನು ಎಲ್ಲರೂ ಎದುರಿಸಬೇಕು. ಯಾವ ಸರ್ಕಾರದ ಆಡಳಿತದಲ್ಲಿ ಬೆಲೆ ಏರಿಕೆ ಮಾಡಿಲ್ಲ ಎಂದು ಪ್ರಶ್ನಿಸಿದರು.

ಬಡವರ ಅನುಕೂಲಕ್ಕಾಗಿ ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆ ಗಳನ್ನು ಅನುಷ್ಠಾನ ಮಾಡಿಲ್ಲವೇ?, ಹಾಲಿನ ದರ ಹೆಚ್ಚಾಗಿದೆ ಎಂದರೆ ಹೇಗೆ?, ಬೆಲೆ ಏರಿಕೆ ಮಾಡಿರುವುದು ನಿಜ. ಆದರೆ ಜನರಿಗೆ ತೊಂದರೆ ಮಾಡಲು ಏರಿಕೆ ಮಾಡಿದೆ ಎಂದರೆ ತಪ್ಪು. ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ



ನಿಯಂತ್ರಣ ಕೇಂದ್ರ ಸರ್ಕಾರಕ್ಕಿದೆ ಎಂದರು.

ಹನಿಟ್ರ್ಯಾಪ್ ಸಂಬಂಧಿಸಿದಂತೆ ಎಲ್ಲಾ ವಿಚಾರವನ್ನು ಧೈರ್ಯದಿಂದ ಹೇಳಬೇಕು. ಇಂತಹ ವಿಚಾರವನ್ನು ಶಾಸನ ಸಭೆಯಲ್ಲಿ ಚರ್ಚೆ ಮಾಡುವುದು ಸರಿಯಲ್ಲ. ಸಚಿವರು ಯಾಕೆ ಸದನದಲ್ಲಿ ಹೇಳಿದ್ದಾರೆ ಎಂಬುದು ಗೊತ್ತಿಲ್ಲ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಹಲವರ ಬೇಡಿಕೆ ಇರಬಹುದು. ಅದನ್ನು ಹೈಕಮಾಂಡ್ ಮಾಡುತ್ತದೆ. ವಿಧಾನ ಸಭಾಧ್ಯಕ್ಷರು ಕಾನೂನಿನಂತೆ ಕ್ರಮ ಕೈಗೊಂಡಿದ್ದಾರೆ. ಸಭಾಧ್ಯಕ್ಷರ ಪೀಠಕ್ಕೆ ಏಕೆ ಅಗೌರವ ತರುವ ರೀತಿಯಲ್ಲಿ ನಡೆದುಕೊಳ್ಳಬೇಕಿತ್ತು ಎಂದು ಬಿಜೆಪಿಯುವರನ್ನು ಪ್ರಶ್ನಿಸಿದರು.

ಅಲ್ಲದೆ ಜಾತಿ ಧರ್ಮದ ಆಧಾರದ ಮೇಲೆ ಮಾತನಾಡುವುದು ಸರಿಯಲ್ಲ ಎಂದ ಅವರು, ನಾನು 1983 ರಿಂದಲೂ ಶಾಸಕನಾಗಿ ಕೆಲಸ ಮಾಡುತ್ತಿದ್ದೇನೆ. ಸಚಿವ ಹಾಗೂ ವಿರೋಧಪಕ್ಷದ ನಾಯಕನಾಗಿಯೂ ಕೆಲಸ ಮಾಡಿದ್ದೇನೆ. ಸಚಿವ ಸಂಪುಟ ಪುನರ್ ರಚನೆ ಸಂದರ್ಭದಲ್ಲಿ ನನಗೆ ಅವಕಾಶ ಕೊಡುತ್ತಾರೆ ಎಂಬುದು ಗೊತ್ತಿಲ್ಲ. ಎಲ್ಲವೂ ದೈವೇಚ್ಛೆ ಎಂದು ದೇಶಪಾಂಡೆ ಹೇಳಿದರು.

## ರಾಜ್ಯದಲ್ಲಿ ಮೂರು ದಿನಗಳ ಕಾಲ ಮಳೆಯಾಗುವ ಸಾಧ್ಯತೆ

**ಬೆಂಗಳೂರು, ಏ. 2–** ಮಾರ್ಚ್ ಕೊನೆಯ ವಾರದಿಂದ ರಾಜ್ಯದಲ್ಲಿ ಚದುರಿದಂತೆ ಮಳೆಯಾಗುತ್ತಿದ್ದು, ಮಳೆ ಪ್ರಮಾಣ ಹೆಚ್ಚಾಗಲಿದೆ. ಹವಾಮಾನ ಮುನ್ಸೂಚನೆ ಪ್ರಕಾರ ಮೂರು ದಿನಗಳ ಕಾಲ ಮಳೆಯಾಗುವ ಸಾಧ್ಯತೆಗಳಿವೆ.

ಬಂಗಾಳಕೊಲ್ಲಿಯ ನೈರುತ್ಯ ಭಾಗದಲ್ಲಿ ಮೇಲೆ., ಸುಳಿಗಾಳಿ ಉಂಟಾಗಿದ್ದು, ರಾಜ್ಯದ ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಭಾಗಶಃ ಮೋಡ ಕವಿದ ವಾತಾವರಣ ಕಂಡು ರುತ್ತಿದೆ. ಮಲೆನಾಡು ಸೇರಿದಂತೆ ರಾಜ್ಯದ ಕೆಲವೆಡೆ ಚದುರಿದಂತೆ ಮಳೆಯಾಗುತ್ತಿದೆ. ನಾಳೆಯಿಂದ ಮೂರು ದಿನಗಳ ಕಾಲ ರಾಜ್ಯದ ಕೆಲವೆಡೆ ವ್ಯಾಪಕ ಹಾಗೂ ಭಾಗಶಃ ವ್ಯಾಪಕ ಮಳೆಯಾಗುವ ಲಕ್ಷಣಗಳಿವೆ.

ಹವಾಮಾನ ಮುನ್ಸೂಚನೆ ಪ್ರಕಾರ ರಾಜ್ಯದ ಕರಾವಳಿ, ಮಲೆನಾಡು, ದಕ್ಷಿಣ ಹಾಗೂ ಉತ್ತರ ಒಳನಾಡಿನಲ್ಲಿ ಇಂದಿನಿಂದ ಮಳೆ ಹೆಚ್ಚಾಗುವ ಸಾಧ್ಯತೆಗಳಿವೆ. ಹೀಗಾಗಿ ಭಾರತೀಯ ಹವಾಮಾನ ಇಲಾಖೆ ಕರಾವಳಿ ಮತ್ತು ಮಲೆನಾಡಿನ ಜಿಲ್ಲೆಗಳಿಗೆ ಭಾರಿ ಮಳೆ ಮುನ್ಸೂಚನೆ ನೀಡಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ನಿನ್ನೆ ರಾಜ್ಯದ 12 ಜಿಲ್ಲೆಗಳಲ್ಲಿ ಚದುರಿದಂತೆ ಮಳೆಯಾಗಿದ್ದರೆ, 19 ಜಿಲ್ಲೆಗಳಲ್ಲಿ ಅತ್ಯಲ್ಪ ಪ್ರಮಾಣದ ಮಳೆಯಾಗಿದೆ. ಮೈಸೂರು,



ಮಂಡ್ಯ, ಹಾಸನ, ಉಡುಪಿ, ಬೆಳಗಾವಿ, ತುಮಕೂರು, ಶಿವಮೊಗ್ಗ, ಕೊಡಗು, ಯಾದಗಿರಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಮತ್ತು ಧಾರವಾಡ ಜಿಲ್ಲೆಗಳಲ್ಲಿ ಅಲ್ಲಲ್ಲಿ ಮಳೆಯಾಗಿದೆ.

ಹವಾಮಾನ ಮುನ್ಸೂಚನೆ ಪ್ರಕಾರ ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ದಕ್ಷಿಣ ಒಳನಾಡು, ಮಲೆನಾಡು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಸಂಜೆ ಹಾಗೂ ರಾತ್ರಿ ಮಳೆಯಾಗುವ ಸಾಧ್ಯತೆಗಳಿವೆ. ಕೆಲವೆಡೆ ಬಿರುಗಾಳಿ, ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗುವ ನಿರೀಕ್ಷೆ ಇದೆ. ಏ.4ರಿಂದ ಏ.6ರವರೆಗೆ ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಮೈಸೂರು, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಗಳು ಇದ್ದು, ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ.



ಬೆಂಗಳೂರಿನ ಕೋರಮಂಗಲ ಪರೇಡ್ ಮೈದಾನದಲ್ಲಿ ಬುಧವಾರ ನಡೆದ ಪೊಲೀಸ್ ಧ್ವಜ ದಿನಾಚರಣೆಯ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೊಲೀಸ್ ಪರೇಡ್ ವೀಕ್ಷಿಸಿದರು.

# ಯಾರ ಕೈಕಾಲು ಕೂಡ ಹಿಡಿಯಲ್ಲ, 2028ಕ್ಕೆ ನಾನೇ ಸಿಎಂ ಆಗುತ್ತೇನೆ: ಯತ್ನಾಳ್

**ವಿಜಯಪುರ, ಏ.2–** ಸ್ವಪಕ್ಷದ ನಾಯಕರ ವಿರುದ್ಧ ನಿರಂತರವಾಗಿ ವಾಗ್ದಾಳಿ ನಡೆಸಿದ ಕಾರಣಕ್ಕೆ ವಿಜಯಪುರ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಅವರಿಗೆ ಬಿಜೆಪಿ ಕೇಂದ್ರೀಯ ಶಿಸ್ತು ಸಮಿತಿ ನೀಡಿದ್ದ ನೋಟಿಸ್‌ಗೆ ಉತ್ತರಿಸದ ಹಿನ್ನೆಲೆಯಲ್ಲಿ ಯತ್ನಾಳ್ ಅವರನ್ನು ಪಕ್ಷದಿಂದ 6 ವರ್ಷಗಳ ಕಾಲ ಉಚ್ಚಾಟನೆ ಮಾಡಿ ಬಿಜೆಪಿ ಕೇಂದ್ರೀಯ ಶಿಸ್ತು ಸಮಿತಿ ಕ್ರಮ ಕೈಗೊಂಡಿತ್ತು. ಆದರೆ ಯಾವುದಕ್ಕೂ ಜಗ್ಗದೆ ಶಾಸಕ ಯತ್ನಾಳ್ ಬಿಎಸ್ ಯಡಿಯೂರಪ್ಪ ಮತ್ತು ವಿಜಯೇಂದ್ರ ವಿರುದ್ಧ ಇಂದು ಮತ್ತೆ ವಾಗ್ದಾಳಿ ಮುಂದುವರಿಸಿದ್ದಾರೆ.

ನಗರದಲ್ಲಿ ಮಾಧ್ಯಮಗಳೊಂದಿಗೆ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರು, ಯಾರ ಕೈಕಾಲು ಹಿಡಿಯುವ ಮನುಷ್ಯ ನಾನಲ್ಲ. 2028 ರಲ್ಲಿ ನಾನೇ ಮುಖ್ಯಮಂತ್ರಿ ಆಗುತ್ತೇನೆ ಎಂದು ಸ್ಫೋಟಕ ಹೇಳಿಕೆ ನೀಡಿದ ಅವರು, ಮಂತ್ರಿ ಆಗಿ ಎಂದು ಆಗ ಬಸವರಾಜ ಬೊಮ್ಮಾಯಿ ಹೇಳಿದ್ದರು. ಆಗ ನಾನು ಅಭಿವೃದ್ಧಿಗೆ ಹಣ ಕೊಡಿ ಮಂತ್ರಿಗಿರಿ ಬೇಡ ಎಂದು ನಾನು ಅವರಿಗೆ ಹೇಳಿದ್ದೆ. ಕಾರಿನ ಮೇಲೆ ಕೆಂಪು ಗೂಟ ಹಾಕಿಕೊಂಡು ಓಡಾಡುವ ಶೋಕಿ ನನಗೆ ಇಲ್ಲ. ಪಕ್ಷಕ್ಕೆ ವಾಪಸ್ ಸೇರಿಸಿಕೊಳ್ಳಿ ಎಂದು ನಾನು ಯಾರಿಗೂ ಕೈ ಮುಗಿಯುವುದಿಲ್ಲ. ನಾನು ಬಿಜೆಪಿಗೆ ಸೇರಿಸಿಕೊಳ್ಳಿ ಎಂದು ಯಾರ ಕೈಕಾಲು ಕೂಡ ಹಿಡಿಯುವುದಿಲ್ಲ. ನನ್ನ ಪರವಾಗಿ ಸಾಕಷ್ಟು ಜನರು ನಿಂತಿದ್ದಾರೆ ಎಂದು ಯತ್ನಾಳ್ ಹೇಳಿದರು.



ಉಚ್ಚಾಟಿತ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮಾಧ್ಯಮಗಳೊಂದಿಗೆ ಮಾತನಾಡಿದರು.

ಜನ ಸೇವೆ ಮಾಡದೆ, ಪ್ರಜೆಗಳ ಕಷ್ಟ ಕಾರ್ಪಣ್ಯಕ್ಕೆ ಧ್ವನಿಯಾಗದೆ, ತಮ್ಮ ರಾಜಕೀಯ ಅಭ್ಯುದಯಕ್ಕೆ ಹೊಂದಾಣಿಕೆ ರಾಜಕಾರಣ ಮಾಡುವವರ ವಿರುದ್ಧ ನನ್ನ ಹೋರಾಟ ಮುಂದುವರೆಯುತ್ತದೆ. ಮಹಾಭಾರತದಲ್ಲಿ ಜಯಗಳಿಸಿದ್ದು ಕೃಷ್ಣಾರ್ಜುನರೆ ಹೊರತು, ಶಕುನಿ ಹಾಗೂ ಧೃತರಾಷ್ಟ್ರರಲ್ಲ ಎಂದು ಎಂದು ಯಡಿಯೂರಪ್ಪ ಮತ್ತು ವಿಜಯೇಂದ್ರ ಅವರುಗಳ ಹೆಸರನ್ನು ಹೇಳದೇ ಕುಟುಕಿದರು.

ರಾಜ್ಯದಲ್ಲಿ ಹೊಂದಾಣಿಕೆ ರಾಜಕಾರಣದ ವಿರುದ್ಧ ನಮ್ಮೆಲ್ಲರ ಹೋರಾಟ ಆರಂಭವಾಗಲಿದೆ. ಅಲ್ಲದೆ ರಾಮ ರಾಜ್ಯ ಸ್ಥಾಪನೆ, ಉತ್ತರ ಕರ್ನಾಟಕದ ಅಭಿವೃದ್ಧಿ, ನೀರಾವರಿ, ಗೋ ರಕ್ಷಣೆ, ಕನ್ನಡ ಮಾಧ್ಯಮ ಪರೀಕ್ಷಾರ್ಥಿಗಳಿಗೆ ಆಗುತ್ತಿರುವ ಅನ್ಯಾಯ, ಬಾಣಂತಿಯರ ಸಾವು, ಲವ್ ಜಿಹಾದ್, ವಕ್ಫ್ ವಿರುದ್ಧ ನನ್ನ ಹೋರಾಟವನ್ನು ತೀಕ್ಷ್ಣಗೊಳಿಸಿ ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವ ಪ್ರಯತ್ನ ಮಾಡುತ್ತೇನೆ ಎಂದು ಯತ್ನಾಳ್ ಅವರು ಹೇಳಿದರು.

ಆರ್ಥಿಕವಾಗಿ ದಿವಾಳಿಯಾಗಿರುವ ರಾಜ್ಯಸರ್ಕಾರ ಕಸದ ಮೇಲೂ ಸೆಸ್ ವಿಧಿಸುವಂತ ಪರಿಸ್ಥಿತಿಗೆ ಬಂದಿದೆ. ಹಾಲು, ವಿದ್ಯುತ್, ದಿನಬಳಕೆ ವಸ್ತುಗಳು ಗಗನಕ್ಕೇರಿವೆ. ಬೆಲೆ ಏರಿಕೆಯಿಂದ ಬಡವರು, ಮಧ್ಯಮ ವರ್ಗದವರು ಕಂಗಾಲಾಗಿದ್ದಾರೆ. ದುಂದುವೆಚ್ಚಗಳನ್ನು, ಬಿಟ್ಟಿ ಭಾಗ್ಯಗಳಿಗೆ ಕಡಿವಾಣ ಹಾಕಿ ಆರ್ಥಿಕ ಶಿಸ್ತನ್ನು ಕಾಪಾಡಬೇಕಾಗಿದ್ದ ಸರ್ಕಾರ ಘನ ತ್ಯಾಜ್ಯದ ಮೇಲೆ ಸೆಸ್ ಹಾಕಿ ಹಣ ಹೊಂದಿಸುವ ಪರಿಸ್ಥಿತಿಗೆ ಬಂದಿದೆ. ಸ್ವಯಂಘೋಷಿತ ಆರ್ಥಿಕ ತಜ್ಞ, ಅತಿ ಹೆಚ್ಚು ಬಜೆಟ್ ಕೊಟ್ಟ ಮುಖ್ಯಮಂತ್ರಿಗಳು ಪಾಲಿಸುತ್ತಿರುವ 'ಆರ್ಥಿಕ ಅಶಿಸ್ತು' ಇದು ಎಂದು ಹೇಳಿದರು.

### ಜೋಕರ್ ಸಿಎಂ

ಹಿಂದೆ ನಾನು ವಿಧಾನ ಪರಿಷತ್ ಚುನಾವಣೆಗೆ ನಿಂತಾಗ ಇದೇ ಯಡಿಯೂರಪ್ಪ ನನ್ನನ್ನು ಪಕ್ಷದಿಂದ ಉಚ್ಚಾಟಿಸಿದ. ಆದರೂ ನಾನು ಕಣದಿಂದ ಹಿಂದೆ ಸರಿಯಲಿಲ್ಲ. ಚುನಾವಣೆ ಪರಚಾರಕ್ಕೆ ಬಂದಿದ್ದ ಯಡಿಯೂರಪ್ಪ ನನ್ನನ್ನು ಜೋಕರ್ ಎಂದು ಕರೆದಿದ್ದ. ಮತದಾರರು ಯಡಿಯೂರಪ್ಪನ ಮಾತು ಕೇಳದೇ ನನ್ನನ್ನು ವಿಧಾನ ಪರಿಷತ್ತಿಗೆ ಆಯ್ಕೆ ಮಾಡಿ ಕಳಿಸಿದರು. ಅಂದಿನ ಜೋಕರ್ ಮುಂದಿನ ಸಿಎಂ ಆಗುತ್ತಾನೆ ನೋಡ್ತಾಯಿರಿ ಎಂದರು.

# ಮಸ್ಕಿ ಕಾಂಗ್ರೆಸ್ ಶಾಸಕನ ಪುತ್ರ, ಸಹೋದರನಿಂದ ಕಾಡು ಮೊಲ ಬೇಟೆ, ಮೆರವಣಿಗೆ

**ರಾಯಚೂರು, ಏ.2–** ಜಿಲ್ಲೆಯ ಮಸ್ಕಿ ಕಾಂಗ್ರೆಸ್ ಶಾಸಕರ ಪುತ್ರ ಮತ್ತು ಸಹೋದರರು ಯುಗಾದಿ ಹಬ್ಬದ ಸಂದರ್ಭದಲ್ಲಿ ಮೊಲಗಳನ್ನು ಬೇಟೆಯಾಡಿ ಮೆರವಣಿಗೆ ಮಾಡಿದ್ದಾರೆ. ವೈರಲ್ ಆಗಿರುವ ವಿಡಿಯೋದಿಂದಾಗಿ ವನ್ಯಜೀವಿ ಸಂರಕ್ಷಣಾ ಕಾಯ್ದೆ ಉಲ್ಲಂಘನೆಯ ಆರೋಪ ಎದುರಿಸುತ್ತಿದ್ದಾರೆ. ಅರಣ್ಯ ಇಲಾಖೆ ಪ್ರಕರಣ ದಾಖಲಿಸಿದ್ದು, ಮೂರು ವರ್ಷಗಳವರೆಗೆ ಜೈಲು ಶಿಕ್ಷೆಯಾಗುವ ಸಾಧ್ಯತೆಯಿದೆ ಎನ್ನಲಾಗಿದೆ.

ಮಸ್ಕಿ ಕಾಂಗ್ರೆಸ್ ಶಾಸಕ ಆರ್.ಬಸನಗೌಡ ತುರ್ವಿಹಾಳ ಅವರ ಪುತ್ರ, ಸಹೋದರ ಕಾಡುಪ್ರಾಣಿಗಳನ್ನು ಬೇಟೆಯಾಡಿ ಮೆರವಣಿಗೆ ಮಾಡಿರುವ ವಿಡಿಯೋ ವೈರಲ್ ಆಗಿದೆ. ಈ ಮೂಲಕ ಶಾಸಕರ ಪುತ್ರ ಸತೀಶ್‌ಗೌಡ, ಸಹೋದರ ಸಿದ್ದನಗೌಡ ವನ್ಯಜೀವಿ ಸಂರಕ್ಷಣಾ ಕಾಯ್ದೆಯನ್ನು ಉಲ್ಲಂಘಿಸಿದ್ದಾರೆ. ಶಾಸಕರ ಪುತ್ರ, ಸಹೋದರನ ನೇತೃತ್ವದಲ್ಲಿ ಮೊಲಗಳನ್ನು ಬೇಟೆಯಾಡಲಾಗಿದೆ. ಬಳಿಕ, ಮೊಲಗಳ ಕಳೆಬರಹವನ್ನು ಕಟ್ಟಿಗೆಗಳಿಗೆ ಕಟ್ಟಿ ಸಿಂಧನೂರು ತಾಲೂಕಿನ ತುರ್ವಿಹಾಳ ಪಟ್ಟಣದಲ್ಲಿ ಮೆರವಣಿಗೆ ಮಾಡಲಾಗಿದೆ. ಅಲ್ಲದೇ, ಖಡ್ಗ ಮತ್ತು ಕೊಡಲಿ ಪ್ರದರ್ಶನ ಮಾಡಲಾಗಿದೆ.



ಮಸ್ಕಿ ಕಾಂಗ್ರೆಸ್ ಶಾಸಕ ಬಸಸಗೌಡ ತುರ್ವಿಹಾಳ ಅವರ ಪುತ್ರ ಸತೀಶ್ ಗೌಡ ಹಾಗೂ ಸಹೋದರ ಸಿದ್ದನಗೌಡ ಹಾಗೂ ದುರ್ಗೇಶ್ ಸೇರಿ ಹಲವರ ವಿರುದ್ಧ ಅರಣ್ಯ ಇಲಾಖೆ ಪ್ರಕರಣ ದಾಖಲಿಸಿ ಘಟನೆ ಸಂಬಂಧ ಉಪಅರಣ್ಯ ಸಂರಕ್ಷಣಾಧಿಕಾರಿ ಪ್ರವೀಣ್ ಮಾತನಾಡಿ, ವಿಡಿಯೋದಲ್ಲಿ ಯಾರ್‍ಯಾರು ಇದ್ದಾರೆ ಅವರ ವಿರುದ್ಧ ಪ್ರಕರಣ ದಾಖಲಾಗಿದೆ. ವಿಡಿಯೋದಲ್ಲಿರುವಂತೆ ಅದನ್ನೇ ಸಾಕ್ಷಿಯನ್ನಾಗಿ ಪರಿಗಣಿಸಿದ್ದೇವೆ. ನ್ಯಾಯಾಲಯಕ್ಕೆ ವರದಿ ಸಲ್ಲಿಕೆ ಮಾಡುತ್ತೇವೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಮೊಲಗಳನ್ನು ಮೆರವಣಿಗೆ ಮಾಡುವ ವಿಡಿಯೋ ವೈರಲ್ ಆಗಿದೆ. ಈಗಾಗಲೇ ಅರಣ್ಯ ಇಲಾಖೆ ಪ್ರಕರಣ ದಾಖಲಿಸಿಕೊಂಡಿದೆ. ಅಲ್ಲಿ, ಪ್ರಕರಣ ದಾಖಲಾದ ಬಳಿಕ ಮುಂದಿನ ಹಂತದಲ್ಲಿ ತನಿಖೆ ಕೈಗೊಳ್ಳುತ್ತೇವೆ. ಮೊಲಗಳನ್ನು ಮೆರವಣಿಗೆ ಮಾಡುವ ವೇಳೆ ಪೊಲೀಸ್ ಸಿಬ್ಬಂದಿ ಇದ್ದು, ಲೋಪ ಆಗಿದ್ದರೇ ಸಿಬ್ಬಂದಿ ವಿರುದ್ಧ ಕ್ರಮಕೈಗೊಳ್ಳುತ್ತೇನೆ. ಇನ್ನು, ಘಟನೆ ಸಂಬಂಧ ಮಸ್ಕಿ ಕಾಂಗ್ರೆಸ್ ಶಾಸಕ ಬಸನಗೌಡ ತುರ್ವಿಹಾಳ ಮಾತನಾಡಿ, ಮೆರವಣಿಗೆಯಲ್ಲಿ ನಮ್ಮ ಪುತ್ರ, ಸಹೋದರ ಭಾಗಿಯಾಗಿದ್ದಾರೆ ಎಂಬುವುದು ಮಾಧ್ಯಮಗಳಲ್ಲಿ ಬಂದಿದೆ. ಹಿಂದಿನಿಂದಲೂ ಈ ಪದ್ಧತಿ ನಡೆದುಕೊಂಡು ಬರಲಾಗುತ್ತಿದೆ. ಈ ಪದ್ಧತಿಯನ್ನು ಈಗಿನ ಕಾನೂನಿನಡಿ, ಸಂವಿಧಾನದ ಪ್ರಕಾರ ಕೈಬಿಡಬೇಕು. ಆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತೇನೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ ಮಾತನಾಡಿ ಸಾರ್ವಜನಿಕರ ಜೀವನದಲ್ಲಿರುವವರು ಹೀಗೆ ಮಾಡಿದ್ದಾರೆ. ಶಾಸಕರ ಪುತ್ರ ಇದನ್ನು ತಿಳಿದು ಮಾಡಿದ್ದಾರೋ ಅಥವಾ ತಿಳಿಯದೇ ಮಾಡಿದ್ದಾರೋ ಗೊತ್ತಿಲ್ಲ. ವನ್ಯ ಜೀವಿಗಳಿಗೆ ಸಂಬಂಧಿಸಿದಂತೆ ರಾಜ್ಯ, ಕೇಂದ್ರ ಸರ್ಕಾರಗಳಿಂದ ಗಣ್ಯ ವ್ಯಕ್ತಿಗಳಿಗೆ ಏನೆಲ್ಲ ಶಿಕ್ಷೆಗಳಾಗಿವೆ ಎಂಬುವುದನ್ನು ಮನಗಂಡಿದ್ದೇವೆ. ಅವರು ಸಾರ್ವಜನಿಕವಾಗಿ ಮಾಡಬಾರದಿತ್ತು. ಜನಸಾಮಾನ್ಯರಿಗೂ ಒಂದೇ ಕಾನೂನು, ರಾಜಕೀಯ ನಾಯಕರಿಗೂ ಒಂದೇ ಕಾನೂನು ಎಂಬುವುದನ್ನು ಯಾರು ಮರೆಯಬಾರದು. ಅರಣ್ಯ ಇಲಾಖೆ ತಮ್ಮ ವ್ಯಾಪ್ತಿ ಕ್ರಮಕೈಗೊಳ್ಳಬೇಕೆಂದು ಆಗ್ರಹಿಸಿದರು.

### ಬೆಂಗಳೂರು-ಧಾರವಾಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು

# ಹಾವೇರಿಯಲ್ಲಿ ನಿಲುಗಡೆಗೆ ರೈಲ್ವೆ ಇಲಾಖೆ ಆದೇಶ

**ಹಾವೇರಿ, ಏ.2–** ಕರ್ನಾಟಕದ ಪ್ರಯಾಣಿಕರಿಗೆ ರೈಲ್ವೆ ಇಲಾಖೆ ಶುಭ ಸುದ್ದಿ ನೀಡಿದೆ. ಬೆಂಗಳೂರು – ಧಾರವಾಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ನಿಲುಗಡೆ ವಿಚಾರವಾಗಿ ಮಹತ್ವದ ಆದೇಶ ಹೊರಡಿಸಿದ್ದು, ಹಾವೇರಿಯಲ್ಲಿ ನಿಲುಗಡೆ ಮಾಡುವಂತೆ ಸೂಚಿಸಿದೆ. ಹಾವೇರಿಯಲ್ಲಿ ನಿಲುಗಡೆಗೆ ಸೂಚಿಸುವಂತೆ ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ ರೈಲ್ವೆ ಇಲಾಖೆಗೆ ಮನವಿ ಮಾಡಿದ್ದರು. ಅದನ್ನು ಪುರಸ್ಕರಿಸಿರುವ ರೈಲ್ವೆ ಇದೀಗ ಆದೇಶ ಹೊರಡಿಸಿದೆ.



ಬೆಂಗಳೂರು–ಧಾರವಾಡ ವಂದೇ ಭಾರತ್ ಎಕ್ಸ್ಪ್ರೆಸ್ ರೈಲಿಗೆ ಪ್ರಾಯೋಗಿಕ ನೆಲೆಯಲ್ಲಿ ಈಗಿನಿಂದಲೇ ಜಾರಿಗೆ ಬರುವಂತೆ ಹಾವೇರಿ ನಿಲ್ದಾಣದಲ್ಲಿ ನಿಲುಗಡೆ ನೀಡಬೇಕು. ಟಿಕೆಟ್ ವಿತರಣೆಯ ಬಗ್ಗೆ ಪರಿಶೀಲಿಸುತ್ತಿರಬೇಕು ಮತ್ತು ಹಾವೇರಿಯಲ್ಲಿ ನಿಲುಗಡೆ ನೀಡುತ್ತಿರುವ ಬಗ್ಗೆ ಹೆಚ್ಚೆಚ್ಚು ಜನರಿಗೆ ಮಾಹಿತಿ ದೊರೆಯುವಂತೆ ಮಾಡಬೇಕು ಎಂದು ರೈಲ್ವೆ ಇಲಾಖೆ ಆದೇಶದಲ್ಲಿ ಉಲ್ಲೇಖಿಸಲಾಗಿದೆ. ತಮ್ಮ ಮನವಿಯನ್ನು ಪುರಸ್ಕರಿಸಿ ಹಾವೇರಿಯಲ್ಲಿ ಬೆಂಗಳೂರು – ಧಾರವಾಡ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿಗೆ ನಿಲುಗಡೆ ನೀಡಿದ್ದಕ್ಕಾಗಿ ಬಸವರಾಜ ಬೊಮ್ಮಾಯಿ ಅವರು ಕೇಂದ್ರ ಸರ್ಕಾರ ಹಾಗೂ ರೈಲ್ವೆ ಇಲಾಖೆಗೆ ಧನ್ಯವಾದ ತಿಳಿಸಿದ್ದಾರೆ.

ಈ ವಿಚಾರವಾಗಿ ಸಾಮಾಜಿಕ ಮಾಧ್ಯಮ ಎಕ್ಸ್‌ಪ್ರೆಸ್‌ನಲ್ಲಿ ಸಂದೇಶ ಪ್ರಕಟಿಸಿರುವ ಅವರು, ಧಾರವಾಡ–ಬೆಂಗಳೂರು ಮಧ್ಯ ಸಂಚರಿಸುವ ವಂದೇ ಭಾರತ ರೈಲು ಹಾವೇರಿಯಲ್ಲಿ ನಿಲುಗಡೆಗೆ ಆದೇಶ ನೀಡಿರುವ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ ಸೋಮಣ್ಣ ಅವರಿಗೆ ಧನ್ಯವಾದ ಗಳನ್ನು ಸಲ್ಲಿಸುತ್ತೇನೆ ಎಂದು ಉಲ್ಲೇಖಿಸಿದ್ದಾರೆ.

### ಯುಗಾದಿ ಜಾನಪದ ಸಂಗೀತೋತ್ಸವ

# ನಶಿಸುತ್ತಿರುವ ಜಾನಪದ ಕಲೆ ಉಳಿಸುವ ಅಗತ್ಯವಿದೆ: ಸೋನಾರೆ

**ಬೀದರ್, ಏ.2–** ಇಂದಿನ ಆಧುನಿಕತೆಯ ಭರಾಟೆಯಲ್ಲಿ ವ್ಯಕ್ತಿ ದೇಶಿ ಸಂಸ್ಕೃತಿಯನ್ನು ಮರೆತು ಹಪಾಹಪಿತನದಿಂದ ವಿದೇಶಿ ಸಂಸ್ಕೃತಿಗೆ ಮಾರು ಹೋಗುತ್ತಿದ್ದಾನೆ. ಇದರಿಂದ ರಾಜ್ಯದಲ್ಲಿ ಜಾನಪದ ಸಂಸ್ಕೃತಿ, ಕಲೆ, ಸಾಹಿತ್ಯ ದಿನೇ ದಿನೇ ಮರೆಮಾಚುತ್ತಿದೆ. ಅದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಎಲ್ಲ ಸಂಘ–ಸಂಸ್ಥೆಗಳ ಮೇಲಿದೆ ಎಂದು ಕರ್ನಾಟಕ ಜಾನಪದ ಅಕ್ಯಾಡೆಮಿ ಸದಸ್ಯ ವಿಜಯಕುಮಾರ್ ಸೋನಾರೆ ಅವರು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಂಗ ತರಂಗ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ 2020–2021ನೇ ಸಾಲಿನ ಸಂಘ–ಸಂಸ್ಥೆಗಳ ವಿಶೇಷ ಘಟಕ ಯೋಜನೆಯಡಿಯಲ್ಲಿ ಬಲ್ಲೂರ್ ಗ್ರಾಮದ ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಯ ಸಭಾಂಗಣದಲ್ಲಿ ಯುಗಾದಿ ಹಬ್ಬದ ಪ್ರಯುಕ್ತ ಜಾನಪದ ಸಂಗೀತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು,



ಜಾನಪದ ಕಲೆ ಬುಲಾಯಿ, ಜೋಗುಳ, ಸಂಪ್ರದಾಯದ ಹಾಡುಗಳು, ಕೋಲಾಟ ಇವುಗಳು ಮುಂದಿನ ಪೀಳಿಗೆಗೆ ತಿಳಿಸಬೇಕಾದರೆ ಜಾನಪದ ಸಂಸ್ಕೃತಿ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯಗತ್ಯವಾಗಿದೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ್ ಶಿಂಧೆ ಅವರು ಮಾತನಾಡಿ, ಜಾನಪದ ಸಂಸ್ಕೃತಿ ಉಳಿಸಿ ಬೆಳೆಸಲು ಸರ್ಕಾರ ಸಾಕಷ್ಟು ಪ್ರೋತ್ಸಾಹ ನೀಡುತ್ತಿದೆ. ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹೆಚ್ಚು ಹೆಚ್ಚು ಮುಂದೆ ಬಂದು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

### ಜಿಲ್ಲಾ ಪೊಲೀಸ್ ಕಲ್ಯಾಣ, ಧ್ವಜ ದಿನಾಚರಣೆ

## ಸಮಾಜದಲ್ಲಿ ಶಾಂತಿ–ಸುವ್ಯವಸ್ಥೆಗೆ ಹಗಲಿರುಳು ಶ್ರಮಿಸುವ ಪೊಲೀಸರ ಕಾರ್ಯ ಶ್ಲಾಘನೀಯ–ಡಿಸಿ

**ವಿಜಯಪುರ, ಏ.2–**ಸಮಾಜದಲ್ಲಿ ಪ್ರತಿಯೊಬ್ಬರು ಶಾಂತಿ–ನೆಮ್ಮದಿಯಿಂದ ಬದುಕಲು ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಹಗಲಿರುಳು ಶ್ರಮಿಸುವ ಪೊಲೀಸರ ಕಾರ್ಯ ಶ್ಲಾಘನೀಯವಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಹೇಳಿದರು.



ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪೊಲೀಸ್ ಕಲ್ಯಾಣ ಹಾಗೂ ಧ್ವಜ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಮಾಜದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಕಾರ್ಯ ಮಾಡುತ್ತ, ನೊಂದವರಿಗೆ ಭರವಸೆ ನೀಡಿ ನಿಮ್ಮೊಂದಿಗೆ ನಾವಿದ್ದೇವೆ ಎಂಬುದು ಪೊಲೀಸ್ ಕಾರ್ಯವೈಖರಿಯಾಗಿದೆ. ಪ್ರತಿಯೊಂದು ಹಂತದಲ್ಲಿ ಪೊಲೀಸರ ಅವಶ್ಯಕತೆ ಇದೆ. ಇದು ಸಮಾಜದ ಭಾಗವಾಗಿದೆ. ನೆಮ್ಮದಿಯ ಅಪರಾಧ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪೊಲೀಸರ ಕರ್ತವ್ಯ ಶ್ಲಾಘನೀಯವಾಗಿದೆ. ಜಿಲ್ಲೆಯ ಪೊಲೀಸರ ಕಾರ್ಯದಕ್ಷತೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಕಷ್ಟಕರ ಸಂದರ್ಭಗಳಲ್ಲಿ ತತಕ್ಷಣ ಸ್ಪಂದಿಸಿ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುತ್ತಾರೆ. ಜಿಲ್ಲೆಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಾಮನಗೌಡ ಹಟ್ಟಿ ಸೇರಿದಂತೆ ಜಿಲ್ಲೆಯ ನಾಲ್ಕು ಜನ ಪೊಲೀಸರು ಮುಖ್ಯಮಂತ್ರಿಗಳ ಪದಕಕ್ಕೆ ಭಾಜನರಾಗಿರುವುದಕ್ಕೆ ಈ ಸಂದರ್ಭದಲ್ಲಿ ಅಭಿನಂದನೆ ಸಲ್ಲಿಸುತ್ತೇನೆ ಎಂದು ಅವರು ಹೇಳಿದರು.

# ಸುಕೋ ಬ್ಯಾಂಕ್: 2120 ಕೋಟಿ ವಹಿವಾಟಿನೊಂದಿಗೆ ಶೇ.19.18ರಷ್ಟು ಪ್ರಗತಿ–ಮೋಹಿತ್ ಮಸ್ಕಿ

**ಬಳ್ಳಾರಿ, ಏ.2–**ಸಹಕಾರಿ ಕ್ಷೇತ್ರದ ವಿಶ್ವಾಸಾರ್ಹ ಸುಕೋ ಸೌಹಾರ್ದ ಸಹಕಾರಿ ಬ್ಯಾಂಕ್ 2024–25 ರ ಆರ್ಥಿಕ ಸಾಲಿನಲ್ಲಿ ಒಟ್ಟು 2120 ಕೋಟಿ ರೂಪಾಯಿ ವಹಿವಾಟು ನಡೆಸಿ, ಶೇ. 19.18% ರಷ್ಟು ಪ್ರಗತಿ ಸಾಧಿಸಿದೆ ಎಂದು ಬ್ಯಾಂಕಿನ ಅಧ್ಯಕ್ಷರಾದ ಮೋಹಿತ್ ಮಸ್ಕಿ ಅವರು ತಿಳಿಸಿದ್ದಾರೆ.





ಸುಕೋ ಬ್ಯಾಂಕಿನ ಕೇಂದ್ರ ಕಚೇರಿಯ ಸಭಾಂಗಣದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಬ್ಯಾಂಕ್‌ನ ಒಟ್ಟು ಲಾಭ 9.29 ಕೋಟಿ ರೂಪಾಯಿ ಆಗಿದ್ದು, ತೆರಿಗೆ ಪಾವತಿಯ ನಂತರ 6 ಕೋಟಿ ರೂಪಾಯಿ ನಿವ್ವಳ ಲಾಭವಾಗಿದೆ. ಷೇರುದಾರರಿಗೆ ಶೇ. 09% ಲಾಭಾಂಶ ನೀಡಲು ಸಾಮಾನ್ಯ ಸಭೆಗೆ ಶಿಫಾರಸು ಮಾಡಲಾಗಿದೆ ಬ್ಯಾಂಕ್‌ನ ಆರಂಭದಿಂದಲೂ ಲಾಭಗಳಿಕೆ ಮತ್ತು ಪ್ರಗತಿ ಸಾಧಿಸುವಲ್ಲಿ ಸದಾ ಮುನ್ನಡೆಯಲ್ಲಿದೆ ಎಂದರು.

ಸುಕೋ ಬ್ಯಾಂಕ್ ಸಂಪೂರ್ಣ ಕರ್ನಾಟಕದಾದ್ಯಂತ ಕಾರ್ಯಕ್ಷೇತ್ರ ವ್ಯಾಪ್ತಿಯನ್ನು ಹೊಂದಿದ್ದು ಪ್ರಸ್ತುತ 29 ಶಾಖೆಗಳನ್ನು ಹೊಂದಿದೆ. ಒಟ್ಟು 1313 ಕೋಟಿ ರೂಪಾಯಿ ಮೊತ್ತದ ಠೇವಣಿ, ಒಟ್ಟು 807 ಕೋಟಿ ರೂಪಾಯಿ ಸಾಲವನ್ನು ವಿತರಣೆ ಮಾಡಿದೆ. ವಿತರಣೆ ಮಾಡಿರುವ ಒಟ್ಟು ಸಾಲದಲ್ಲಿ 25 ಲಕ್ಷ ರೂಪಾಯಿ ಒಳಗಿನ ಕಿರು ಸಾಲಗಳು 428 ಕೋಟಿ ರೂಪಾಯಿ ಆಗಿದ್ದು, ಈ ಮೊತ್ತ ಒಟ್ಟು ಸಾಲದ ಶೇ.53.08% ರಷ್ಟು ಇದೆ. ಸುಕೋ ಬ್ಯಾಂಕ್ ಎಂಎಸ್‌ಎಂಇ ವಲಯಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಬ್ಯಾಂಕಿನ (ಎನ್‌ಪಿಎ) ಅನುತ್ಪಾದಕ ಆಸ್ತಿ ಶೇ. 5.6 ರಷ್ಟಿದೆ ಎಂದರು.

ಸುಕೋ ಬ್ಯಾಂಕ್ ತನ್ನ ಗ್ರಾಹಕರಿಗಾಗಿ ಮೊಬೈಲ್ ಅಪ್ ಅನ್ನು ಬಿಡುಗಡೆ ಮಾಡಿದ್ದು, ಗ್ರಾಹಕರು ಆಪ್ ಮೂಲಕ ವ್ಯವಹಾರವನ್ನು ನಡೆಸುತ್ತಿದ್ದಾರೆ. ಸುಕೋ ಸೌಹಾರ್ದ ಸಹಕಾರಿ ಬ್ಯಾಂಕ್ ಕೇಂದ್ರ ಸರ್ಕಾರದ ಯುಪಿಐ ಹಣ ಪಾವತಿ ತಂತ್ರಜ್ಞಾನದ ವ್ಯವಸ್ಥೆಗೆ ಒಳಪಟ್ಟ ಕರ್ನಾಟಕದ ಪ್ರಪ್ರಥಮ ಸಹಕಾರಿ ಬ್ಯಾಂಕ್ ಎನ್ನುವ ಕೀರ್ತಿಯನ್ನು ಹೊಂದಿದೆ. ಸದಾಕಾಲ ತಂತ್ರಜ್ಞಾನ ಮತ್ತು ಆಧುನೀಕತೆಗಳನ್ನು ದೈನಂದಿನ ವ್ಯವಹಾರದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮವಾದ ಗ್ರಾಹಕ ಸೇವೆ ನೀಡುವ ಮೂಲಕ ಅನೇಕ ಪ್ರಥಮಗಳ ಗೌರವಕ್ಕೆ ಕೀರ್ತಿಗೆ ಮತ್ತು ಅಭಿನಂದನೆಗಳಿಗೆ ಒಳಗಾಗಿದೆ ಎಂದು ತಿಳಿಸಲು ಹೆಮ್ಮೆಯಾಗುತ್ತದೆ ಎಂದರು.ಗ್ರಾಹಕರ ವಿಶ್ವಾಸ, ಷೇರುದಾರರ ಬೆಂಬಲ ಮತ್ತು ಗುಣಮಟ್ಟದ ಸೇವೆಯ ಮೂಲಕ ದಿನೇ ದಿನೇ ವೃದ್ಧಿಗೊಳ್ಳುತ್ತಿರುವ ಸುಕೋ ಬ್ಯಾಂಕ್ ವ್ಯವಹಾರಕ್ಕೆ ಪಾರದರ್ಶಕತೆ, ತ್ವರಿತ ಸೇವೆ ಮತ್ತು ಸಕಾಲಿಕವಾಗಿ ಬಿಡುಗಡೆ ಆಗುತ್ತಿರುವ ಸಾಲಗಳೇ ಕಾರಣವಾಗಿವೆ ಎಂದರು.

# ಬುದ್ಧ ಗಯಾ ಮಹಾಬೋಧಿ ವಿಹಾರ, ಆಡಳಿತ ಸಂಪೂರ್ಣ ಬೌದ್ಧರಿಗೆ ನೀಡಲು ಆಗ್ರಹಿಸಿ ಪ್ರತಿಭಟನೆ

**ಕಲಬುರಗಿ, ಏ.2–** ಬಿಟಿ ಕಾಯ್ದೆ 1949 ರದ್ದುಗೊಳಿಸಿ, ಗಯಾ ಮಹಾಬೋಧಿ ಮಹಾವಿಹಾರದ ಆಡಳಿತ ಸಂಪೂರ್ಣ ಬೌದ್ಧರಿಗೆ ನೀಡಬೇಕು ಎಂದು ಒತ್ತಾಯಿಸಿ ಬುದ್ಧ ಗಯಾದಲ್ಲಿ ನಡೆದಿರುವ ಮಹಾಬೋಧಿ ಮಹಾವಿಹಾರ ಮುಕ್ತಿ ಆಂದೋಲನ ಬೆಂಬಲಿಸಿ ನಗರದ ಜಗತ್ ವೃತ್ತದಲ್ಲಿನ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆಯ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ಬೌದ್ಧ ಉಪಾಸಕ, ಉಪಾಸಕಿಯರು ಪ್ರತಿಭಟನೆ ಮಾಡಿದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ, ಪ್ರಧಾನಿಯವರಿಗೆ ಹಾಗೂ ಬಿಹಾರ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ, ಬುದ್ಧ ಗಯಾ ಜಗತ್ತಿನ ಬೌದ್ಧರಿಗೆಲ್ಲ ಪವಿತ್ರವಾದ ಸ್ಥಳ. ರಾಜಕುಮಾರ ಸಿದ್ಧಾರ್ಥ ಬೋಧಿ ಜ್ಞಾನ ಪಡೆದು ಭಗವಾನ್ ಬುದ್ಧನಾದ ಪಾವನ ಸ್ಥಳ. ಈ ಕ್ಷೇತ್ರ ಬುದ್ಧನ ಕಾಲ ದಿಂದಲೂ ಪೂಜನೀಯವಾಗಿದೆ. ಸಾಮ್ರಾಟ್ ಅಶೋಕನೂ ಸೇರಿ ದೇಶದ ಅನೇಕ ರಾಜ ಮಹಾರಾಜರು ಮತ್ತು ಬರ್ಮಾ, ಶ್ರೀಲಂಕಾ, ಥೈಲ್ಯಾಂಡ್, ಜಪಾನ್ ಹಾಗೂ ಇನ್ನಿತರ ದೇಶಗಳ ರಾಜರು ಹಾಗೂ ಬೌದ್ಧ ಉಪಾಸಕರು ಈ ಕ್ಷೇತ್ರದ ಅಭಿವೃದ್ಧಿಗಾಗಿ ಶ್ರದ್ಧಾ ಪೂರ್ವಕವಾಗಿ ಅಪಾರ ಕೊಡುಗೆ ನೀಡಿದ್ದಾರೆ ಎಂದರು.

ಭಾರತದಲ್ಲಿ ಹುಟ್ಟಿ ಏಶಿಯಾ ಖಂಡದ ಎಲ್ಲ ದೇಶಗಳಲ್ಲಿ ಪಸರಿಸಿ ಪ್ರಪಂಚದಾದ್ಯಂತ ವಿಜೃಂಭಿಸಿದೆ. ಕಾಲಾನುಕ್ರಮದಲ್ಲಿ ಮಾತೃಭೂಮಿಯಲ್ಲಿ ಮುಸ್ಲಿಂ ಹಾಗೂ ಹಿಂದೂಗಳ ಅಕ್ರಮಕ್ಕೆ ತುತ್ತಾಗಿ ಕಣ್ಮರೆಯಾಯಿತು. ಕ್ರಿಶ 1150ರಿಂದ ಕ್ರಿ.ಶ. 1800ನ್ನು ಬೌದ್ಧ ಚರಿತ್ರೆಯಲ್ಲಿ ಕತ್ತಲೆಯುಗ. ಈ ಕರಾಳ ಘಟ್ಟದಲ್ಲಿ ಶಂಕರಾಚಾರ್ಯರ ಪಂಥಕ್ಕೆ ಸೇರಿದ ಗೋಸಾಯಿ ಎಂಬ ಶೈವ ಬ್ರಾಹ್ಮಣ ಮಹಾಬೋಧಿ ಮಹಾವಿಹಾರ ಕ್ಷೇತ್ರವನ್ನು ಅತಿಕ್ರಮಣ ಮಾಡಿದರು. ಆಗ ದೆಹಲಿಯಲ್ಲಿ ಮೊಘಲ್ ದೊರೆ ಅಕ್ಬರ್ ಆಡಳಿತವಿತ್ತು. ಮುಂದೆ ಮೊಘಲ್ ಸುಲ್ತಾನ್ ಷಾ ಅಲಮ್ ಮಹಾಂತ ಲಾಲಗಿರಿಗೆ ಮಾಸ್ತಿಪುರ ಮತ್ತು ತಾರಾಡಿಯಾ ಎಂಬ ಗ್ರಾಮಗಳನ್ನು ದಾನ ಕೊಟ್ಟ. ಈ ಗ್ರಾಮಗಳ ಪಕ್ಕದಲ್ಲಿದ್ದ ಬುದ್ಧ ಗಯಾ ಕ್ಷೇತ್ರವನ್ನು ಮಹಾಂತನು ಸುಳ್ಳು ದಾಖಲೆ ಸೃಷ್ಟಿಸಿ ಸಂಪೂರ್ಣ ಕಬ್ಜಾ ಮಾಡಿದರು ಎಂದು ಅವರು ಆರೋಪಿಸಿದರು.





ಕಲಬುರಗಿಯಲ್ಲಿ ಬೌದ್ಧ ಭಿಕ್ಕುಗಳು, ಭಂತೇಜಿ ಮತ್ತು ಬೌದ್ಧ ಅನುಯಾಯಿಗಳು, ಬೌದ್ಧ ಗಯಾ ಆಡಳಿತವನ್ನು ಸಂಪೂರ್ಣ ಬೌದ್ಧರಿಗೆ ವಹಿಸಬೇಕೆಂದು ಆಗ್ರಹಿಸಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಭಾರತದ ಸಂವಿಧಾನದ ಪ್ರಕಾರ ಎಲ್ಲ ಧಾರ್ಮಿಕ ಕೇಂದ್ರಗಳ ಆಡಳಿತವನ್ನು ಆಯಾ ಧರ್ಮದವರೇ ನಿರ್ವಹಿಸುತ್ತಿದ್ದಾರೆ. ಸಿಖ್ಖರು ಗುರುದ್ವಾರ, ಮುಸ್ಲಿಂರು ಅಜ್ಮೇರ್ ದರ್ಗಾ, ಹಿಂದೂಗಳು ದೇವಸ್ಥಾನಗಳ ಆಡಳಿತ ಮಂಡಳಿ ಸದಸ್ಯರಾಗಿರುತ್ತಾರೆ. ಆದಾಗ್ಯೂ, ಬುದ್ಧ ವಿಹಾರದಲ್ಲಿ ಮಾತ್ರ ಬೌದ್ಧರು ಸಂಪೂರ್ಣ ಆಡಳಿತ ಮಂಡಳಿ ಸದಸ್ಯರಿಲ್ಲ. ಹೀಗಾಗಿ ಸಂವಿಧಾನ ವಿರೋಧಿ ಬಿಟಿ ಕಾಯ್ದೆ 1949ರ ಅಡಿಯಲ್ಲಿ ಮಹಾಬೋಧಿ ಮಹಾವಿಹಾರದ ಆಡಳಿತ ಮಂಡಳಿಯೊಳಗೆ ಸೇರಿದ ಬ್ರಾಹ್ಮಣ ಪುರೋಹಿತರು ಆಡಳಿತ ಮಂಡಳಿಯಲ್ಲಿದ್ದಾರೆ ಎಂದು ಅವರು ದೂರಿದರು.

ಬ್ರಾಹ್ಮಣ ಪುರೋಹಿತರು ಬೌದ್ಧ ಇತಿಹಾಸ ಮತ್ತು ಸಂಸ್ಕೃತಿಯ ನಾಶಕ್ಕೆ ಕೈ ಹಾಕಿದ್ದಾರೆ. ಬುದ್ಧನ ವಿಗ್ರಹದ ಮುಂದೆ ಶಿವಲಿಂಗ ಇದೆ ಎಂದು ಸುಳ್ಳು ಸೃಷ್ಟಿ ಮಾಡಿದ್ದಾರೆ. ಬುದ್ಧ ವಿಹಾರದ ಆವರಣದಲ್ಲಿ ಗಣಪತಿ ವಿಗ್ರಹವನ್ನು ಇಟ್ಟಿದ್ದಾರೆ. ಹಲವು ಬೌದ್ಧ ಮೂರ್ತಿಗಳನ್ನು ಬ್ರಾಹ್ಮಣೀಕರಣ ಮಾಡಿದ್ದಾರೆ. ಪಂಚಪಾಂಡವರನ್ನು ಸೃಷ್ಟಿಸಿದ್ದಾರೆ. ಈ ಕುರಿತು ನ್ಯಾಯಾಲಯದಲ್ಲಿಯೂ ಸಹ ಕಾನೂನು ಹೋರಾಟ ಮುಂದುವರೆಸಲಾಗುತ್ತಿದೆ. ಅಖಿಲ ಭಾರತ ಬೌದ್ಧ ವೇದಿಕೆ ಎಲ್ಲ ವಿಚಾರಧಾರೆಯ ಬೌದ್ಧ ಸಂಘ, ಸಂಸ್ಥೆಗಳನ್ನು ಹಾಗೂ ದೇಶದ ಅಂಬೇಡ್ಕರ್ ಅನುಯಾಯಿಗಳನ್ನು ಒಂದೇ ವೇದಿಕೆಗೆ ಕರೆತಂದು ಹೋರಾಟ ಆರಂಭಿಸಿದೆ ಎಂದು ಅವರು ಹೇಳಿದರು.

ಕಳೆದ ಫೆಬ್ರವರಿ 12ರಂದು ಆಮರಣ ಉಪವಾಸ ಸತ್ಯಾಗ್ರಹ ಪ್ರಾರಂಭವಾಗಿದೆ. ಹೋರಾಟವನ್ನು ಹತ್ತಿಕ್ಕಲು ನಾನಾ ವಿಧದ ತಂತ್ರಗಳನ್ನು ಅನುಸರಿಸಿದರೂ ಸಹ ಹೋರಾಟ ಮುಂದುವರೆದಿದೆ. ಇದರಿಂದ ಕ್ರೋಧಗೊಂಡ ಬಿಹಾರ್ ಸರ್ಕಾರ ಹಾಗೂ ಕೇಂದ್ರದ ಮೋದಿ ಸರ್ಕಾರ ಕಳೆದ ಫೆಬ್ರವರಿ 27ರಂದು ರಾತ್ರಿ 12 ಗಂಟೆಗೆ ಸತ್ಯಾಗ್ರಹ ನಿರತ ಬೌದ್ಧ ಭಿಕ್ಕುಗಳ ಮೇಲೆ ಅಮಾನುಷವಾಗಿ ದೌರ್ಜನ್ಯ ಎಸಗಿದ್ದಾರೆ. ಮಹಿಳಾ ಭಿಕ್ಕುಣಿಯರೊಂದಿಗೆ ಅನುಚಿತವಾಗಿ ವರ್ತಿಸಿದ್ದಾರೆ. ರಾತ್ರೋ ರಾತ್ರಿ ಅವರನ್ನು ಬಂಧಿಸಿ ಮೆಡಿಕಲ್ ಕಾಲೇಜು ದ್ವಾರದ ಮುಂದೆ ಬಿಟ್ಟು ಪೋಲಿಸರು ಪರಾರಿಯಾಗಿದ್ದಾರೆ ಎಂದು ದೂರಿದ ಅವರು, ಬುದ್ಧ ಗಯಾ ಆಡಳಿತವನ್ನು ಸಂಪೂರ್ಣವಾಗಿ ಬೌದ್ಧರಿಗೆ ಬಿಟ್ಟುಕೊಡಬೇಕು ಎಂದು ಒತ್ತಾಯಿಸಿದರು.

### ಶಂಕರ್ ಪ್ರತಿಷ್ಠಾನದ ಚಿಗುರು ಚಿನ್ಮಯ ಪ್ರಶಸ್ತಿ ಪ್ರದಾನ

# ಸಂಸ್ಕಾರದ ಬೀಜ ಬಿತ್ತಿ ಆದರ್ಶವಂತರನ್ನು ಬೆಳೆಸೋಣ: ಡಾ.ಸುಜಾತಾ ಜಂಗಮಶೆಟ್ಟಿ



ಕಲಬುರಗಿ ನಗರದ ರೋಟರಿ ಸಭಾಂಗಣದಲ್ಲಿ ಡಾ.ಪಿ.ಎಸ್.ಶಂಕರ ಪ್ರತಿಷ್ಠಾನ, ದಕ್ಷಿಣ ಕನ್ನಡ ಸಂಘ ಮತ್ತು ರೋಟರಿ ಆಶ್ರಯದಲ್ಲಿ ಆಯೋಜಿಸಿದ ಚೈತ್ರೋತ್ಸವ ಕಾರ್ಯಕ್ರಮದಲ್ಲಿ ಸಾಧಕರಿಗೆ 'ಚಿನ್ಮಯ ಚಿಗುರು' ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

**ಕಲಬುರಗಿ, ಏ.2–** ಮಕ್ಕಳಿಗೆ ಸಂಸ್ಕಾರದ ಬೀಜ ಬಿತ್ತಿ ಅವರನ್ನು ಪ್ರತಿಭಾವಂತರನ್ನಾಗಿ ಬೆಳೆಸಿ ಆದರ್ಶ ಸಮಾಜ ಕಟ್ಟೋಣ ಎಂದು ಕಲಬುರಗಿ ರಂಗಾಯಣದ ನಿರ್ದೇಶಕಿ, ಡಾ. ಸುಜಾತಾ ಜಂಗಮಶೆಟ್ಟಿ ಹೇಳಿದರು.

ನಗರದ ಡಾ. ಪಿ.ಎಸ್.ಶಂಕರ್ ಪ್ರತಿಷ್ಠಾನ, ದಕ್ಷಿಣ ಕನ್ನಡ ಸಂಘ ಮತ್ತು ರೋಟರಿ ಕ್ಲಬ್ ಸಂಯುಕ್ತ ಆಶ್ರಯದಲ್ಲಿ ರೋಟರಿ ಸಭಾಂಗಣದಲ್ಲಿ ನಡೆದ ಚೈತ್ರೋತ್ಸವ–2025ರ ಅಂಗವಾಗಿ ವಿಶೇಷ ಸಾಧಕ ಮಕ್ಕಳಿಗೆ "ಚಿಗುರು ಚಿನ್ಮಯ" ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿ ಪೋಷಕರು ತಮ್ಮ ಮಕ್ಕಳನ್ನು ಅವರ ಕನಸಿನಂತೆ ಬೆಳೆಸಲು ಬಿಡಬೇಕಾಗಿದೆ. ಅಂಕದ ಬೆನ್ನು ಹತ್ತಿ ವೈದ್ಯರು ಇಂಜಿನಿಯರ್ ಗಳನ್ನು ಮಾತ್ರ ಸೃಷ್ಟಿ ಮಾಡಲು ಹೊರಟರೆ ಸಾಹಿತ್ಯ, ಸಂಗೀತ, ನಾಟಕ, ಕ್ರೀಡಾ ಕ್ಷೇತ್ರದಲ್ಲಿ ಪ್ರತಿಭಾವಂತರನ್ನು ಕಾಣುವುದು ಕಷ್ಟ ಸಾಧ್ಯ. ಎಳವೆಯಲ್ಲಿ ಪ್ರತಿಭೆಯನ್ನು ಗುರುತಿಸಿದರೆ ಅವರು ಭವಿಷ್ಯದಲ್ಲಿ ಶ್ರೇಷ್ಠ ಸಾಧಕರಾಗಿ ದೇಶಕ್ಕೆ ದೊಡ್ಡ ಕೊಡುಗೆ ನೀಡುತ್ತಾರೆ. ಅದಕ್ಕಾಗಿ ಶಿಬಿರ, ತರಬೇತಿಗಳಿಗೆ ಮಕ್ಕಳನ್ನು ಕಳುಹಿಸಿ ಬಹುಮುಖ ವ್ಯಕ್ತಿತ್ವ ಅರಳುವಂತೆ ಮಾಡಬೇಕು ಎಂದು ಹೇಳಿದರು.

ಡಾ. ಪಿ ಎಸ್ ಶಂಕರ್ ಪ್ರಾಸ್ತಾವಿಕವಾಗಿ, ಕಳೆದ 25 ವರ್ಷಗಳಿಂದ ಪ್ರತಿಷ್ಠಾನವು ಶಿಕ್ಷಣ, ಆರೋಗ್ಯ, ಸಾಂಸ್ಕೃತಿಕ ಕ್ರೀಡೆ ಸಾಹಿತ್ಯ, ಪ್ರಕಟಣೆ ಕ್ಷೇತ್ರಗಳಲ್ಲಿ ಅಪಾರವಾದ ಕೊಡುಗೆ ನೀಡಿ ಈ ಭಾಗದಲ್ಲಿ ಪ್ರಗತಿಗೆ ಕೈಜೋಡಿಸಿದೆ. ಚಿಗುರು ಚಿನ್ಮಯ ಪ್ರಶಸ್ತಿ ಪುರಸ್ಕೃತರು ಇಂದು ಶ್ರೇಷ್ಠ ಸಾಧಕರಾಗಿ ಹಲವು ರಂಗಗಳಲ್ಲಿ ಮಿಂಚುತ್ತಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

### ಯತ್ನಾಳ್ ಉಚ್ಚಾಟನೆ ವಿರೋಧಿಸಿ ಪ್ರತಿಭಟನೆ

## ಯಡಿಯೂರಪ್ಪ, ವಿಜಯೇಂದ್ರ ವಿರುದ್ಧ ಮಾಶಾಳ್ ಶ್ರೀಗಳ ಆಕ್ರೋಶ



ಕಲಬುರಗಿ ನಗರದ ಎಸ್‌ವಿಪಿ ವೃತ್ತದಲ್ಲಿ ಯತ್ನಾಳ್ ಉಚ್ಚಾಟನೆಯನ್ನು ವಿರೋಧಿಸಿ ಮಾಶಾಳ್ ಶ್ರೀಗಳ ನೇತೃತ್ವದಲ್ಲಿ ಯತ್ನಾಳ್ ಅಭಿಮಾನಿಗಳು ಬಿಎಸ್‌ವೈ–ವಿಜಯೇಂದ್ರ ಅವರ ಭಾವಚಿತ್ರಗಳಿಗೆ ಬೆಂಕಿ ಹಚ್ಚಿ, ರಸ್ತೆ ಮಧ್ಯೆ ಟೈರ್‌ಗಳನ್ನು ಸುಟ್ಟು ಆಕ್ರೋಶ ವ್ಯಕ್ತಪಡಿಸಿದರು.

**ಕಲಬುರಗಿ, ಏ.2–** ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿಯಿಂದ ಉಚ್ಚಾಟನೆಯನ್ನು ಖಂಡಿಸಿ ನಗರದಲ್ಲಿ ಅವರ ಅಭಿಮಾನಿಗಳು ಹಾಗೂ ಕಾರ್ಯಕರ್ತರು ನಗರದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಯಡಿಯೂರಪ್ಪ, ವಿಜಯೇಂದ್ರ ಭಾವಚಿತ್ರಗಳನ್ನು ಮತ್ತು ಟೈರ್ ಸುಟ್ಟು ಆಕ್ರೋಶ ಹೊರಹಾಕಿದರು.

ಪ್ರತಿಭಟನೆಯಲ್ಲಿ ಮಾಶಾಳದ ಮರುಳಾರಾಧ್ಯ ಶಿವಾಚಾರ್ಯರು, ನೀಲೂರಿನ ಬಂಗಾರಜಡೆಯ ನೀಲ ಕಂಠೇಶ್ವರ ಸಂಸ್ಥಾನದ ಶರಣಬಸಪ್ಪ ಹಿರೇಮಠ್, ಕಾರ್ಯಕರ್ತರಾದ ಚಂದ್ರಕಾಂತ್ ಆರ್. ಕಾಳಗಿ, ವಿಜಯಕುಮಾರ್ ಜಿ. ನಂದ್ಯಾಳ್, ಸಂಗಮೇಶ್ವರ ನಂದ್ಯಾಳ್, ಶಿವಾನಾಸಿ, ಸಚಿನ್ ನಂದ್ಯಾಳ್, ಮನೋಜ್ ಚೌದ್ರಿ, ಮಾಲಾ ಕಣ್ಣಿ ಮುಂತಾದವರು ಪಾಲ್ಗೊಂಡಿದ್ದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಪತ್ರ ಸಲ್ಲಿಸಿ, ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿಯಿಂದ ಉಚ್ಚಾಟನೆ ಮಾಡಿದ್ದು ಖಂಡನೀಯ. ಕೂಡಲೇ ಮರಳಿ ಅವರನ್ನು ಬಿಜೆಪಿಗೆ ಮರಳಿ ಸೇರಿಸಿಕೊಳ್ಳಬೇಕು ಹಾಗೂ ರಾಜ್ಯದಲ್ಲಿ ಮುಂಬರುವ ದಿನಗಳಲ್ಲಿ ಬಿಜೆಪಿ ಗಟ್ಟಿಯಾಗಿ ಸರ್ಕಾರ ರಚಿಸಬೇಕಾದರೆ ಅವರಿಗೆ ರಾಜ್ಯಾಧ್ಯಕ್ಷರನ್ನಾಗಲಿ, ವಿರೋಧ ಪಕ್ಷದ ನಾಯಕರನ್ನಾಗಲಿ ಕೊಡಬೇಕು ಎಂದು ಒತ್ತಾಯಿಸಿದರು.

ಯತ್ನಾಳ್ ಅವರನ್ನು ಉಚ್ಚಾಟಿಸುವ ಮೂಲಕ ಕಟ್ಟರ್ ಹಿಂದುತ್ವವಾದಿ ಕಾರ್ಯಕರ್ತರನ್ನು ಕರ್ನಾಟಕದಲ್ಲಿ ದಮನಗೊಳಿಸಲಾಗಿದೆ. ಕಟ್ಟರ್ ಹಿಂದುತ್ವವಾದಿ ಶಾಸಕರನ್ನು ಮುಗಿಸುವ ಯತ್ನ ನಡೆಯುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಕರ್ನಾಟಕದಲ್ಲಿ ಬಿಟ್ಟಿ ಭಾಗ್ಯಗಳ ಆಮಿಷ ತೋರಿಸಿ ಸರ್ಕಾರ ರಚನೆ ಮಾಡಿರುವಂತಹ ಕಾಂಗ್ರೆಸ್ ಸರ್ಕಾರ ಪ್ರತಿ ತಿಂಗಳು ದಿನನಿತ್ಯ ಬಳಕೆಯಾಗುವ ವಸ್ತುಗಳ ದರಗಳನ್ನು ಹೆಚ್ಚಿಸಿ ಕರ್ನಾಟಕದ ಜನತೆಗೆ ಮೋಸ ಮಾಡುತ್ತಿದೆ. ಬಿಜೆಪಿ ನಾಯಕರು ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಮಾಡುವ ಬದಲಾಗಿ, ಕಾಂಗ್ರೆಸ್ ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಹೊಂದಾಣಿಕೆ ಮಾಡಿಕೊಂಡು, ಹೋರಾಟ ಮಾಡುವ ಯತ್ನಾಳ ಅವರನ್ನು ಪಕ್ಷದಿಂದ ಹೊರಗಟ್ಟುವಂತೆ ಮಾಡಿದ್ದಾರೆ. ಅಲ್ಲದೇ ಬಿಜೆಪಿ ನಾಯಕರು, ಶಾಸಕರು ಒಬ್ಬರನ್ನೊಬ್ಬರ ಕಾಲುಗಳನ್ನು ಹಿಡಿದು ಜಗ್ಗುವುದನ್ನು ಬಿಟ್ಟು ಎಲ್ಲರೂ ಒಟ್ಟಾಗಿ ಪಕ್ಷವನ್ನು ಸುಭದ್ರಗೊಳಿಸುವ ಕೆಲಸ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾಶಾಳದ ಮರುಳಾರಾಧ್ಯ ಶಿವಾಚಾರ್ಯರು ಮಾತನಾಡಿ, ಬಿಜೆಪಿಯಿಂದ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಉಚ್ಚಾಟಿಸಿದ್ದು ಸರಿಯಲ್ಲ. ಯತ್ನಾಳ್ ಅವರು ಕೇವಲ ಬಿಜೆಪಿ ನಾಯಕರಲ್ಲ, ಪಕ್ಕಾ ಹಿಂದುತ್ವದ ನಾಯಕರು. ನಾಲ್ಕು ಗೋಡೆಯೊಳಗೆ ಇರುವ ಸಮಸ್ಯೆಯನ್ನು ಅಲ್ಲಿಯೇ ಬಗೆಹರಿಸದೇ ರಸ್ತೆ ಮೇಲೆ ಸಮಸ್ಯೆ ಬರುವ ಹಾಗೆ ಮಾಡಿದ್ದು ತಪ್ಪು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಸಿದ್ದರಾಮಯ್ಯ ಅವರೊಂದಿಗೆ ಹೊಂದಾಣಿಕೆ ಮಾಡಿಕೊಂಡು ಯತ್ನಾಳ ಅವರನ್ನು ಉಚ್ಚಾಟಿಸುವಂತೆ ಮಾಡಿದ್ದು, ಇಂತಹ ಕೆಲಸ ಮಾಡಬಾರದಿತ್ತು. ಕೂಡಲೇ ಯತ್ನಾಳ್ ಅವರ ಉಚ್ಚಾಟನೆ ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

### ಪೊಲೀಸ್ ಇಲಾಖೆಯ ದಕ್ಷ, ಪ್ರಾಮಾಣಿಕ ಅಧಿಕಾರಿ

## ಇನ್ಸ್‌ಪೆಕ್ಟರ್ ಅಯ್ಯನಗೌಡ ಪಾಟೀಲ್ ಸೇವೆ ಪರಿಗಣಿಸಿ ಮುಖ್ಯಮಂತ್ರಿಗಳಿಂದ ಚಿನ್ನದ ಪದಕ



**ಬಳ್ಳಾರಿ, ಏ.2–** ಪೊಲೀಸ್ ಇಲಾಖೆಯಲ್ಲಿ ಅತ್ಯುತ್ತಮ ಸೇವೆಗೆ ಹಾಗೂ ದಕ್ಷ ಮತ್ತು ಪ್ರಾಮಾಣಿಕ ಸೇವೆಯನ್ನು ಪರಿಗಣಿಸಿ ನೀಡಲಾಗುವ 2024 ನೇ ಸಾಲಿನ ಮುಖ್ಯಮಂತ್ರಿಗಳ ಚಿನ್ನದ ಪದಕಕ್ಕೆ ಬಳ್ಳಾರಿಯ ಸಂಚಾರಿ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಅಯ್ಯನಗೌಡ ಪಾಟೀಲ್‌ರವರು ಆಯ್ಕೆಯಾಗಿದ್ದಾರೆ.

ಅಯ್ಯನಗೌಡ ಪಾಟೀಲರು ಮೂಲತಃ ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಗುಂಜಿಹಳ್ಳಿ ಗ್ರಾಮದ ವೀರನಗೌಡ ಪಾಟೀಲ್ ಹಾಗೂ ಲಲಿತಮ್ಮರವರ ಪುತ್ರನಾದ ಅಯ್ಯನಗೌಡ ಪಾಟೀಲ್ ಅವರು 2005 ರಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಆಗಿ ನೇಮಕಗೊಂಡು ಇಲಾಖೆಗೆ 1 ಸೇರ್ಪಡೆಯಾಗಿದ್ದರು. ರೈತಾಪಿ ಕುಟುಂಬದ ಹಿನ್ನೆಲೆಯ ಅಯ್ಯನಗೌಡ ಪಾಟೀಲರು ಇಲಾಖೆಗೆ ಸೇರಿದ ಬಳಿಕ ಮೈಸೂರಿನಲ್ಲಿ ತರಬೇತಿ ಮುಗಿಸಿದ ನಂತರ ಬೀದರ್‌ನಲ್ಲಿ ಕೆಲ ತಿಂಗಳುಗಳ ಕಾಲ ಸೇವೆ ಸಲ್ಲಿಸಿದ್ದರು.

ಪ್ರೊಬೇಷನರಿ ಮುಗಿದ ಬಳಿಕ ಬಳ್ಳಾರಿಯ ಮೋಕಾ ಪೊಲೀಸ್ ಠಾಣೆ, ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಪೊಲೀಸ್ ಠಾಣೆ, ರಾಯಚೂ–ರಿನ ಮುದಗಲ್ಲು ಪೊಲೀಸ್ ಠಾಣೆ, ಹಾಗೂ ಮಸ್ಕಿ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಆಗಿ ಸೇವೆ ಸಲ್ಲಿಸಿ, 2016 ರಲ್ಲಿ ಇನ್ಸ್‌ಪೆಕ್ಟರ್ ಆಗಿ ಬಡ್ತಿ ಪಡೆದ ನಂತರ ಕೆಲವು ತಿಂಗಳುಗಳ ಕಾಲ ಬಾಗಲಕೋಟೆಯ ರೈಲ್ವೆ, ಮುಧೋಳ ಹಾಗೂ ಹುನಗುಂದ ಪೊಲೀಸ್ ಠಾಣೆಗಳಲ್ಲಿ ಇನ್ಸ್‌ಪೆಕ್ಟರ್ ಆಗಿ ಕೆಲಸ ಮಾಡಿದ್ದರು. ಬಳಿಕ ಈಗ ಬಳ್ಳಾರಿಯ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಇವರು ಜನ ಸ್ನೇಹಿ ಪೊಲೀಸ್ ಅಧಿಕಾರಿಯಾಗಿ ಖ್ಯಾತಿಗಳಿಸಿದ್ದು, ಇಲಾಖೆಯಲ್ಲಿ ಎಲ್ಲಿಯೂ ಹೆಸರು ಕೆಡಿಸಿಕೊಳ್ಳದೆ ದಕ್ಷ ಹಾಗೂ ಪ್ರಾಮಾಣಿಕರಾಗಿ ಸೇವೆ ಸಲ್ಲಿಸಿ ಇಲಾಖೆಯ ಘನತೆ ಗೌರವವನ್ನು ಹೆಚ್ಚಿಸಿದ್ದಾರೆ. ಈ ಕಾರಣಕ್ಕೆ ಇಂದು ಬೆಂಗಳೂರಿನ ಕೋರಮಂಗಲದ ಪೊಲೀಸ್ ಮೈದಾನದಲ್ಲಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಚಿನ್ನದ ಪದಕ ಅಯ್ಯನಗೌಡ ಪಾಟೀಲರಿಗೆ ಗೌರವಿಸಿದ್ದಾರೆ. ಈ ಗೌರವಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾ ರಾಣಿಯವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಬಸವಕಲ್ಯಾಣದಲ್ಲಿ ಭೌತಿಕ ಅನುಭವ ಮಂಟಪ ಇತ್ತು: ಬೆಲ್ದಾಳ್ ಶರಣರು

**ಬೀದರ್, ಏ. 2:** ಹನ್ನೆರಡನೆಯ ಶತಮಾನದಲ್ಲಿ ಬಸವಕಲ್ಯಾಣದಲ್ಲಿ ಭೌತಿಕ ಅನುಭವ ಮಂಟಪ ಖಂಡಿತವಾಗಿಯೂ ಇತ್ತು. ಸಂಶೋಧನೆ ನಡೆಸಿದರೆ ಎಲ್ಲವೂ ಹೊರಬರುತ್ತದೆ ಎಂದು ಬಸವ ಯೋಗಾಶ್ರಮದ ಬೆಲ್ದಾಳ್ ಸಿದ್ಧರಾಮ ಶರಣರು ಹೇಳಿದರು.

ವಚನಗಳಲ್ಲಿ ಅನುಭವ ಮಂಟಪದ ಐತಿಹಾಸಿಕತೆ ಕುರಿತು ಮಾತನಾಡಿದ ಅವರು, ಭೌತಿ–ಕ ಅನುಭವ ಮಂಟಪವೇ ಇರಲಿಲ್ಲ. ವಚನಗಳಲ್ಲಿ ಎಲ್ಲೂ ಅನುಭವ ಮಂಟಪದ ಪ್ರಸ್ತಾಪವಿಲ್ಲ ಎಂದು ಚಿಂತಕಿ ವೀಣಾ ಬನ್ನಂಜೆ ಇತ್ತೀಚಿಗೆ ನೀಡಿರುವ ಹೇಳಿಕೆಯಲ್ಲಿ ಯಾವುದೇ ಹುರುಳಿಲ್ಲ ಬಸವಾದಿ ಶರಣರ ಬಹಳಷ್ಟು ವಚನಗಳಲ್ಲಿ ಅನುಭವ ಮಂಟಪದ ಪ್ರಸ್ತಾಪ ಇದೆ. ಬಸವಣ್ಣನವರ ಧರ್ಮ ಪತ್ನಿ ನೀಲಾಂಬಿಕೆ ಅವರ ವಚನದಲ್ಲಿ ಈ ಕುರಿತು ವಿಶೇಷವಾಗಿ ಉಲ್ಲೇಖಿಸಲಾಗಿದೆ. ಅನುಭವ ಮಂಟಪ ಭೌತಿಕವಾಗಿ ಅಸ್ತಿತ್ವದಲ್ಲಿ ಇತ್ತು ಎನ್ನುವುದನ್ನು ನಿರೂಪಿಸಲು ನೀಲಾಂಬಿಕೆ ಅವರ ಒಂದೇ ಒಂದು ವಚನ ಸಾಕು ಎಂದು ಹೇಳಿದರು.

ವಚನ ಪಠಣ ಮಾಡಿ ಕಾರ್ಯಕ್ರಮ ಉದ್ಘಾಟಿಸಿದ ಸಂಸದ ಸಾಗರ್ ಖಂಡ್ರೆ ಮಾತನಾಡಿ, ಪ್ರತಿಯೊಬ್ಬರೂ ವಚನಗಳ ಚಿಂತನ–ಮಂಥನದ ವಚನ ಮಂಟಪ ಕಾರ್ಯಕ್ರಮದ ಸದುಪಯೋಗ ಪಡೆಯಬೇಕು. ಕಾರ್ಯಕ್ರಮ ಹೆಚ್ಚು ಹೆಚ್ಚು ವಿಸ್ತಾರ ಗೊಳ್ಳಲಿ. ಬಸವಾದಿ ಶರಣರ ತತ್ವ ಪಸರಿಸುವ ಆಶಯ ಈಡೇರಲಿ ಎಂದು ಅವರು ಶುಭ ಹಾರೈಸಿದರು.

ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು ಮಾತನಾಡಿ, ಶರಣರು ವಚನಗಳ ಮೂಲಕ ಬದುಕಿನ ಸೂತ್ರ ನೀಡಿದ್ದಾರೆ. ಅವುಗಳನ್ನು ಪಾಲಿಸಿದ್ದಲ್ಲಿ ಬದುಕು ಸಾರ್ಥಕವಾಗುತ್ತದೆ. ಮಹಾಸಭಾ ಶರಣರ ವಚನಗಳ ಮೇಲೆ ಬೆಳಕು ಚೆಲ್ಲುವ ಮಾಸಿಕ ಕಾರ್ಯ ಕ್ರಮ ಆರಂಭಿಸಿರುವುದು ಶ್ಲಾಘನೀಯ ಎಂದರು. ಹುಲಸೂರಿನ ಡಾ.ಶಿವಾನಂದ ಸ್ವಾಮೀಜಿ ಮಾತನಾಡಿ, ಇಂದು ಕಾರ್ಯಕ್ರಮಗಳ ಸಂಘಟನೆ ಸುಲಭವಲ್ಲ. ಬಸವ ತತ್ವದ ಕಾರ್ಯಕ್ಕೆ ಎಲ್ಲರೂ ಸಹಕರಿಸಬೇಕು. ಒಳ್ಳೆಯ ಚಿಂತನೆಗಳನ್ನು ಬಿತ್ತುವ ಕಾರ್ಯಕ್ರಮಗಳಿಂದ ಮಾತ್ರ ಸುಂದರ ಸಮಾಜ ಕಟ್ಟಲು ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.

ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ಮಾತನಾಡಿ, ವಚನಗಳ ಚಿಂತನೆಯ ಕಾರ್ಯಕ್ರಮಕ್ಕೆ ವಚನ ಮಂಟಪ ಹೆಸರಿಟ್ಟಿರುವುದು ಅತ್ಯಂತ ಸೂಕ್ತವಾಗಿದೆ. ಇದು, ಐತಿಹಾಸಿಕ ಶೀರ್ಷಿಕೆ. ಜನಪದರು ವಚನ ಮಂಟಪ ಪದವನ್ನು ಬಳಸಿದ್ದರು ಎಂದು ಅವರು ಹೇಳಿದರು.

### ತಾಳ್ಮೆ ಪರೀಕ್ಷೆ ಮಾಡಬೇಡಿ-ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ

## ಕೆರೆಗಳ ಸಂರಕ್ಷಣೆಗೆ ವಾರದೊಳಗೆ ಇಂದೀಕರಣಕ್ಕೆ ಜಿಲ್ಲಾಧಿಕಾರಿ ಸೂಚನೆ



**ವಿಜಯಪುರ, ಏ.1–** ನನ್ನ ತಾಳ್ಮೆ ಪರೀಕ್ಷೆ ಮಾಡಬೇಡಿ, ಕಾರ್ಯದಲ್ಲಿ ಅಲಕ್ಷ್ಯತನ, ನಿಷ್ಕಾಳಜಿ ನಾನು ಸಹಿಸುವುದಿಲ್ಲ. ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ಯಾವ ಕೆರೆ ಯಾವ ಇಲಾಖೆಗೆ ಸೇರಿದೆ ಎಂಬುದರ ಕುರಿತು ಒಂದು ವಾರದೊಳಗಾಗಿ ಜಿಲ್ಲೆಯಲ್ಲಿರುವ ಎಲ್ಲ ಕೆರೆಗಳ ಆರ್‌ಟಿಸಿ ಇಂದೀಕರಣ ಮಾಡಿ ಮಾಲೀಕತ್ವ ನಮೂದಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸೂಚನೆ ನೀಡಿದ್ದಾರೆ. ಆಯಾ ತಾಲೂಕಾ ತಹಶೀಲ್ದಾರ, ಭೂಮಾಪನ ಇಲಾಖೆ ಅಧಿಕಾರಿಗಳು, ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಒತ್ತುವರಿ ಯಾಗಿರುವ ಕೆರೆಗಳನ್ನು ತೆರವುಗೊಳಿಸಬೇಕು. ಅವಶ್ಯವಿದ್ದಲ್ಲಿ ಪೋಲಿಸರ ಸಹಾಯ ಪಡೆದು ತೆರವಿಗೆ ಕ್ರಮ ವಹಿಸಬೇಕು. ಕೆರೆಗಳಿಗೆ ಸಂಬಂಧಿಸಿದಂತೆ ಆರ್.ಟಿ.ಸಿ. ಇಂದೀಕರಣ ಮಾಡಿ, ಕಾಲಂ ನಂ.9 ರಲ್ಲಿ ಯಾವ ಇಲಾಖೆಗೆ ಸೇರಿದ ಕೆರೆ ಎಂಬುದು ಮಾಲೀಕತ್ವವನ್ನು ಸ್ಪಷ್ಟವಾಗಿ ನಮೂದಿಸಿ, ಒತ್ತುವರಿ ಯಾಗಿರುವ ಕೆರೆಗಳನ್ನು ತೆರವುಗೊಳಿಸಿ ಸಂರಕ್ಷಣೆಗೆ ಕ್ರಮ ವಹಿಸಬೇಕು. ಮುದ್ದೇಬಿಹಾಳ ತಾಲೂಕಿನ 33 ಕೆರೆಗಳ ಪೈಕಿ 3 ಕೆರೆಗಳು ಲೋಕೋಪಯೋಗಿ ಇಲಾಖೆಯಿಂದ ಪಂಚಾಯತ್ ರಾಜ್ ಇಲಾಖೆಗೆ ವಿಭಜನೆಯಾಗಿದ್ದರೂ ಸಹ ಆರ್.ಟಿ.ಸಿ.ಯಲ್ಲಿ ಇನ್ನೂ ಹಳೆಯ ಮಾಲೀಕತ್ವ ನಮೂದಾಗಿದ್ದು, ಇಂದೀಕರಣ ಮಾಡಿ ಮಹಾನಗರ ಪಾಲಿಕೆ, ಗ್ರಾ.ಪಂ, ತಾ.ಪಂ, ಪ.ಪಂ ಸೇರಿದಂತೆ ಯಾವ ಇಲಾಖೆ ಸೇರಿದೆ ಎಂಬುದನ್ನು ನಮೂದಿಸಬೇಕು. ಕೆಲವೊಂದು ನಗರ ಸ್ಥಳೀಯ ಸಂಸ್ಥೆಗಳು ಗ್ರಾಮ ಪಂಚಾಯತಿಯಿಂದ ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೇರಿದ್ದು, ಇಂತಹ ಬದಲಾವಣೆಯಾಗಿರುವ, ಆರ್.ಟಿ.ಸಿ.ಯಲ್ಲಿ ಬದಲಾವಣೆ ಮಾಡಿ ನಮೂದಿಸಲು ಕ್ರಮವಹಿಸುವಂತೆ ಸೂಚಿಸಿದರು.

## ಸಂಜೆಯೊಳಗೆ ನೀರು ಬಿಡುವ ನಿರ್ಧಾರ ಕೈಕೊಳ್ಳದಿದ್ದರೆ ಯಾದಗಿರಿ ಬಂದ್ ಕರೆ: ರಾಜೂಗೌಡ



**ಯಾದಗಿರಿ, ಏ.2–** ಇಂದು ಸಂಜೆಯೊಳಗೆ ಕಾಲುವೆಗೆ ನೀರು ಬಿಡುವ ನಿರ್ಧಾರ ಕೈಕೊಳ್ಳಬೇಕು, ಇಲ್ಲವಾದರೇ ನಾಳೆ ಯಾದಗಿರಿ ಬಂದ್, ನಾಡಿದ್ದು ಜಿಲ್ಲೆಯ ಎಲ್ಲ ಸಚಿವ–ಶಾಸಕರ ಮನೆಗೆ ಮುತ್ತಿಗೆ ಹಾಕುವ ಮೂಲಕ ಹೋರಾಟ ನಿರಂತರವಾಗಿ ಮುಂದುವರೆಸಲಾಗುವುದು ಎಂದು ಮಾಜಿ ಸಚಿವ ರಾಜೂಗೌಡ ಎಚ್ಚರಿಸಿದರು. ಕೃಷ್ಣಾ ಯೋಜನೆಯ ಕೇಂದ್ರ ಕಚೇರಿ ಶಹಾಪುರ ಸಮೀಪದ ಭೀ.ಗುಡಿ ಹೆದ್ದಾರಿಯಲ್ಲಿ ನಡೆದ ಪಕ್ಷಾತೀತ ಹೋರಾಟದಲ್ಲಿ ಮಾತನಾಡಿದ ಅವರು, ಸಾವಿರಾರು ಸಂಖ್ಯೆಯಲ್ಲಿ ಸೇರಿದ್ದ ರೈತರನ್ನು ಉದ್ದೇಶಿಸಿ ಮಾತನಾಡಿ, ಕಾಲುವೆಗೆ ನೀರು ಹರಿಸುವ ವರೆಗೂ ಹೋರಾಟ ನಿಲ್ಲಿಸುವ ಮಾತೇ ಇಲ್ಲ ಎಂದು ಹೇಳಿದರು.

ಯಾದಗಿರಿ ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ನಾರಾಯಣಪುರ ಬಸವಸಾಗರ ಜಲಾಶಯದಿಂದ ಏ.15 ರವರೆಗೆ ಕಾಲುವೆಗಳಿಗೆ ನೀರು ಹರಿಸಲೇಬೇಕು, ಇದು ಮನವಿ ಅಲ್ಲ, ಒತ್ತಾಯ, ನಮ್ಮೆಲ್ಲರ ಆಗ್ರಹವಾಗಿದೆ ಎಂದರು.

ರೈತರು ತಮ್ಮ ಬೆಳೆಗಳನ್ನು ಉಳಿಸಿಕೊಳ್ಳಲು ಏ.15 ರವರೆಗೆ ನೀರು ಹರಿಸುವಂತೆ ಹೋರಾಟ ಮಾಡಲು ಹೊರಟ ರೈತರ ಮೇಲೆ ದೌರ್ಜನ್ಯ, ದಬ್ಬಾಳಿಕೆ ಮಾಡಲು ಮುಂದಾದ ಸರಕಾರ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತರಿಗೆ ಅನ್ಯಾಯವಾದರೆ ಸುಮ್ಮನೆ ಕೂಡುವುದಿಲ್ಲ. ಕಾಲುವೆಗಳಿಗೆ ನೀರು ಹರಿಸದಿದ್ದರೆ ಸುಮ್ಮನೆ ಬಿಡುವ ಮಾತೇ ಇಲ್ಲ. ತಕ್ಷಣ ಜಲಾಶಯದಲ್ಲಿರುವ ಕೃಷಿ ಬಳಕೆಯ ನೀರು ಕಾಲುವೆಗಳಿಗೆ ನಿರಂತರವಾಗಿ ಹರಿಸಬೇಕು ಇಲ್ಲವಾದಲ್ಲಿ ರೈತರ ಅಕ್ರೋಶಕ್ಕೆ ಸರಕಾರವೇ ಹೊಣೆಯಾಗಲಿದೆ ಎಂದು ನೆರೆದಿದ್ದ ಜನ ಕೂಗಿದರು. ಇದರಿಂದಾಗಿ ಸಂಚಾರ ಅಸ್ತವ್ಯಸ್ತಗೊಂಡಿತು. ಪಕ್ಷಾತೀತವಾಗಿ ನಡೆದ ಹೋರಾಟದಲ್ಲಿ ಶಹಾಪುರ ರೈತ ಮುಖಂಡರು ಹಾಗೂ ನಾಗರೀಕರು ಇದ್ದರು.

## ಸಮಾಜದ ಶಾಂತಿಗೆ ಪೊಲೀಸರ ಸೇವೆ ಶ್ಲಾಘನೀಯ–ಎಸ್‌ಪಿ ಡಾ.ಶೋಭಾರಾಣಿ ವಿ.ಜೆ



**ಬಳ್ಳಾರಿ,ಏ.2–** ಸಮಾಜದ ಶಾಂತಿಯ ಬದುಕಿಗೆ ಮತ್ತು ಸಾರ್ವಜನಿಕರ ನೆಮ್ಮದಿಗೆ ಪೊಲೀಸರ ಸೇವೆ ಅತ್ಯಂತ ಶ್ಲಾಘನೀಯವಾದದ್ದು. ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ವಿ.ಜೆ.ಶೋಭಾರಾಣಿ ಅವರು ಹೇಳಿದರು. ಬಳ್ಳಾರಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಬುಧವಾರ ಏರ್ಪಡಿಸಿದ್ದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಕರ್ನಾಟಕ ಏಕೀಕರಣವಾದ ನಂತರ ಕರ್ನಾಟಕ ಪೊಲೀಸ್ ಪಡೆಯನ್ನು 1965ರ ಏ.2ರಂದು ಕರ್ನಾಟಕ ಪೊಲೀಸ್ ಕಾಯ್ದೆಗೆ ಒಳಪಡಿಸಲಾಯಿತು. ಅದರ ಸ್ಮರಣೆಗಾಗಿ ಪ್ರತಿ ವರ್ಷ ಪೊಲೀಸ್ ಧ್ವಜ ದಿನವನ್ನಾಗಿ ರಾಜ್ಯದ ಎಲ್ಲ ಘಟಕಗಳಲ್ಲಿ ಆಚರಿಸಲಾಗುತ್ತದೆ ಎಂದು ತಿಳಿಸಿದರು. ಕಾನೂನು ಹಾಗೂ ಸಾರ್ವಜನಿಕ ಆಸ್ತಿ ಪಾಸ್ತಿಗಳ ಸಂರಕ್ಷಣೆ ಮಾಡಲು ಈ ದಿನವನ್ನು ಮುಡಿಪಾಗಿಡಲಾಗುತ್ತದೆ. ನಿತ್ಯ ಜೀವನದಲ್ಲಿ ಶಾಂತಿ ಸೌಹಾರ್ದತೆಯನ್ನು ನಿರಂತರವಾಗಿ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ತೋರಿದ ಶೌರ್ಯ, ಸಾಹಸ ಹಾಗೂ ನಿಸ್ವಾರ್ಥ ಸೇವೆಯನ್ನು ನೆನಪಿಸುವಂತಹ ದಿನವಿದು. ಪೊಲೀಸ್ ಸಿಬ್ಬಂದಿಗೆ ಶಿಸ್ತು ಮತ್ತು ಸಂಯಮ ಬಹಳ ಅವಶ್ಯಕ. ಪೊಲೀಸ್ ಧ್ವಜಗಳನ್ನು ಮಾರಾಟ ಮಾಡಿ ಸಂಗ್ರಹವಾದ ಹಣವನ್ನು ನಿವೃತ್ತ ಪೊಲೀಸ್ ಅಧಿಕಾರಿಗಳ ಕಲ್ಯಾಣ ನಿಧಿಗೆ ಅರ್ಪಿಸಲಾಗುವುದು ಎಂದರು.

ಜಿಲ್ಲೆಯಲ್ಲಿ 2024 ರ ಏ.01 ರಿಂದ 2025 ರ ಏ.01 ರವರೆಗೆ ಒಟ್ಟು 37 ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ವಯೋನಿವೃತ್ತಿ ಮತ್ತು ಸ್ವಇಚ್ಛೆ ನಿವೃತ್ತಿ ಹೊಂದಿರುತ್ತಾರೆ. ಅದರಲ್ಲಿ ಪಿಎಸ್‌ಐ–07, ಆರ್‌ಎಸ್‌ಐ–02, ಎಎಸ್‌ಐ–13, ಎಆರ್‌ಎಸ್‌ಐ–09, ಸಿಹ್‌ಸಿಪಿ–03, ಎಸ್‌ಬಿಎ–02, ಎಎಚ–01 ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ನಿವೃತ್ತಿ ಪಡೆದಿದ್ದಾರೆ ಎಂದು ತಿಳಿಸಿದ ಅವರು, 2024–25 ನೇ ಸಾಲಿನ ಉತ್ತಮ ಕಾರ್ಯ ನಿರ್ವಹಿಸಿದ 178 ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ 1 ಲಕ್ಷ ನಗದು ಬಹುಮಾನ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕುಡುತಿನಿ ಪೊಲೀಸ್ ಠಾಣೆಯ ನಿವೃತ್ತ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಕೆ.ವಿರುಪಾಕ್ಷಿ ಅವರು ಧ್ವಜ ವಂದನೆ ಸ್ವೀಕರಿಸಿ ಮಾತನಾಡಿ, ರಾಜ್ಯ ಸರ್ಕಾರದ ಸೇವೆಗಳಲ್ಲಿ ಪೊಲೀಸ್ ಸೇವೆ ಅತ್ಯಂತ ಮುಖ್ಯವಾದ ಸೇವೆಯಾಗಿದೆ. ಕಾನೂನು ಬಾಹಿರ ಚಟುವಟಿಕೆ ತಡೆಯುವಲ್ಲಿ ಮತ್ತು ಸಮಾಜದ ದುರ್ಬಲ ವರ್ಗದವರಿಗೆ ನ್ಯಾಯ ದೊರಕಿಸಿ ಕೊಡುವ ಕಾರ್ಯದಲ್ಲಿ ಪೊಲೀಸ್ ಸೇವೆ ಕಾರ್ಯ ವಿಶಿಷ್ಟವಾದದ್ದು ಎಂದು ಹೇಳಿದರು.

ಸಮಾಜದಲ್ಲಿ ಶಾಂತಿ ಕಾಪಾಡುವುದರಲ್ಲಿ ಪೊಲೀಸರ ಪಾತ್ರ ಬಹಳ ಮಹತ್ವದ್ದು. ಪ್ರತಿನಿತ್ಯವೂ ಒತ್ತಡದಿಂದ ಕೆಲಸ ನಿರ್ವಹಿಸಬೇಕಾಗಿದೆ. ಒತ್ತಡದಲ್ಲಿ ಕಾರ್ಯ ನಿರ್ವಹಿಸುವ ಪೊಲೀಸರು ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು. ಕರ್ತವ್ಯದ ಜೊತೆಗೆ ಕುಟುಂಬಕ್ಕೂ ಸಮಯ ನೀಡಬೇಕು. ನಿವೃತ್ತರಾದ ಮೇಲೆ ಪೂರ್ಣಪ್ರಮಾಣದಲ್ಲಿ ಕುಟುಂಬದೊಂದಿಗೆ ಬೆರೆತು ಕಾಲ ಕಳೆಯಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪೊಲೀಸರು ಇಲ್ಲದಿದ್ದರೆ ಸಮಾಜ ದಲ್ಲಿ ಅಶಾಂತಿ ತಲೆದೋರುತ್ತದೆ. ಯಾರನ್ನು ಕೀಳರಿಮೆಯಿಂದ ಕಾಣ ಬಾರದು, ನಿಂದಿಸಬಾರದು, ಪೊಲೀಸರು ಜನರೊಂದಿಗೆ ಸೌಜನ್ಯ ದಿಂದ ವರ್ತಿಸಿ ಗೌರವ ಕಾಪಾಡಿಕೊಳ್ಳಬೇಕು. ಸಾರ್ವಜನಿಕರಲ್ಲಿ ಭಾಂದವ್ಯದ ವಾತಾವರಣ ಮೂಡಿಸಬೇಕು ಎಂದು ತಿಳಿಸಿದರು.

ಇದಕ್ಕೂ ಮೊದಲು, ಕೆ.ವಿರುಪಾಕ್ಷಿ ಅವರು ಪೊಲೀಸ್ ತುಕಡಿಗಳಿಂದ ಗೌರವ ವಂದನೆ ಸ್ವೀಕರಿಸಿದರು. ಬಳಿಕ ಆಕರ್ಷಕ ಪಥ ಸಂಚಲನ ನಡೆಯಿತು. ನಂತರ ಪೊಲೀಸ್ ಧ್ವಜಗಳ ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತಿ ಹೊಂದಿದ ಪೊಲೀಸ್ ಅಧಿಕಾರಿಗಳನ್ನು ಸನ್ಮಾನಿಸಲಾಯಿತು.

## ನಿಡಗುಂದಿ–ಮುದ್ದೇಬಿಹಾಳ–ತಾಳಿಕೋಟೆ–ಬಸವನಬಾಗೇವಾಡಿಗೆ ಭೇಟಿ: ಪರಿಶೀಲನೆ

**ವಿಜಯಪುರ, ಏ.2–** ಜಿಲ್ಲೆಯ ನಿಡಗುಂದಿ, ಮುದ್ದೇಬಿಹಾಳ, ತಾಳಿಕೋಟೆ ಹಾಗೂ ಬಸವನ ಬಾಗೇವಾಡಿ ತಾಲೂಕಿಗೆ ಬುಧವಾರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಭೇಟಿ ನೀಡಿ ವಿವಿಧ ಕಾಮಗಾರಿಗಳ ಪರಿಶೀಲನೆ ನಡೆಸಿದರು. ನಿಡಗುಂದಿಯ ಪಟ್ಟಣ ಪಂಚಾಯತಿ ಹಾಗೂ ಹೆಬ್ಬಾಳ ಗ್ರಾಮಪಂಚಾಯತಿ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿ ಘಟಕ ಸ್ಥಳ ಪರೀವೀಕ್ಷಣೆ ನಡೆಸಿ, ನಿಡಗುಂದಿ ಪಟ್ಟಣದಲ್ಲಿ ಮೇಘಾ ಮಾರುಕಟ್ಟೆ ನಿರ್ಮಾಣಕ್ಕಾಗಿ ಸ್ಥಳ ಪರಿಶೀಲನೆ ನಡೆಸಿದರು. ನಂತರ ನಿಡಗುಂದಿಯಲ್ಲಿನ ಇಂದಿರಾ ಕ್ಯಾಂಟೀನ್‌ಗೆ ಭೇಟಿ ನೀಡಿ, ಕ್ಯಾಂಟೀನ್ ಕಾಮಗಾರಿ ಹಾಗೂ ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸಿದ ಅವರು, ಶೀಘ್ರದಲ್ಲಿ ಕ್ಯಾಂಟೀನ್ ಉದ್ಘಾಟನೆಗೆ ಸಿದ್ಧತೆ ಮಾಡಿಕೊಳ್ಳುವಂತೆ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ನಿಡಗುಂದಿಯ ಒಳಚರಂಡಿ ನೀರು ಶುದ್ಧೀಕರಣ ಘಟಕದ ಮಂಜೂರಾತಿಗಾಗಿ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಕೂಡಲೇ ಸ್ಥಳ ವೀಕ್ಷಣೆ ಮಾಡಿ, ನಿರಾಕ್ಷೇಪಣಾ ಪತ್ರ ಒದಗಿಸಲು ಕ್ರಮ ವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುದ್ದೇಬಿಹಾಳದಲ್ಲಿ ಮೇಘಾ ಮಾರುಕಟ್ಟೆ ಸ್ಥಾಪನೆಗೆ ಸ್ಥಳ ಪರಿಶೀಲನೆ ನಡೆಸಿದ ಅವರು, ಅಂದಾಜು ಪತ್ರಿಕೆ ಹಾಗೂ ನೀಲನಕ್ಷೆ ಪರಿಶೀಲಿಸಿ, ಕೂಡಲೇ ಕಾಮಗಾರಿ ಆರಂಭಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು. ನಂತರ ತಹಶೀಲ್ದಾರ ಕಚೇರಿಗೆ ಭೇಟಿ ನೀಡಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪ್ರಗತಿ ಪರಿಶೀಲನೆ ನಡೆಸಿದರು.

### ಆರ್.ಎಸ್.ಎಸ್. ರಾಷ್ಟ್ರದ ಕಾರ್ಯಗಳಿಗೆ ಸಮರ್ಪಿತವಾದ ಸಂಘ, ಪ್ರಚಾರಕರ ಸೇವಾಕಾರ್ಯ ಮಾದರಿ

## ಭಾರತದ ಅಧ್ಯಾತ್ಮಿಕ ಗ್ರಂಥಗಳು ಅಮರ, ರಾಮಾಯಣ ಮಹಾಭಾರತ ಗ್ರಂಥಗಳು ದಿವ್ಯಜೀವನಕ್ಕೆ ಸಂಜೀವಿನಿ

**ಬೀದರ್, ಏ.2–** ಮನುಷ್ಯ ಜೀವನ ಎಲ್ಲಾ ಜೀವಿಗಳ ಜೀವನಕ್ಕಿಂತ ಶ್ರೇಷ್ಠ ಜೀವನವಾಗಿದೆ. ಈ ಜೀವನಕ್ಕೆ ಬಂದು ವ್ಯರ್ಥವಾಗಿ ಬದುಕಿದರೆ, ಮನುಷ್ಯ ಜೀವನಕ್ಕೆ ಕಲಂಕ ತಂದಂತಾಗುತ್ತದೆ. ಹಾಗಾಗಿ ಮನುಷ್ಯ ಜೀವನ ಯಶಸ್ವಿಗೊಳಿಸಿಕೊಳ್ಳಬೇಕಾದರೆ ಜಗತ್ತಿನಲ್ಲೆ ಸರ್ವಶ್ರೇಷ್ಠವಾದ ಮತ್ತು ಪುರಾತನವಾದ ಭಾರತ ಸಂಸ್ಕೃತಿಯಂತೆ ಜೀವನ ಸಾಗಿಸಬೇಕೆಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಕರ್ನಾಟಕ ಪ್ರಾಂತದ ದೇವಸ್ಥಾನ ಸಮೃದ್ಧಿ ಪ್ರಮುಖರಾದ ಮನೋಹರ ಮಠದರವರು ಹೇಳಿದರು. ಅವರು ಬೀದರನ ಚಿಕಪೇಟ್ ಹತ್ತಿರದ ಜಗನ್ನಾಥ ಮಂದಿರದಲ್ಲಿ ಆಯೋಜಿಸಿದ ಯುಗಾದಿ ಹಬ್ಬದ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸವನ್ನಿತ್ತು ಹೇಳಿದರು.

ಮುಂದುವರೆದು, ನಾವು ಇನ್ನೊಬ್ಬರಿಗೆ ಆಧಾರಸ್ತಂಭವಾಗುವ ಮತ್ತು ಒಳ್ಳೆಯದಕ್ಕೆ ಪ್ರೇರಣೆಯಾಗುವ ಕೆಲಸ ಮಾಡಬೇಕು. ದ್ವೇಷ, ಅಸೂಯೆ, ಸ್ವಾರ್ಥ ಬಿಟ್ಟು ಸತ್ಸಂಗದಲ್ಲಿದ್ದು ಮನುಷ್ಯತ್ವ ಹೆಚ್ಚಿಸಿಕೊಂಡು ಸಾತ್ವಿಕ ಜೀವನ ನಡೆಸಿದರೆ ದೈವತ್ವಕ್ಕೇರಬಹುದು ಎಂದರು. ಮಹಾತ್ಮಿಕರೊಬ್ಬರು ಹೇಳಿದಂತೆ "ಜಗತ್ತಿನಲ್ಲಿರುವ ಎಲ್ಲಾ ಒಳ್ಳೆ ಸಂಗತಿ ಹೇಳಿಯಾಗಿದೆ. ಆಚರಣೆ ಮಾತ್ರ ಬಾಕಿ ಉಳಿದಿದೆ" ಎಂದಿದ್ದಾರೆ. ಹಾಗಾಗಿ ಒಳ್ಳೆಯದನ್ನು ಹೇಳುವುದರ ಜೊತೆಗೆ ನಡೆಯುವುದನ್ನೂರೂಢಿಸಿಕೊಂಡರೆ ತಮ್ಮ ಹೇಳಿಕೆ ಪ್ರಭಾವಕಾರಿಯಾಗುತ್ತದೆಂದರು. ಭಗವದ್ಗೀತೆಯಲ್ಲಿ "ಪರೋಪಕಾರಾಯ ಪುಣ್ಯಾಯ, ಪರಪೀಡನಾಯ ಪಾಪಾಯ" ಎಂದು ಹೇಳಲಾಗಿದೆ. ಹಾಗಾಗಿ ನಾವು ಪರೋಪಕಾರದಲ್ಲಿ ಅಚಲವಾಗಿ ನಿಲ್ಲಬೇಕು ಎಂದರು. ಭಗವದ್ಗೀತೆಯಲ್ಲಿ ಮನುಷ್ಯ ಜೀವನದ ಸಾಫಲ್ಯತೆಗೆ ಅವಶ್ಯವಾಗುವ ಎಲ್ಲವನ್ನೂ ಸಾಕ್ಷಾತ್ಕರಿಸಿ ಹೇಳಲಾಗಿದೆ. ಆದರೆ ಈ ಭಗವದ್ಗೀತೆ ಯತಿಗಳಿಗೆ, ಸನ್ಯಾಸಿಗಳಿಗೆ, ವೃದ್ಧರಿಗೆ ಮಾತ್ರ ಸೀಮಿತಗೊಳಿಸಿ, ಮಕ್ಕಳಿಗೆ ಮತ್ತು ಯುವಕರಿಗೆ ಇದರಿಂದ ದೂರಮಾಡಲಾಗಿದೆ. ಇದು ಇಲ್ಲಿನವರನ್ನು ಧರ್ಮ ಮಾರ್ಗದಿಂದ ವಿಮುಖಗೊಳಿಸುವ ಷಡ್ಯಂತ್ರ ಇದರಲ್ಲಿ ಅಡಗಿದೆ. ಇದನ್ನರಿತು ಧರ್ಮ ಕಾರ್ಯಕ್ಕಾಗಿ ಭಗವದ್ಗೀತೆ ಅವಿಭಾಜ್ಯ ಅಂಗವಾಗಿಸಿಕೊಳ್ಳಬೇಕ. ಸ್ವರ್ಗ ನರಕ ನಮ್ಮಲ್ಲಿಯೇ ಇವೆ. ಇನ್ನೊಬ್ಬರಿಗೆ ನಿಂದನೆ, ತೇಜೋವಧೆ ಮತ್ತು ಹಾಳು ಮಾಡುವುದು ನರಕವಾಗಿದೆ. ಇನ್ನೊಬ್ಬರಿಗೆ ಗೌರವ ಕೊಡುವುದು ಅವರ ಕಷ್ಟ ನಿವಾರಣೆ ಮಾಡುವುದು ಸ್ವರ್ಗವಾಗಿದೆ. ಎಂದರು.

ಕೃಷ್ಣನು ದುರ್ಯೋಧನನಿಗೆ ಒಳ್ಳೆಯವರನ್ನು ತಂದುಕೊಡು ಎಂದಾಗ ಅವನಿಗೆ ಅದು ಸಾಧ್ಯವಾಗಲಿಲ್ಲ. ಆತನ ಕಣ್ಣಿಗೆ ಎಲ್ಲರೂ ಕೆಟ್ಟವರಾಗೇ ಕಂಡಿರುತ್ತಾರೆ. ಕೃಷ್ಣನು ಧರ್ಮರಾಯನಿಗೆ ಕೆಟ್ಟವರನ್ನು ತಂದುಕೊಡು ಎಂದಾಗ ಆತನಿಗಾರೂ ಕೆಟ್ಟವರು ಸಿಗಲಿಲ್ಲ.ಹಾಗಾಗಿ ನಮ್ಮ ದೃಷ್ಟಿಯಂತೆ ಸೃಷ್ಟಿ ಸಮಷ್ಠಿಯಿರುತ್ತದೆ ಎಂದರು. ಇದರಂತೆ "ಯದ್ಭಾವಂ ತದ್ಭವತಿ" ಎಂದು ಹೇಳಲಾಗಿದೆ. ಅಂದರೆ ನಮ್ಮ ಮನದಲ್ಲಿ ಏನಿರುತ್ತದೆಯೋ ಅದು ಕಾರ್ಯದಲ್ಲಿ ಬರುತ್ತದೆ. ಹಾಗಾಗಿ ಒಳ್ಳೆ ಚಿಂತನೆ, ಒಳ್ಳೆ ಆಸ್ವಾದನೆ ಮಾಡುತ್ತಿರಬೇಕೆಂದರು.

ತ್ರೇತಾಯುಗದಲ್ಲಿ ದೇವರಾದ ರಾಮ ಸ್ವದೇಶದಲ್ಲಿದ್ದರೆ,ಅಸುರನಾದ ರಾವಣ ವಿದೇಶದಲ್ಲಿದ್ದ. ದ್ವಾಪರ ಯುಗದಲ್ಲಿ ಅಸುರರು ಮತ್ತು ದೇವರು ಒಂದೇ ಕುಟುಂಬದಲ್ಲಿ ಕೌರವರಾಗಿ ಪಾಂಡವರಾಗಿ ಹುಟ್ಟಿದರು. ಆದರೆ ಈ ಕಲಿಯುಗದಲ್ಲಿ ಅಸುರರು ಮತ್ತು ದೇವರು ಒಂದೇ ದೇಹದಲ್ಲಿ ವಾಸಮಾಡುತ್ತಿದ್ದಾರೆ. ಅಂದರೆ ನಮ್ಮೊಳಗಿನ ಅಸುರ ಶಕ್ತಿ ನಾಶಗೊಳಿಸಿಕೊಳ್ಳುವುದು ಕಲಿಯುಗದ ದೊಡ್ಡ ಜಯವಾಗಿದೆ ಎಂದರು. ತರಾತುರಿಯಲ್ಲಿ ಪೂಜೆ ಮಾಡುವುದು ತೋರಿಕೆಗಾಗಿ ಯಾತ್ರೆ ಮಾಡುವುದು ಇದರಿಂದ ದೈವತ್ವ ಸಿದ್ಧಿಸುವುದಿಲ್ಲ. ಬರೀ ಕಷ್ಟ ಬಂದಾಗ ದೇವರನ್ನು ನೆನೆಯುವುದು ಸುಖ ಬಂದಾಗ ಮರೆಯುವುದು ಮಾಡಿದರೆ ಅದು ವ್ಯವಹಾರಿಕವಾಗುತ್ತದೆ. ದೇವರು ನಿರ್ಮಲವಾದ ನಿಷ್ಕಾಮಕರ್ಮದಿಂದ ಕೂಡಿದ ಯಾಚನೆ ಸ್ವೀಕರಿಸುತ್ತಾನೆ. ದೇವರಲ್ಲಿ ಮತಲಪಿ, ದಿಖಾವಟಿ ನಡೆಯುವುದಿಲ್ಲ ವಿವೇಕಾನಂದರಿಗೆ ರಾಮಕೃಷ್ಣ ಪರಮಹಂಸರು ಕಾಳಿಕಾಮಾತೆ ಯಲ್ಲಿ ಏನಾದರೂ ಬೇಡಿಕೋ ಅಂದಾಗ ವಿವೇಕಾನಂದರು ಕಾಳಿಕಾಮಾತೆಗೆ ಜಗತ್ತಿನ ಕಲ್ಯಾಣವಾಗಬೇಕೆಂದು ಕೇಳಿದರು. ಕಾರಣ ಜಗತ್ತಿನ ಕಲ್ಯಾಣದಲ್ಲೇ ನನ್ನ ಕಲ್ಯಾಣ ಅಡಗಿದೆ ಎಂಬ ವಿಶಾಲ ಮನೋಭಾವ ಅವರದ್ದಾಗಿತ್ತು. ವಿವೇಕಾನಂದರಂತೆ ನಾವು ವಿಶಾಲ ಮನೋಭಾವದವರಾದರೆ ಧರ್ಮ ಕಾರ್ಯ ವ್ಯಾಪಕವಾಗಿ ಮಾಡಬಹುದಾಗಿದೆ.

ರಾಮಾಯಣ, ಮಹಾಭಾರತ ಗ್ರಂಥಗಳಲ್ಲಿ ನಮಗೆ ಅಸುರಗುಣ, ದೇವಗುಣದಿಂದ ಏನೇನು ಪರಿಣಾಮಗಳಾಗುತ್ತವೆಂದು ರುಜುವಾತುಪಡಿಸಿ ತೋರಿಸಲಾಗಿದೆ. ಇದನ್ನು ಪೂಜೆಗೆ ಸೀಮಿತಗೊಳಿಸದೆ ನಡೆಗೆ ಪೂರಕವಾಗಿಸಿಕೊಳ್ಳಬೇಕೆಂದರು. ನಮ್ಮ ಧರ್ಮ ಗ್ರಂಥದಲ್ಲಿ ಪತಿಧರ್ಮ, ಸತಿಧರ್ಮ, ಆಚಾರ್ಯಧರ್ಮ, ವೃತ್ತಿಧರ್ಮ ಹೀಗೆ ಎಲ್ಲಾ ಕಾರ್ಯಗಳನ್ನೂ ಧರ್ಮದೊಂದಿಗೆ ಜೋಡಿಸಿ, ಹೇಗೆ ಪಾಲನೆ ಮಾಡಬೇಕೆಂಬುದು ಹೇಳಲಾಗಿದೆ. ಇತಿಹಾಸ ಒಳ್ಳೆ ಕಾರ್ಯ ಮಾಡಿದವರಿಗೆ ದಾಖಲಿಸುತ್ತದೆ. ಸಂತರು ತಮ್ಮ ಸ್ವಂತಕ್ಕೆ ಬದುಕದೆ ಪರರ ಸೇವೆಗೆ ಬದುಕಿದ್ದಾರೆ ಎಂದರು. ಭಾರತದ ಪುರಾತನ ಅಧ್ಯಾತ್ಮ ಗ್ರಂಥಗಳನ್ನು ಕೆಲ ಆಧುನಿಕರು ಇವನ್ನು ಹಳೇ ಕಾಲದವು ಎಂದು ಹೇಳಿ ದೂರಮಾಡುತ್ತಿದ್ದಾರೆ. ಆದರಿವು ಅಮರವಾದ ಸಂದೇಶಗಳದ್ದಾಗಿದ್ದು, ಸಂಜೀವಿನಿಯಾಗಿ ನಮ್ಮ ಉಪಯೋಗಕ್ಕೆ ಬರುತ್ತವೆ ಎಂದು ಮಾರ್ಮಿಕವಾಗಿ ಹೇಳಿದರು.

ಸೀತೆ ಹನುಮಂತನ ತ್ಯಾಗದ ಸೇವೆಗೆ ಮನಸೋತು, ತನ್ನಲ್ಲಿನ ಮುತ್ತಿನಹಾರ ಅವನಿಗೆ ಕೊಡುತ್ತಾಳೆ. ಆತ ಆ ಮುತ್ತಿನ ಹರಳುಗಳಲ್ಲಿ ರಾಮನನ್ನು ಹುಡುಕುತ್ತಾನೆ. ಆ ಹರಳುಗಳಲ್ಲಿ ರಾಮ ಕಾಣದೇ ಇದ್ದಾಗ ಅದನ್ನು ತಿರಸ್ಕರಿಸುತ್ತಾನೆ. ಸೀತೆ ಕಾರಣ ಕೇಳಿದಾಗ, ರಾಮನಿಲ್ಲದ ಯಾವುದೇ ವಸ್ತು, ವಿಷಯ ನನಗೆ ಬೇಡ ಎನ್ನುತ್ತಾನೆ. ನಾವೂ ಕೂಡ ಶಾಸ್ತ್ರೋಕ್ತವಾಗಿರದ ಕಡೆಗಳಲ್ಲಿ ಹೋಗಲೇಬಾರದು ಎಂದರು. ಹಾಗೆಯೇ ಕೆಲವರು ಪುರಾಣ ಕಥೆಗಳು ಕೇಳುವುದರಿಂದ ಉಪಯೋಗವಿಲ್ಲ ಎನ್ನುತ್ತಾರೆ. ಆದರೆ ಅವೆಲ್ಲಾ ದಿವ್ಯ ಸಂದೇಶಗಳನ್ನು ಮತ್ತು ಮಹೋನ್ನತ ಮಾರ್ಗಗಳನ್ನು ತೋರಿಸುತ್ತವೆ ಎಂದರು. ಇವತ್ತು ರಾಷ್ಟೀಯ ಸ್ವಯಂ ಸೇವಕ ಸಂಘವು ಪ್ರಮುಖ ಕ್ಷೇತ್ರಗಳಲ್ಲಿ ಶಾಖಾಂಗಗಳನ್ನು ಹೊಂದಿದ್ದು, ಕಾರ್ಯತತ್ಪರವಾಗಿದೆ. ಕುಟುಂಬ ಪ್ರಭೋದನಿ ಕೂಡ ಒಂದು ಶಾಖೆಯಾಗಿ ಕುಟುಂಬ ಬಲಪಡಿಸುತ್ತಿದೆ. ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಕಾರ್ಯಗಳಿಗೆ ಈಗ ನೂರು ವರ್ಷ ತುಂಬುತ್ತಿದೆ. ಇದರ ಆಶಯ ದೇಶ ಮತ್ತು ದೇಶದ ಸಂಸ್ಕೃತಿ ಬಲಿಷ್ಟಗೊಳಿಸುವುದೇ ಆಗಿದೆ ಎಂದರು. ಇವತ್ತಿನ ಮಾಧ್ಯಮಗಳಲ್ಲಿ ಒಳ್ಳೆಯದಕ್ಕಿಂತ ಕೆಟ್ಟವುಗಳೇ ಹೆಚ್ಚಿಗೆ ಬರುತ್ತಿವೆ. ಹಾಗಾಗಿ ಇವತ್ತಿನ ಬಹುಮಾಧ್ಯಮಗಳನ್ನು ಎಚ್ಚರಿಕೆಯಿಂದ ಬಳಸಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ.ನೀಲೇಶ ದೇಶಮುಖರವರು ಮಾತಾಡುತ್ತಾ, ದೇವರನ್ನು ಸಂತುಷ್ಟಗೊಳಿಸುವ ಪ್ರಸನ್ನಗೊಳಿಸುವ ಕಾರ್ಯಗಳಲ್ಲಿದ್ದರೆ, ಜೀವನದಲ್ಲಿ ಆನಂದ ಪ್ರಾಪ್ತಿಗೊಳಿಸಿಕೊಳ್ಳಬಹುದಾಗಿದೆ. ಮತ್ತು ಒಳ್ಳೆಯ ಕಾರ್ಯಗಳಿಗೆ ಆತ್ಮಬಲ, ಮನೋಬಲ ಪ್ರಾಪ್ತಿಯಾಗುತ್ತದೆ ಎಂದರು. ಭಾರತ ಜಗತ್ತಿನಲ್ಲಿಯೇ ಸರ್ವಶ್ರೇಷ್ಠ ದೇಶವಾಗಿದೆ. ಸಂತರು, ದೇವರುಗಳ ಜನ್ಮ ಇಲ್ಲಾಗಿದೆ. ಭಗವದ್ಗೀತೆಯಂತಹ ಮಹಾನ್ ಗ್ರಂಥಗಳು ಇಲ್ಲಿ ರಚಿಸಲ್ಪಟ್ಟಿವೆ. ಈಗ ಇಂತಹ ಗ್ರಂಥಗಳು ಎಲ್ಲಾ ಕಡೆ, ಎಲ್ಲಾ ಭಾಷೆಗಳಲ್ಲೂ ಲಭ್ಯವಿವೆ. ಎಲ್ಲರೂ ಖರೀದಿಸಿ ಅನುಸರಿಸ ಬೇಕು. ಭಾರತದ ಸಂಪ್ರದಾಯದಲ್ಲಿ ಮಗು ಗರ್ಭದಲ್ಲಿರುವಾಗಲೇ ಸಂಸ್ಕಾರ ಕೊಡುವುದನ್ನು ಆರಂಭಿಸಬೇಕು. ಇಂದು ಹಿರಿಯರು ಹಳ್ಳಿಗಳಲ್ಲಿ, ಮಕ್ಕಳು ಪಟ್ಟಣಗಳಲ್ಲಿ ಬೆಳೆಯುತ್ತಿದ್ದರಿಂದ, ಸಂಸ್ಕಾರ ಹಿರಿಯರಿಂದ ಮಕ್ಕಳಿಗೆ ಸಿಗುತ್ತಿಲ್ಲ. ಹಾಗಾಗಿ ಮಾತಾಪಿತರೇ ಸ್ವತಃ ಜ್ಞಾನಪ್ರಾಪ್ತಿಯಾಗಿಸಿಕೊಂಡು ಮಕ್ಕಳು ಬಾಲ್ಯದಲ್ಲಿರುವಾಗಲೇ ಸಂಸ್ಕಾರ ಕೊಡಬೇಕೆಂದರು. ದೇಶ ಮೊದಲು ಮತ್ತು ದೇಶದ ಸಂಸ್ಕೃತಿ ಮೊದಲು ಎನ್ನುವುದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಧ್ಯೇಯವಾಗಿದೆ. ಇದರ ಪ್ರಚಾರಕರು ದೇಶದಲ್ಲಿ ಐಕ್ಯತೆ ಮತ್ತು ಅಭಿವೃದ್ಧಿ ಕಾರ್ಯವನ್ನು ಶತಮಾನದಿಂದ ಸಮರ್ಪಣಾ ಭಾವದಿಂದ ಮಾಡುತ್ತಾ ಮಾದರಿಯಾಗಿದ್ದಾರೆ. ಇವರನ್ನು ಅನುಸರಿಸಿದರೆ ದೇಶ ಬಲಾಢ್ಯವಾಗುತ್ತದೆಂದರು.

# ಹಾಲಿನ ಬೆಲೆ ಏರಿಕೆ: ಬಿಜೆಪಿ ಪ್ರತಿಭಟನೆ ರೈತ ವಿರೋಧಿ; ಡಿಸಿಎಂ ಡಿ.ಕೆ. ಶಿವಕುಮಾರ್



**ಬೆಂಗಳೂರು, ಏಪ್ರಿಲ್ 02:** ರೈತರಿಗೆ ನೆರವಾಗಲು ರಾಜ್ಯ ಸರ್ಕಾರ ಹಾಲಿನ ದರ ಏರಿಕೆ ಮಾಡಿದ್ದು, ಇದರ ವಿರುದ್ಧ ಪ್ರತಿಭಟನೆ ಮಾಡುತ್ತಿರುವ ಬಿಜೆಪಿಗರು ರೈತ ವಿರೋಧಿಗಳು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ವಾಗ್ದಾಳಿ ನಡೆಸಿದರು. ದರ ಏರಿಕೆ ಖಂಡಿಸಿ ಬಿಜೆಪಿ ನಡೆಸುತ್ತಿರುವ ಹೋರಾಟದ ಮಾಡುತ್ತಿದ್ದಾರೆ. ನಾವು ವಿದ್ಯುತ್ ಬೆಲೆ ಕಡಿಮೆ ಮಾಡಿದಾಗ ಅವರು ಮಾತನಾಡಲಿಲ್ಲ. ಅವರಿಗೆ ಜನರ ಮೇಲೆ ಕಾಳಜಿ ಇದ್ದರೆ, ಪೆಟ್ರೋಲ್, ಡೀಸೆಲ್, ಜಾನುವಾರುಗಳಿಗೆ ಹಾಕುವ ಬೂಸಾ ದರಗಳನ್ನು ಇಳಿಸಲಿ. ಬೆಲೆ ಏರಿಕೆ ನಂತರವೂ ಬೇರೆ ರಾಜ್ಯಗಳಿಗೆ ಹೋಲಿಕೆ ಮಾಡಿದರೆ ನಮ್ಮ ರಾಜ್ಯದಲ್ಲಿ ಹಾಲು, ಮೊಸರಿನ ಬೆಲೆ ಕಡಿಮೆ ಇದೆ ಎಂದು ಹೇಳಿದರು. ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಕುಡಿಯುವ ನೀರಿನ ಬೆಲೆಯನ್ನು ಪ್ರತಿ ಲೀಟರ್ ಗೆ ಕನಿಷ್ಠ 1 ಪೈಸೆಯಷ್ಟು ಏರಿಕೆ ಮಾಡಲೇಬೇಕಾಗಿದೆ. ಬಡವರಿಗೆ ಹೊರೆಯಾಗದಂತೆ ನೀರಿನ ದರ ಹೆಚ್ಚಳಕ್ಕೆ ಸೂಚನೆ ನೀಡಲಾಗಿದೆ. ಜಲ ಮಂಡಳಿ ವಾರ್ಷಿಕವಾಗಿ 1 ಸಾವಿರ ಕೋಟಿ ನಷ್ಟ ಅನುಭವಿಸುತ್ತಿದ್ದು, ಮುಂದಿನ ಹಂತಗಳ ಯೋಜನೆ ಕೈಗೆತ್ತಿಗೊಳ್ಳಬೇಕಾದರೆ ದರ ಏರಿಕೆ ಅನಿವಾರ್ಯ. ಇದಕ್ಕೂ ಮುನ್ನ ಜನರಿಗೂ ನೀರಿನ ಪ್ರಾಮುಖ್ಯತೆ ಅರಿಯುವಂತೆ ಮಾಡಬೇಕು ಎಂದು ತಿಳಿಸಿದರು.ಇನ್ನು ಕಸದ ವಿಚಾರವಾಗಿ ಹೇಳುವುದಾದರೆ, ಕೇಂದ್ರ ಬಿಜೆಪಿ ಸರ್ಕಾರ ಕಾನೂನು ಮಾಡಿದ್ದು, ಬಿಜೆಪಿ ಸರ್ಕಾರ 2022ರಲ್ಲೇ ದುಬಾರಿ ಸೆಸ್ ವಿಧಿಸಿದ್ದರು. ನಾವು ಅದನ್ನು ಕಡಿಮೆ ಮಾಡುತ್ತಿದ್ದೇವೆ. ಈ ವಿಚಾರವಾಗಿ ಜಾಹೀರಾತು ಹಾಗೂ ಪತ್ರಿಕಾ ಪ್ರಕಟಣೆ ಹೊರಡಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಜನರ ನೋವು ನಮಗೂ ಅರಿವಾಗುತ್ತದೆ. ಇದರಲ್ಲಿ ಬಿಜೆಪಿಯವರು ರಾಜಕಾರಣ ಮಾಡುತ್ತಿದ್ದಾರೆ ಎಂದು ತಿಳಿಸಿದರು. ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರ ಟೀಕೆ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಡಿ ಕೆ ಶಿವಕುಮಾರ್, ಅವರು ದಿನ ನಿತ್ಯ ಟೀಕೆ ಮಾಡಲಿ. ನಾವು ಜನರಿಗೆ ಉತ್ತಮ ಆಡಳಿತ ನೀಡಬೇಕು. ಕುಮಾರಸ್ವಾಮಿ ಅವರ ಸಹೋದರ ಹಾಲು ಒಕ್ಕೂಟಗಳ ಅಧ್ಯಕ್ಷರು. ಅವರಿಗೂ ಬೆಲೆ ಕಡಿಮೆ ಮಾಡುವ ಅವಕಾಶವಿದೆ. ಅವರು ಹಾಸನದಲ್ಲಿ ರೂ.4 ಕಡಿಮೆ ಮಾಡಿ ಹಾಲು ನೀಡಲಿ ನೋಡೋಣ. ರೈತರು ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಶಕ್ತಿ ನೀಡಲು ಈ ನಿರ್ಧಾರ ಮಾಡಿದ್ದೇವೆ ಎಂದು ತಿಳಿಸಿದರು.

### "ಬೇಸಿಗೆ ಸಮಯದಲ್ಲಿ ಜನರಿಗೆ ಕುಡಿಯುವ ನೀರು ಪೂರೈಸುವುದು ನಮ್ಮ ಮೊದಲ ಆದ್ಯತೆ" - ಡಿಸಿಎಂ ಡಿ.ಕೆ. ಶಿವಕುಮಾರ್

ಸಚಿವ ಶರಣಬಸಪ್ಪ ಗೌಡ ದರ್ಶನಾಪುರ ಅವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ರೈತ ಸೇನೆ ಪ್ರತಿನಿಧಿಗಳ ನಿಯೋಗವು ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಬುಧವಾರ ಭೇಟಿ ಮಾಡಿದರು. ಈ ವೇಳೆ ನಾರಾಯಣಪುರ ಬಸವಸಾಗರ ಜಲಾಶಯದ ಬಲದಂಡೆ ಹಾಗೂ ಎಡದಂಡೆಯಿಂದ ಏ.15ರವರೆಗೆ ಬೆಳೆಗಳಿಗೆ ನೀರು ಹರಿಸಬೇಕು ಎಂದು ಮನವಿ ಸಲ್ಲಿಸಿದರು. ಬೇಸಿಗೆ ಸಮಯದಲ್ಲಿ ಜನರಿಗೆ ಕುಡಿಯುವ ನೀರು ಪೂರೈಸುವುದು ನಮ್ಮ ಮೊದಲ ಆದ್ಯತೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಕೃಷ್ಣಾ ನೀರಿನ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಹಾರಾಷ್ಟ್ರ ಮುಖ್ಯಮಂತ್ರಿ ಪತ್ರ ಬರೆದಿರುವ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ, ಹೌದು, ಸಿದ್ದರಾಮಯ್ಯ ಅವರು ಮಹಾರಾಷ್ಟ್ರ ಮುಖ್ಯಮಂತ್ರಿ ಪತ್ರ ಬರೆದಿದ್ದಾರೆ. ಸಚಿವರು, ಶಾಸಕರು, ರೈತಸಂಘದ ಪ್ರತಿನಿಧಿಗಳು ಬಂದು ಬೆಳೆಗೆ ನೀರು ಹರಿಸುವಂತೆ ಮನವಿ ಮಾಡಿದ್ದಾರೆ. ಎರಡನೇ ಬೆಳೆ ಹಾಕಬೇಡಿ ಎಂದರೂ ಈ ಭಾಗದ ರೈತರು ಬೆಳೆ ಹಾಕಿಕೊಂಡಿದ್ದಾರೆ. ಈಗ ರಾಯಚೂರು, ಕೊಪ್ಪಳ, ಯಾದಗಿರಿ ಜಿಲ್ಲೆಯ ಜನ ಕಾಲುವೆಗೆ ನೀರು ಹರಿಸುವಂತೆ ಗಲಾಟೆ ಮಾಡುತ್ತಿದ್ದಾರೆ. ಹೀಗಾಗಿ ಮಹಾರಾಷ್ಟ್ರದವರಿಗೆ ಪತ್ರ ಬರೆಯಲಾಗಿದೆ. ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡುತ್ತೇವೆ. ಈ ವಿಚಾರದಲ್ಲಿ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ನಾರಾಯಣಪುರ ಬಸವಸಾಗರ ಜಲಾಶಯದ ಬಲದಂಡೆ ಹಾಗೂ ಎಡದಂಡೆ ವ್ಯಾಪ್ತಿಯ 89 ಸಾವಿರ ಎಕ್ಟೇರ್ ಪ್ರದೇಶಕ್ಕೆ ಏ.15ರವರೆಗೆ ನೀರು ಹರಿಸಬೇಕು. ಜಲಾಶಯದಲ್ಲಿ ಕೃಷಿಗಾಗಿ 6.60 ಟಿಎಂಸಿ ನೀರನ್ನು ಕಾಯ್ದಿರಿಸಲಾಗಿದ್ದು ಅದನ್ನು ಹರಿಸಿದರೆ ಮಾತ್ರ ರೈತರಿಗೆ ಅವರು ಬೆಳೆದಿರುವ ಬೆಳೆ ಕೈ ಸೇರುತ್ತದೆ ಎಂದು ಮನವಿ ಪತ್ರದಲ್ಲಿ ಕೋರಲಾಗಿದೆ ಎಂದು ಡಿ ಕೆ ಶಿವಕುಮಾರ್ ಹೇಳಿದರು.

# ಏ.9 ಅಥವಾ 10ರವರೆಗೆ ಕಾಲುವೆಗೆ ನೀರು: ಸಚಿವ ಶಿವರಾಜ್ ತಂಗಡಗಿ



**ಬೆಂಗಳೂರು, ಮಾ.2:** ಬೇಸಿಗೆಯಲ್ಲಿ ಕುಡಿಯುವ ನೀರು ಹಾಗೂ ನಿಂತ ಬೆಳೆಗಳಿಗೆ ಯಾವುದೇ ಸಮಸ್ಯೆಯಾಗದಂತೆ ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಿಗೆ ಏ.9 ಅಥವಾ 10ರ ತನಕ ಕಾಲುವೆಗೆ ಮೂರು ಸಾವಿರ ಕ್ಯೂಸೆಕ್ಸ್ ನಂತೆ ನೀರು ಹರಿಸಲು ತೀರ್ಮಾನಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರೂ ಆದ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಶಿವರಾಜ್. ಎಸ್. ತಂಗಡಗಿ ಹೇಳಿದ್ದಾರೆ. ಮುಖ್ಯಕಾರ್ಯದರ್ಶಿ ನೇತೃತ್ವದಲ್ಲಿ ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ಚರ್ಚೆ ನಡೆದು ತೀರ್ಮಾನ ಕೈಗೊಳ್ಳಲಾಗಿದೆ. ನಮ್ಮ ಸರ್ಕಾರ ರೈತರ ಪರವಾಗಿದೆ. ಕುಡಿಯುವ ನೀರಿಗೂ ಯಾವುದೇ ಸಮಸ್ಯೆಯಾಗದಂತೆ ಕ್ರಮವಹಿಸಲಾಗುವುದು ಎಂದಿದ್ದಾರೆ. ಮಾ.21ರಂದು ಬೆಂಗಳೂರಿನಲ್ಲಿ ನಡೆದ ಐಸಿಸಿ ಸಲಹಾ ಸಮಿತಿ ಸಭೆಯಲ್ಲಿ, ತುಂಗಭದ್ರಾ ಎಡದಂಡೆ ಮುಖ್ಯಕಾಲುವೆ ಮೂಲಕ ಏ.9 ಅಥವಾ 10ರವರೆಗೆ ಕುಡಿಯುವ ನೀರು ಒಳಗೊಂಡಂತೆ ಹಾಗೂ ನಿಂತ ಬೆಳೆಗಳ ಸಂರಕ್ಷಣೆಗಾಗಿ 3000 ಕ್ಯೂಸೆಕ್ಸ್ ನಂತೆ ನೀರು ಹರಿಸಲು ಸೂಚನೆ ನೀಡಲಾಗಿದೆ. ಯಾವುದೇ ಕಾರಣಕ್ಕೂ ಫಸಲಿಗಾಗಿ ಕಾಯುತ್ತಿರುವ ಬೆಳೆದು ನಿಂತ ಬೆಳೆಗಳಿಗೆ ನೀರು ಒದಗಿಸಲಾಗುವುದು. ಕೊನೆಯ ಭಾಗದ ರೈತರಿಗೆ ನೀರು ತಲುಪುವಂತೆ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕು ಎಂದು ಸಚಿವ ಶಿವರಾಜ್ ಎಸ್.ತಂಗಡಗಿ ಅವರು ಸೂಚಿಸಿದ್ದಾರೆ. ಈ ಸಂದರ್ಭದಲ್ಲಿ ಯಾವುದೇ ತೊಂದರೆಯಾಗದ ರೀತಿಯಲ್ಲಿ ನಿಷೇಧಾಜ್ಞೆ ಮೂಲಕ ನೀರು ಹರಿಸಲಾಗುವುದು. ರೈತರು ಮತ್ತು ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ ಎಂದು ಸಚಿವರು ಇದೇ ವೇಳೆ ಭರವಸೆ ನೀಡಿದ್ದಾರೆ.

# ಕಾಂಗ್ರೆಸ್‌ನವರು ವಕ್ಸ್ ಆಸ್ತಿ ಕಬಳಿಸಿರುವುದನ್ನು ಮುಚ್ಚಿ ಹಾಕಲು ತಿದ್ದುಪಡಿಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ: ಬಸವರಾಜ ಬೊಮ್ಮಾಯಿ



**ನವದೆಹಲಿ ಏಪ್ರಿಲ್ 02:** ಇಡೀ ದೇಶದ ತುಂಬ ವಕ್ಫ್ ಆಸ್ತಿಯನ್ನು ಕಬಳಿಕೆ ಮಾಡಿದವರೇ ಕಾಂಗ್ರೆಸ್ನವರು, ಅವರು ಮಾಡಿರುವ ಕಬಳಿಕೆಯನ್ನು ಮುಚ್ಚಿ ಹಾಕಲು ವಕ್ಸ್ ಕಾಯ್ದೆ ತಿದ್ದುಪಡಿಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಈ ಕುರಿತು ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಕ್ಸ್ ಬಿಲ್ 1950ರ ದಶಕದಲ್ಲಿ ಬಂದಿದ್ದು. 1990 ಹಾಗೂ 2013 ರಲ್ಲಿ ತಿದ್ದುಪಡಿಯಾಗಿದೆ. ಈಗ ತಿದ್ದುಪಡಿ ಮಾಡುತ್ತಿರುವುದೇನು ಹೊಸದೇನಲ್ಲ. 2013 ಕ್ಕಿಂತ ಮುಂಚೆ ಕೇಂದ್ರದ ಮಾಜಿ ಸಚಿವ ಕೆ. ರೆಹಮಾನ್ ಖಾನ್ ಸಮಿತಿ ಕೆಲವು ಶಿಫಾರಸು ಮಾಡಿತ್ತು. ಅವುಗಳಲ್ಲಿ ಆಗಿನ ಯುಪಿಎ ಸರ್ಕಾರ ಕೆಲವೇ ಕೆಲವು ಅಂಶಗಳನ್ನು ತಿದ್ದುಪಡಿ ಮಾಡಿ ಕೆಲವು ಅಂಶಗಳನ್ನು ಹಾಗೇ ಬಿಟ್ಟಿತ್ತು. ಮುಖ್ಯವಾಗಿ ದೇಶದ ಕಾನೂನು ಬಹಳ ದೊಡ್ಡದು, ಸಂವಿಧಾನ ದೊಡ್ಡದು. 1990 ಹಾಗೂ 2013ರ ಕಾಯ್ದೆಯಲ್ಲಿ ಎಲ್ಲ ಕಾನೂನಿಗಿಂತ ವಕ್ಫ್ ದೊಡ್ಡದು ಎಂದು ಹೇಳಿದೆ. ಸುಪ್ರೀಂ ಕೋರ್ಟ್ ಕೂಡ ಇದರಲ್ಲಿ ಮಧ್ಯಸ್ಥಿಕೆ ವಹಿಸದಂತೆ ಮಾಡಲಾಗಿದೆ. ಅದನ್ನು ಸರಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ. ಇನ್ನೊಂದು ಇದರಲ್ಲಿ ಸಾಕಷ್ಟು ವ್ಯಾಜ್ಯಗಳಿವೆ. ಮುಸಲ್ಮಾನರ ಆಸ್ತಿಯೇ ವಕ್ಫ್ ಗೆ ಹೋಗಿದೆ. ವಕ್ಸ್ ಆಸ್ತಿಯೇ ಕಾಂಗ್ರೆಸ್ ನಾಯಕರ ಕೈಗೆ ಹೋಗಿದೆ. ಕರ್ನಾಟಕದಲ್ಲಿ ವಕ್ಫ್ ಆಸ್ತಿ ಕಾಂಗ್ರೆಸ್ ನಾಯಕರ ಕೈಯಲ್ಲಿರುವ ಬಗ್ಗೆ ದೊಡ್ಡ ವರದಿಯೇ ಇದೆ. ಸುಮಾರು 1500 ವರ್ಷಗಳ ಇತಿಹಾಸ ಹೊಂದಿರುವ ದೇವಸ್ಥಾನ ವಕ್ಫ್ ಆಸ್ತಿ ಎಂದು ಮಾಡಲಾಗಿದೆ.

ಸರ್ಕಾರದ ಆಸ್ತಿ ವಕ್ಫ್ ಆಸ್ತಿ ಎನ್ನಲಾಗಿದೆ. ಬೇರೆ ಎಲ್ಲಾ ಸಮುದಾಯಗಳಿಗೆ ಕಂದಾಯ ಕಾಯ್ದೆಯೇ ಸುಪ್ರೀಂ ಆಗಿದೆ. ಆದರೆ, ವಕ್ಫ್ ಗೆ ಮಾತ್ರ ಅನ್ವಯ ಆಗುವುದಿಲ್ಲ. ಕಂದಾಯ ಕಾಯ್ದೆಯೇ ಸುಪ್ರೀಂ ಆಗಬೇಕು. ಅದನ್ನು ಸರಿಪಡಿಸಲು ಜಂಟಿಸದನ ಸಮಿತಿ ಸಾಕಷ್ಟು ಚರ್ಚೆ ಮಾಡಿದೆ. ದೇಶಾದ್ಯಂತ ತಿರುಗಾಡಿ ಅಭಿಪ್ರಾಯ ಪಡೆದಿದೆ. ಮುಸ್ಲಿಂ ಸೇರಿದಂತೆ ಹಲವಾರು ಸಮುದಾಯಗಳು, ಕ್ರಿಶ್ಚಿಯನ್ನರೂ, ಅಜೀರ್ ದರ್ಗಾದವರು ಇದನ್ನು ಸ್ವಾಗತ ಮಾಡಿದ್ದಾರೆ. ಈ ಬಗ್ಗೆ ಚರ್ಚೆಯಾಗಲಿ' ಎಂದರು. ಯಾವುದೇ ವ್ಯಾಜ್ಯ ಇಲ್ಲದ ವಕ್ಸ್ ಆಸ್ತಿ ವಕ್ಫ್ ಆಸ್ತಿಯಾಗಿಯೇ ಉಳಿಯಲಿದೆ. ದೇಶದ ಕಾನೂನು ಏನಿದೆ ಅದರ ಅನುಗುಣವಾಗಿ ತಿದ್ದುಪಡಿ ಮಾಡಲಾಗಿದೆ. ಸತ್ಯ ಹೇಳಬೇಕೆಂದರೆ ಇಡೀ ದೇಶದ ತುಂಬ ವಕ್ಸ್ ಆಸ್ತಿಯನ್ನು ಕಬಳಿಕೆ ಮಾಡಿದವರೇ ಕಾಂಗ್ರೆಸ್ನವರು, ಅವರ ಕಬಳಿಕೆಯನ್ನು ಮುಚ್ಚಿ ಹಾಕಲು ವಕ್ಸ್ ಕಾಯ್ದೆ ತಿದ್ದುಪಡಿಗೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ ಎಂದರು. ಮುಸ್ಲೀಮ್ ಮಂಡಳಿಯಲ್ಲಿ ಹಿಂದುಗಳನ್ನು ಸದಸ್ಯರನ್ನಾಗಿ ಮಾಡಿರುವ ಬಗ್ಗೆ ಕಾಂಗ್ರೆಸ್ ಆಕ್ಷೇಪ ವ್ಯಕ್ತಪಡಿಸುತ್ತಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕರಾವಳಿ ಭಾಗದಲ್ಲಿ ಮುಜರಾಯಿ ಇಲಾಖೆಯ ಅನೇಕ ದೇವಸ್ಥಾನಗಳಲ್ಲಿ ಮುಸ್ಲಿಮರೇ ಆಡಳಿತಾಧಿಕಾರಿಗಳಾಗಿದ್ದರು ಎಂದು ಹೇಳಿದರು.

# ದೆಹಲಿಯಲ್ಲಿ ಭವ್ಯವಾಗಿ ನಿರ್ಮಾಣಗೊಂಡ ಕರ್ನಾಟಕ ಭವನ-1ರ (ಕಾವೇರಿ) ಕಟ್ಟಡ ನಿರ್ಮಾಣಕ್ಕೆ ಶ್ರಮಿಸಿದ ಇಂಜಿನಿಯರುಗಳು, ನಿರ್ಮಾಣ ಸಂಸ್ಥೆಯ ಮುಖ್ಯಸ್ಥರಿಗೆ ಸಿಎಂ, ಡಿಸಿಎಂ, ಲೋಕೋಪಯೋಗಿ ಸಚಿವರಿಂದ ಸನ್ಮಾನ



ಸಿ.ಸತ್ಯನಾರಾಯಣ ಲೋಕೋಪಯೋಗಿ ಇಲಾಖೆ ಕಾರ್ಯದರ್ಶಿಗಳು



ಸಿ ಮತ್ತು ಬಿ. ದಕ್ಷಿಣ ವಲಯ ಮುಖ್ಯ ಇಂಜಿನಿಯರ್ ಸಿ.ಮಂಜಪ್ಪ



ಜೆ.ಪ್ರಕಾಶ್ ಎಕ್ಸಿಕ್ಯುಟೀವ್ ಇಂಜಿನಿಯರ್, ನಂ.1 ಕಟ್ಟಡ ವಿಭಾಗ



ವಿ.ಶೇಖರ್ ವ್ಯವಸ್ಥಾಪಕ ನಿರ್ದೇಶಕರು, ಬಾಲಾಜಿಕೃಪಾ ಪ್ರಾಜೆಕ್ಟ್ಸ್ ಪ್ರೈ. ಲಿಮಿಟೆಡ್.

# ಡಿಲಿಮಿಟೇಶನ್: ಮೋದಿ ಬಳಿ ಸರ್ವಪಕ್ಷ ನಿಯೋಗ ಒಯ್ಯಲಿರುವ ಸ್ಟಾಲಿನ್



**ನವದೆಹಲಿ, ಏ. 2:** ಕ್ಷೇತ್ರ ಪುನರ್ವಿಂಗ 'ಡನೆಗೆ ಸಂಬಂಧಿಸಿದಂತೆ ರಚಿಸಲಾದ ಜಂಟಿ ಕ್ರಿಯಾ ಸಮಿತಿಯ (ಜೆಎಸಿ) ಮೊದಲ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಕುರಿತು ವಿವರಿಸಲು ಪ್ರಧಾನಿ ನರೇಂದ್ರ ಮೋದಿ ಬಳಿಗೆ ವಿವಿಧ ಪಕ್ಷಗಳ ಸಂಸದರ ನಿಯೋಗ ಕೊಂಡೊಯ್ಯಲು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ ಸ್ಟಾಲಿನ್ ಮುಂದಾಗಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪ್ರಧಾನಿಗೆ ಬರೆದಿರುವ ಪತ್ರದ ಪ್ರತಿಯನ್ನು ಹಂಚಿಕೊಂಡಿರುವ ಸ್ಟಾಲಿನ್, ಮಾರ್ಚ್ 22ರಂದು ನಡೆದ ಸಭೆಯಲ್ಲಿ ವ್ಯಕ್ತವಾದ ಅಭಿಪ್ರಾಯಗಳು ರಾಜಕೀಯ ಗಡಿಗಳನ್ನು ಮೀರಿ ಸಂಸದೀಯ ಪ್ರಜಾಪ್ರಭುತ್ವದಲ್ಲಿ ನ್ಯಾಯಯುತ ಪ್ರಾತಿನಿಧ್ಯವನ್ನು ಬಯಸುವ ವಿವಿಧ ಪ್ರದೇಶಗಳ ನಾಗರಿಕರ ಬೇಡಿಕೆಗಳನ್ನು ಸಾಕಾರಗೊಳಿಸುತ್ತವೆ ಎಂದು ಹೇಳಿದ್ದಾರೆ. ಈ ವಿಷಯವು (ಕ್ಷೇತ್ರ ಪುನರ್ವಿಂಗಡನೆ) ನಮ್ಮ ರಾಜ್ಯಗಳು ಮತ್ತು ನಾಗರಿಕರಿಗೆ ಅತ್ಯಂತ ಮಹತ್ವದ್ದಾಗಿರುವುದರಿಂದ, ಜಂಟಿ ಕ್ರಿಯಾ ಸಮಿತಿಯ ಪರವಾಗಿ ಜ್ಞಾಪಕ ಪತ್ರವನ್ನು ಔಪಚಾರಿಕವಾಗಿ ಸಲ್ಲಿಸಲು ನಿಮ್ಮೊಂದಿಗೆ ಸಭೆ ನಡೆಸಲು ಸಮಯ ನೀಡುವಂತೆ ವಿನಂತಿಸುತ್ತೇನೆ ಎಂದು ಸ್ಟಾಲಿನ್ ಪತ್ರದಲ್ಲಿ ತಿಳಿಸಿದ್ದಾರೆ.

ಕ್ಷೇತ್ರ ಪುನರ್ವಿಂಗಡನೆಗೆ ಸಂಬಂಧಿಸಿದಂತೆ ರಚಿಸಿರುವ ಜಂಟಿ ಕ್ರಿಯಾ ಸಮಿತಿಯ ಮೊದಲ ಸಭೆಯಲ್ಲಿ ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಮತ್ತು ಕರ್ನಾಟಕದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಇತರ ಪಕ್ಷಗಳ ನಾಯಕರು ಭಾಗವಹಿಸಿದ್ದರು. ಸಭೆಯಲ್ಲಿ ಕ್ಷೇತ್ರ ಪುನರ್ವಿಂಗಡನೆಯನ್ನು ಮುಂದಿನ 25 ವರ್ಷಗಳ ಅವಧಿಗೆ ಮುಂದೂಡುವಂತೆ ಕೇಂದ್ರ ಸರ್ಕಾರವನ್ನು ಒ ಕ ್ ಕ ೂ ರ ಲ ಿ ನ ಿ ಂ ದ ಒತ್ತಾಯಿಸಲಾಗಿದೆ. ಪ್ರಜಾಪ್ರಭುತ್ವದ ವಿಷಯ ಮತ್ತು ಸ್ವರೂಪವನ್ನು ಸುಧಾರಿಸುವ ಕ್ಷೇತ್ರ ಪುನರ್ವಿಂಗಡನೆ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸಬೇಕು ಮತ್ತು ರಾಜಕೀಯ ಪಕ್ಷಗಳು, ರಾಜ್ಯ ಸರ್ಕಾರಗಳು ಮತ್ತು ಇತರ ಪಕ್ಷಕಾರರಿಗೆ ಚರ್ಚಿಸಲು ಮತ್ತು ಅಭಿಪ್ರಾಯ ವ್ಯಕ್ತಪಡಿಸಲು ಮುಕ್ತ ಅವಕಾಶ ನೀಡಬೇಕು ಎಂದು ಸಭೆಯಲ್ಲಿ ಆಗ್ರಹಿಸಲಾಗಿದೆ.

ಜನಸಂಖ್ಯಾ ನಿಯಂತ್ರಣ ಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದ ರಾಜ್ಯಗಳನ್ನು ರಕ್ಷಿಸಲು ಮತ್ತು ಪ್ರೋತ್ಸಾಹಿಸಲು ಕ್ಷೇತ್ರ ಪುನರ್ವಿಂಗಡನೆಗೆ ಸಂಬಂಧಿಸಿದ 42, 84 ಮತ್ತು 87 ನೇ ಸಾಂವಿಧಾನಿಕ ತಿದ್ದುಪಡಿಗಳನ್ನು ಜಾರಿಗೆ ತರಲಾಗಿದೆ. ರಾಷ್ಟ್ರೀಯ ಜನಸಂಖ್ಯಾ ಸ್ಥಿರೀಕರಣದ ಗುರಿಯನ್ನು ಇನ್ನೂ ಸಾಧಿಸಲಾಗಿಲ್ಲ. ಹಾಗಾಗಿ, 1971ರ ಜನಗಣತಿಯ ಜನಸಂಖ್ಯೆಯ ಆಧಾರದ ಮೇಲೆ ಸಂಸದೀಯ ಕ್ಷೇತ್ರಗಳ ಮೇಲಿನ ಪುನರ್ವಿಂಗಡನೆಯನ್ನು 25 ವರ್ಷಗಳವರೆಗೆ ವಿಸ್ತರಿಸಬೇಕು ಸಭೆಯಲ್ಲಿ ಒತ್ತಾಯಿಸಲಾಗಿದೆ.

# ಜಪಾನ್‌ನ ಕ್ಯೂಶುನಲ್ಲಿ 6.0 ತೀವ್ರತೆಯ ಭೂಕಂಪ

ಜಪಾನ್: ಮ್ಯಾನ್ಮಾರ್ ಬಳಿಕ ಜಪಾನ್ ನಲ್ಲಿ ಭೂಕಂಪನ ಉಂಟಾಗಿದೆ. ಜಪಾನಿನ ಕ್ಯೂಶುವಿನಲ್ಲಿ 6 ರಷ್ಟು ತೀವ್ರತೆಯಲ್ಲಿ ಭೂಕಂಪನ ಉಂಟಾಗಿದೆ. ಹೀಗಾಗಿ ಜಾಪಾನಿನ ಜನರು ಬೆಚ್ಚಿ ಬೀಳುವಂತೆ ಮಾಡಿದೆ. ಜಪಾನ್ನ ಕೂಶು ಪ್ರದೇಶದಲ್ಲಿ ಬುಧವಾರ ಸಂಜೆ ಪ್ರಬಲ ಭೂಕಂಪನ ಸಂಭವಿಸಿದೆ. ರಾಷ್ಟ್ರೀಯ ಭೂಕಂಪ ವಿಜ್ಞಾನ ಕೇಂದ್ರದ ಪ್ರಕಾರ, ಬುಧವಾರ (ಏಪ್ರಿಲ್ 2, 2025) ಕ್ಯೂಶುನಲ್ಲಿ 6.0 ತೀವ್ರತೆಯ ಭೂಕಂಪ ಸಂಭವಿಸಿದೆ. ಭೂಕಂಪನವು ಜನರಲ್ಲಿ ಭೀತಿಯನ್ನು ಉಂಟುಮಾಡಿತು, ಇದರಿಂದಾಗಿ ಅವರು ತಮ್ಮ ಮನೆಗಳು ಮತ್ತು ಕಟ್ಟಡಗಳಿಂದ ಹೊರಗೆ ಓಡಿದರು. ಆದಾಗ್ಯೂ, ಇಲ್ಲಿಯವರೆಗೆ ಗಮನಾರ್ಹ ಹಾನಿಯ ಬಗ್ಗೆ ಯಾವುದೇ ವರದಿಗಳಿಲ್ಲ.

# ಸಂಪುಟ ಪುನರಚನೆಯಾದರೆ ನನಗೂ ಅವಕಾಶ ಸಿಗಬಹುದು

## ಸಚಿವ ಸ್ಥಾನ ಸಿಗುವ ವಿಶ್ವಾಸ ವ್ಯಕ್ತಪಡಿಸಿದ ಸಲೀಂ ಅಹ್ಮದ್



**ನವದೆಹಲಿ ಏಪ್ರಿಲ್ 02:** ಮೇ ತಿಂಗಳಿಗೆ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳಾಗುತ್ತಿರುವ ಹಿನ್ನೆಲೆಯಲ್ಲಿ ಸಚಿವ ಸಂಪುಟ ಪುನರಚನೆ ಆಗುವ ಸಾಧ್ಯತೆ ಇದ್ದು ತಮಗೂ ಅವಕಾಶ ದೊರೆಯುವ ಬಗ್ಗೆ ಸಲೀಂ ಅಹ್ಮದ್ ವಿಶ್ವಾಸ ವ್ಯಕ್ತಪಡಿಸಿದರು. ನವದೆಹಲಿಯಲ್ಲಿ ಮಾತನಾಡಿದ ಅವರು ಕಳೆದ ಬಾರಿ ನನಗೆ ಅನ್ಯಾಯವಾಗಿದೆ, ಈ ಬಾರಿ ಅವಕಾಶ ನೀಡಬಹುದು ಎಂದು ಹೇಳಿದರು.

ರಾಜ್ಯದಲ್ಲಿ ಬಿಜೆಪಿ ಪ್ರತಿಭಟನೆ ಬಗ್ಗೆ ಮಾತನಾಡಿದ ಅವರು, ಸರ್ವ ಜನಾಂಗದ ಅಭಿವೃದ್ಧಿ ಬಜೆಟ್ ಕೊಟ್ಟಿದ್ದೇವೆ.ಐದು ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನ ಗೊಳಿಸಿದ್ದೇವೆ.

ಇಷ್ಟಾದರೂ ವಿಧಾನ ಸಭೆಯಲ್ಲಿ ಗಲಾಟೆ ಮಾಡುತ್ತಿರಿ. ಇಂದು ಧರಣಿ ಮಾಡುತ್ತೀರಾ ಸ್ಪೀಕರ್ ಅವರ ಮೇಲೆ ಪೇಪರ್ ಎಸೆಯುತ್ತಿರಲ್ಲ ಇದು ಸಭ್ಯತೇನಾ ಎಂದು ಅವರು ಅಸಮಾಧಾನವನ್ನು ವ್ಯಕ್ತಪಡಿಸಿದರಲ್ಲದೆ ವಿರೋಧ ಪಕ್ಷದ ಶಾಸಕರನ್ನು ಆರು ತಿಂಗಳ ಕಾಲ ಅಮಾನತ್ತುಗೊಳಿಸಿದ್ದನ್ನು ಸಮರ್ಥಿಸಿಕೊಂಡರು. ಹಾಲಿನ ಬೆಲೆ,ಡೀಸೆಲ್ ಬೆಲೆ,ಕಸದ ಸೆಸ್ ವಿದ್ಯುತ್ ದರ ಏರಿಕೆ ಬಗ್ಗೆಯೂ ಸರ್ಕಾರವನ್ನು ಸಮರ್ಥಿಸಿಕೊಂಡ ಸಲೀಂ ದರ ಹೆಚ್ಚಳ ಮಾಡದಿದ್ದರೆ ಅಭಿವೃದ್ಧಿ ಹೇಗೆ ಸಾದ್ಯ ಎಂದು ಪತ್ರಕರ್ತರಿಗೆ ಮರು ಪ್ರಶ್ನೆ ಹಾಕಿದರು. ರಾಜ್ಯವನ್ನು ಪ್ರತಿನಿಧಿಸುತ್ತಿರುವ ಐವರು ಮಂತ್ರಿಗಳು ಪ್ರಧಾನ ಮಂತ್ರಿಯವರ ಎಡ ಬಲದಲ್ಲಿ ಇದ್ದಾರೆ.

ಆದರೆ ಕರ್ನಾಟಕಕ್ಕೆ ಏನು ಮಾಡಿದ್ದಾರೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಯಾವುದೇ ಕಾರ್ಯಕ್ರಮ ತರಲಾಗುತ್ತಿಲ್ಲ ಈ ಬಗ್ಗೆ ಈ ಎಲ್ಲಾ ಸಚಿವರು ಪಶ್ಚಾತ್ತಾಪ ಪಡಬೇಕು.ಬಿಜೆಪಿಯವರು ಬೆಲೆ ಏರಿಕೆ ಬಗ್ಗೆ ಕರ್ನಾಟಕ ಸರ್ಕಾರದ ವಿರುದ್ಧ ಪ್ರತಿಭಟನೆ ಬದಲು ಕೇಂದ್ರ ಸರ್ಕಾರದ ವಿರುದ್ಧ ವಿರೋದ ಮಾಡಬೇಕು ಎಂದರು. ನಮ್ಮ ಮುಖ್ಯ ಮಂತ್ರಿಯವರು ಹಲವಾರು ಬಾರಿ ಪ್ರಧಾನ ಮಂತ್ರಿಯವರಿಗೆ ಅಹವಾಲು ಸಲ್ಲಿಸಿದ್ದಾರೆ ಆದರೆ ಕೇಂದ್ರದಿಂದ ಯಾವುದೇ ರೀತಿಯ ಸ್ಪಂದನೆ ಸಿಕ್ಕಿಲ್ಲ ಮತ್ತು ನಮಗೆ ರಾಜ್ಯದ ಪಾಲಿನ ನೆರವು ದೊರೆತಿಲ್ಲ ಅಲ್ಲದೆ ಮೇಕೆದಾಟು ಹಾಗೂ ಕಳಸಾ ಬಂಡೂರಿ ಯೋಜನೆಗಳು ಏನಾದವು ಐವತ್ತು ಸಾವಿರ ಕೋಟಿ ಧನ ಬಿಡುಗಡೆ ಬಗ್ಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದರಲ್ಲ ಏನಾಯ್ತು ಬೆಂಗಳೂರು ಅಭಿವೃದ್ಧಿಗೆ ಟನಲ್ ನಿರ್ಮಾಣಕ್ಕೆ ಪ್ರಧಾನ ಮಂತ್ರಿಯವರಿಗೆ ಸಹಾಯಕ್ಕೆಂದು ಮನವಿ ಮಾಡಿದ್ವಿ ಏನನ್ನೂ ಮಾಡಲಿಲ್ಲ ಎಂದು ಸಲೀಂ ಬೇಸರ ವ್ಯಕ್ತಪಡಿಸಿದರು.

# ಏ.22 ರಂದು ನಟ ದರ್ಶನ್ ಜಾಮೀನು ಅರ್ಜಿ ವಿಚಾರಣೆ



**ನವದೆಹಲಿ, ಏ. 2:** ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಆರೋಪಿಯಾಗಿರುವ ನಟ ದರ್ಶನ್ ಸೇರಿ ಇತರೆ ಆರೋಪಿಗಳ ಜಾಮೀನು ರದ್ದು ಕೋರಿ ಸಲ್ಲಿಸಿರುವ ಅರ್ಜಿಯನ್ನು ಏಪ್ರೀಲ್ 22 ರಂದು ವಿಚಾರಣೆ ನಡೆಸುವುದಾಗಿ ಸುಪ್ರೀಂಕೋರ್ಟ್ ಹೇಳಿದೆ. ನ್ಯಾ. ಜೆಬಿ ಪಾರ್ದಿವಾಲಾ ನೇತೃತ್ವದ ದ್ವಿ ಸದಸ್ಯ ಪೀಠದ ಮುಂದೆ ಈ ವಿಷಯವನ್ನು ಪ್ರಸ್ತಾಪಿಸಲಾಯಿತು. ಪ್ರಕರಣದ ವಿಚಾರಣೆ ಇಂದು ನಡೆಯಬೇಕಿತ್ತು, ಆದರೆ ಕಳೆದ ಬಾರಿ ಪ್ರಕರಣ ವಿಚಾರಣೆ ನಡೆಸಿದ ನ್ಯಾ. ಜೆಬಿ ಪಾರ್ದಿವಾಲಾ, ನ್ಯಾ. ಮಹಾದೇವನ್ ಪೀಠದಲ್ಲಿ ಇಂದು ನ್ಯಾ. ಪಾರ್ದಿವಾಲ್, ನ್ಯಾ. ವಿಶ್ವನಾಥನ್ ಇದ್ದರು. ಪೀಠದಲ್ಲಿ ಒಬ್ಬರು ನ್ಯಾಯಧೀಶರ ಅನುಪಸ್ಥಿತಿ ಹಿನ್ನಲೆ ಪ್ರಕರಣೆಗೆ ಬರಲಿಲ್ಲ. ಈ ಹಿನ್ನಲೆ ಪ್ರಕರಣದ ವಿಚಾರಣೆ ನಡೆಸಬೇಕು ಎಂದು ಸರ್ಕಾರದ ಪರ ವಕೀಲರಾದ ಸಿದಾರ್ಥ ಲೂಥ್ರಾ, ಅನೀಲ್ ನಿಶಾನಿ ನ್ಯಾ. ಜೆಬಿ ಪಾರ್ದಿವಾಲಾ ಅವರ ಮುಂದೆ ಪ್ರಸ್ತಾಪಿಸದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ದರ್ಶನ ಒರ ವಕೀಲರು ಕೌಂಟರ್ ಅಫಿಡೆವಿಟ್ ಸಲ್ಲಿಸಲು ಸಮಯ ನೀಡಬೇಕು ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾ. ಜೆ.ಬಿ ಪಾರ್ದಿವಾಲಾ ಎರಡು ವಾರದಲ್ಲಿ ಅಫಿಡೆವಿಟ್ ಸಲ್ಲಿಸಿ ಎಂದು ಸೂಚಿಸಿ ಏ.22 ಕ್ಕೆ ವಿಚಾರಣೆ ಮಡೆಸುವುದಾಗಿ ಹೇಳಿದರು. ಕರ್ನಾಟಕ ಹೈಕೋರ್ಟ್ ಡಿಸೆಂಬರ್ 13, 2024ರಂದು ದರ್ಶನ್ ಮತ್ತು ಇತರ ಆರೋಪಿಗಳಿಗೆ ಜಾಮೀನು ನೀಡಿತ್ತು. ಈ ಆದೇಶವನ್ನು ಸುಪ್ರೀಂಕೋರ್ಟ್ ನಲ್ಲಿ ಪ್ರಶ್ನಿಸಿದೆ. ಪ್ರಕರಣದ ತನಿಖೆಯಲ್ಲಿ ಪೊಲೀಸರು 3,991 ಪುಟಗಳ ದಾಖಲೆಯನ್ನು ಸಲ್ಲಿಸಿದ್ದು, ದರ್ಶನ್ ತನ್ನ ಅಭಿಮಾನಿಗಳ ಸಹಾಯದಿಂದ ಈ ಕೃತ್ಯವನ್ನು ಎಸಗಿದ್ದಾರೆ ಎಂದು ಆರೋಪಿಸಲಾಗಿದೆ.

# ಭಾರತ–ನೇಪಾಳ 10 ಒಪ್ಪಂದಗಳಿಗೆ ಸಹಿ

**ಕಟ್ಮಂಡು, ಏ.2:** ಶಿಕ್ಷಣ, ಆರೋಗ್ಯ, ಸಾಂಸ್ಕೃತಿಕ ಕ್ಷೇತ್ರಗಳಲ್ಲಿ 'ಸಾಮುದಾಯಿಕ ಅಭಿವೃದ್ಧಿ ಯೋಜನೆಗಳನ್ನು ಜಾರಿ ಮಾಡಲು ಭಾರತವು ನೇಪಾಳಕ್ಕೆ 62.5 ಕೋಟಿ ಆರ್ಥಿಕ ನೆರವು ನೀಡಲಿದೆ.

ಈ ಸಂಬಂಧ ಎರಡೂ ದೇಶಗಳು 10 ಒಪ್ಪಂದಗಳಿಗೆ ಸಹಿ ಹಾಕಿವೆ. ಭಾರತ ರಾಯಭಾರ ಕಚೇರಿಯು ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದು, 'ನೇಪಾಳದಲ್ಲಿ ಮೂರು ಶಾಲೆಗಳು, ಒಂದು ಮಠ, ಒಂದು ಇ–ಗ್ರಂಥಾಲಯ, ಎರಡು ಆಸ್ಪತ್ರೆಗಳನ್ನು ನಿರ್ಮಿಸಲು ಭಾರತವು ನೆರವು ನೀಡುತ್ತಿದೆ' ಎಂದು ಹೇಳಿದೆ. ಸಾಮುದಾಯಿಕ ಅಭಿವೃದ್ಧಿ ಯೋಜನೆಯಡಿ ಭಾರತವು ನೇಪಾಳದಲ್ಲಿ ಈವರೆಗೂ 573 ಯೋಜನೆಗಳನ್ನು ಕೈಗೆತ್ತಿಕೊಂಡಿದೆ. ಇವುಗಳಲ್ಲಿ 495 ಯೋಜನೆಗಳು ಪೂರ್ಣಗೊಂಡಿವೆ.